VOLUME: 16 | 29 JULY 2026 | ಬುಧವಾರ | RS: 2 | PAGE: 06 ISSUE: 164 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟಿ ಕಾಜಲ್ ಅಗರ್ವಾಲ್ ಅವರು ಇತ್ತೀಚೆಗೆ ಸಿನಿಮಾ ಸೆಟ್‌ನಲ್ಲಿ ತಮಗಾದ ಕಹಿ ಘಟನೆಯೊಂದನ್ನು ನೆನಪಿಸಿಕೊಂಡಿದ್ದು, ಸಹಾಯಕ ನಿರ್ದೇಶಕರೊಬ್ಬರು ಯಾವುದೇ ಅನುಮತಿ ಪಡೆಯದೇ ಅನಿರೀಕ್ಷಿತವಾಗಿ ತಮ್ಮ ಕ್ಯಾರವಾನ್‌ಗೆ ಪ್ರವೇಶಿಸಿದರು. ಅಲ್ಲದೆ ಅವರು ತಮ್ಮ ಶರ್ಟ್ ತೆಗೆದು ತನ್ನ ಎದೆಯ ಮೇಲಿದ್ದ ಟ್ಯಾಟೂ ತೋರಿಸಿದ ಆಘಾತಕಾರಿ ಪ್ರಸಂಗವನ್ನು ಬಹಿರಂಗಪಡಿಸಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ




ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ನೀರಿನ ಕೊರತೆಯಲ್ಲೂ ನೀರು ಬಿಡುವಂತೆ ಆದೇಶ...!

ನವದೆಹಲಿ: ಕರ್ನಾಟಕದಲ್ಲಿ ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಬರದ ಆತಂಕ ಎದುರಾಗಿದೆ. ರೈತರು ಬೆಳೆಗಳಿಗೆ ನೀರಿನ ಕೊರತೆ ಎದುರಿಸುತ್ತಿದ್ದರೆ, ರಾಜ್ಯದ ಜಲಾಶಯಗಳಲ್ಲೂ ನೀರಿನ ಸಂಗ್ರಹ ಗಣನೀಯವಾಗಿ ಕುಸಿದಿದೆ. ಇಂತಹ ಪರಿಸ್ಥಿತಿಯ ನಡುವೆಯೂ ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಮಹತ್ವದ ಸೂಚನೆ ನೀಡಿದೆ. ನವದೆಹಲಿಯಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಕರ್ನಾಟಕ, ತಮಿಳುನಾಡು, ಕೇರಳ ಮತ್ತು ಪುದುಚೇರಿ ಪ್ರತಿನಿಧಿಗಳೊಂದಿಗೆ ವರ್ಚುವಲ್ ಮೂಲಕ ಚರ್ಚೆ ನಡೆಸಿದ ಕಾವೇರಿ ನೀರು ನಿಯಂತ್ರಣ ಸಮಿತಿ, ಮುಂದಿನ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸುವಂತೆ ಸೂಚಿಸಿದೆ. ಇದರಂತೆ 15 ದಿನಗಳಲ್ಲಿ ಒಟ್ಟು ಸುಮಾರು 4 ಟಿಎಂಸಿ ನೀರು ಹರಿಸಬೇಕಾಗುತ್ತದೆ. ಆದರೆ, ಕರ್ನಾಟಕ ಸರ್ಕಾರ ಈ ಸೂಚನೆಗೆ ಆಕ್ಷೇಪ ವ್ಯಕ್ತಪಡಿಸಿದೆ.

ಕರ್ನಾಟಕದಲ್ಲಿ ಜುಲೈ ತಿಂಗಳಲ್ಲಿ ಕೆಲವೆಡೆ ಮಾತ್ರ ಅಲ್ಪ ಪ್ರಮಾಣದ ಮಳೆಯಾಗಿದ್ದು, ಪ್ರಮುಖ ಜಲಾಶಯಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ನೀರು ಸಂಗ್ರಹವಾಗಿಲ್ಲ. ಅಲ್ಲದೆ, ಮುಂಗಾರು ಮತ್ತೆ ಚುರುಕಾಗುವ ಸಾಧ್ಯತೆಯೂ ಕಡಿಮೆ ಇರುವುದರಿಂದ ತಮಿಳುನಾಡಿಗೆ ನೀರು ಹರಿಸುವುದು ಕಷ್ಟಸಾಧ್ಯ ಎಂದು ರಾಜ್ಯದ ಅಧಿಕಾರಿಗಳು ಸಭೆಯಲ್ಲಿ ವಾದಿಸಿದ್ದಾರೆ. ಪ್ರಸ್ತುತ ಜಲಾಶಯಗಳಲ್ಲಿ ಲಭ್ಯವಿರುವ ನೀರನ್ನು ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸಬೇಕಾಗಿದೆ. ರಾಜ್ಯವು ಹಿಂದೆಂದೂ ಕಂಡಿರದ ಮಳೆ ಕೊರತೆಯನ್ನು ಎದುರಿಸುತ್ತಿದ್ದು, ಲಭ್ಯವಿರುವ ನೀರಿನ ಪ್ರಮಾಣವೂ ಸೀಮಿತವಾಗಿದೆ ಎಂದು ಕರ್ನಾಟಕ ತನ್ನ ವಾದವನ್ನು ಮಂಡಿಸಿದೆ. ಆದರೆ, ಕರ್ನಾಟಕದ ಮನವಿಯನ್ನು ಪರಿಗಣಿಸದೆ ಮುಂದಿನ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ನೀರು ಹರಿಸುವಂತೆ ಸೂಚಿಸಿರುವುದು ರಾಜ್ಯದಲ್ಲಿ ಆತಂಕಕ್ಕೆ ಕಾರಣವಾಗಿದೆ. ರಾಜ್ಯದಲ್ಲಿ ತೀವ್ರ ಮಳೆ ಕೊರತೆಯಿಂದ ಜಲಾಶಯಗಳ ನೀರಿನ ಮಟ್ಟ ಕುಸಿದಿರುವ ಸಂದರ್ಭದಲ್ಲಿ ಈ ನಿರ್ಧಾರದಿಂದ ರೈತರು ಮಾತ್ರವಲ್ಲದೆ ಬೆಂಗಳೂರು ಸೇರಿದಂತೆ ಹಲವು ನಗರಗಳ ಕುಡಿಯುವ ನೀರಿನ ಬಗ್ಗೆಯೂ ಆತಂಕ ವ್ಯಕ್ತವಾಗಿದೆ.



> ಇದರಿಂದ ಸುಮಾರು 4 ಟಿಎಂಸಿ ನೀರು ಹರಿಸಬೇಕಾಗುತ್ತದೆ. ಈ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಬಗ್ಗೆ ಚರ್ಚಿಸಲಾಗುವುದು. ಈ ಕುರಿತು ಮುಖ್ಯಮಂತ್ರಿ ಅವರೊಂದಿಗೆ ಮಾತುಕತೆ ನಡೆಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಪ್ರಸ್ತುತ ಜಲಾಶಯಗಳಲ್ಲಿ ಒಟ್ಟು 17.039 ಟಿಎಂಸಿ ನೀರು ಸಂಗ್ರಹವಿದೆ. ಇದರಲ್ಲಿ ಸುಮಾರು 5 ಟಿಎಂಸಿ ಡೆಡ್ ಸ್ಟೋರೇಜ್ ಆಗಿದ್ದು, ಬಳಕೆಗೆ ಸುಮಾರು 12 ಟಿಎಂಸಿ ನೀರು ಮಾತ್ರ ಲಭ್ಯವಿದೆ.

ಇದರಿಂದ ಸುಮಾರು 4 ಟಿಎಂಸಿ ನೀರು ಹರಿಸಬೇಕಾಗುತ್ತದೆ. ಈ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸುವ ಬಗ್ಗೆ ಚರ್ಚಿಸಲಾಗುವುದು. ಈ ಕುರಿತು ಮುಖ್ಯಮಂತ್ರಿ ಅವರೊಂದಿಗೆ ಮಾತುಕತೆ ನಡೆಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಪ್ರಸ್ತುತ ಜಲಾಶಯಗಳಲ್ಲಿ ಒಟ್ಟು 17.039 ಟಿಎಂಸಿ ನೀರು ಸಂಗ್ರಹವಿದೆ. ಇದರಲ್ಲಿ ಸುಮಾರು 5 ಟಿಎಂಸಿ ಡೆಡ್ ಸ್ಟೋರೇಜ್ ಆಗಿದ್ದು, ಬಳಕೆಗೆ ಸುಮಾರು 12 ಟಿಎಂಸಿ ನೀರು ಮಾತ್ರ ಲಭ್ಯವಿದೆ. ಇಂದಿನ ಒಳಹರಿವು 2,552 ಕ್ಯೂಸೆಕ್ ಇದ್ದರೆ, ಹೊರಹರಿವು 1,745 ಕ್ಯೂಸೆಕ್ ಇದೆ. ಜಲಾನಯನ ಪ್ರದೇಶದಲ್ಲಿ ಮಳೆ ಮುಂದುವರಿಯದಿದ್ದರೆ ಒಳಹರಿವಿನ ಪ್ರಮಾಣ ಮತ್ತಷ್ಟು ಕುಸಿಯುವ ಸಾಧ್ಯತೆಯಿದೆ.

ಜೂನ್ ತಿಂಗಳಲ್ಲಿ 9.19 ಟಿಎಂಸಿ ಹಾಗೂ ಜುಲೈನಲ್ಲಿ 31.42 ಟಿಎಂಸಿ ನೀರು ಹರಿಸಬೇಕಾಗಿತ್ತು. ಈವರೆಗೆ ತಮಿಳುನಾಡಿಗೆ ಸುಮಾರು 3.5 ಟಿಎಂಸಿ ನೀರು ಹರಿಸಲಾಗಿದೆ. ಇದೀಗ ಮುಂದಿನ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ನೀರು ಹರಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ, ಕರ್ನಾಟಕದ ಜಲಸಂಪನ್ಮೂಲ ಸ್ಥಿತಿ ಹಾಗೂ ಕುಡಿಯುವ ನೀರಿನ ಅಗತ್ಯತೆಗಳ ಕುರಿತು ರಾಜ್ಯ ಸರ್ಕಾರ ಮುಂದಿನ ದಿನಗಳಲ್ಲಿ ಯಾವ ನಿರ್ಧಾರ ಕೈಗೊಳ್ಳಲಿದೆ ಎಂಬುದು ಕುತೂಹಲ ಮೂಡಿಸಿದೆ.

# ಆಗಸ್ಟ್ 1ರಂದು ಮೈಸೂರಿನ ವಿವೇಕ ಸ್ಮಾರಕ ಉದ್ಘಾಟನೆಗೆ ಪ್ರಧಾನಿಮೋದಿ

ಮೈಸೂರು: ಮೈಸೂರಿನ ವಿವೇಕ ಸ್ಮಾರಕವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಆಗಸ್ಟ್ 1ರಂದು ಉದ್ಘಾಟಿಸಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಆಗಸ್ಟ್ 1ರಂದು ಮಧ್ಯಾಹ್ನ 3.30ಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಮೈಸೂರಿಗೆ ಆಗಮಿಸಲಿದ್ದು, ವಿವೇಕ ಸ್ಮಾರಕಕ್ಕೆ ಭೇಟಿ ನೀಡಿ ಉದ್ಘಾಟನೆ ನೆರವೇರಿಸಲಿದ್ದಾರೆ. ಬಳಿಕ ಸ್ಮಾರಕದ ಪಕ್ಕದ ಮೈದಾನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಸುಮಾರು 8ರಿಂದ 10 ಸಾವಿರ ಮಕ್ಕಳು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಅವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸುವಂತೆ ಪರಮಪೂಜ್ಯ ಸ್ವಾಮೀಜಿ ಮನವಿ ಮಾಡಿದ್ದರು. ಈ ಕುರಿತು ತಮ್ಮ ಬಳಿಯೂ ಪ್ರಸ್ತಾಪಿಸಿದ್ದರು ಎಂದು ವಿಜಯೇಂದ್ರ ತಿಳಿಸಿದರು.

ಕೆ.ಆರ್. ನಗರದ ಗ್ರಾಮದ ಬಡ ಕುಟುಂಬದ ಹಿನ್ನೆಲೆಯಿಂದ ಬಂದಿರುವ ಶಿಲ್ಪಾ ಅವರು ಕಾಮನ್‌ವೆಲ್ತ್ ಕ್ರೀಡಾಕೂಟದ ಗುಂಡು ಎಸೆತ ಸ್ಪರ್ಧೆಯಲ್ಲಿ ಪದಕ ಗೆದ್ದಿರುವುದು ಕರ್ನಾಟಕ ಮಾತ್ರವಲ್ಲದೆ ಇಡೀ ದೇಶಕ್ಕೆ ಹೆಮ್ಮೆಯ ಸಂಗತಿ ಎಂದು ವಿಜಯೇಂದ್ರ ಅಭಿನಂದಿಸಿದರು.

ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚಿಸಿರುವ ಕುರಿತು ಪ್ರತಿಕ್ರಿಯಿಸಿದ ವಿಜಯೇಂದ್ರ,



ಪ್ರಾಧಿಕಾರ ಸೂಚನೆ ನೀಡುವ ಮೊದಲೇ ಕಾಂಗ್ರೆಸ್ ಸರ್ಕಾರ ಯಥೇಚ್ಛವಾಗಿ ನೀರು ಹರಿಸಿದೆ ಎಂದು ಆರೋಪಿಸಿದರು.

ಕಾವೇರಿ ಕೊಳ್ಳದ ರೈತರು ಯಾರೂ ಬಿತ್ತನೆ ಮಾಡಬಾರದು ಎಂದು ಮುಖ್ಯಮಂತ್ರಿ ಹೇಳಿಕೆ ನೀಡಿದ್ದರು. ಆದರೆ, ಸರ್ಕಾರದ ನಡೆ 'ಮನೆಗೆ ಮಾರಿ, ಊರಿಗೆ ಉಪಕಾರಿ' ಎಂಬಂತಿದೆ ಎಂದು ಟೀಕಿಸಿದರು. ಕಾವೇರಿ ಕೊಳ್ಳದ ಹಲವು ಪ್ರದೇಶಗಳಲ್ಲಿ ರೈತರ ಜಾನುವಾರುಗಳಿಗೆ ಕುಡಿಯಲು ನೀರಿಲ್ಲದ ಪರಿಸ್ಥಿತಿ ಇದೆ. ನ್ಯಾಯಾಧಿಕರಣದ ಆದೇಶಕ್ಕೂ ಮುನ್ನವೇ ನೀರು ಹರಿಸಲಾಗಿದೆ. ಸಂಬಂಧಿತ ನ್ಯಾಯಾಧಿಕರಣದ ಮುಂದೆ ರಾಜ್ಯದ ಪರವಾಗಿ ಸಮರ್ಪಕವಾಗಿ ವಾದ ಮಂಡಿಸದಿರುವುದೇ ಇಂತಹ ಪರಿಸ್ಥಿತಿಗೆ ಕಾರಣವಾಗಿದೆ ಎಂದು ಅವರು ಆರೋಪಿಸಿದರು.

ಕಾವೇರಿ ಕೊಳ್ಳದ ರೈತರ ರಕ್ಷಣೆ ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿಗಳ ಕರ್ತವ್ಯವಾಗಿದೆ. ಹೀಗಾಗಿ ಯಾವುದೇ ವಿಳಂಬ ಮಾಡದೆ ತಕ್ಷಣ ಮರುಪರಿಶೀಲನಾ ಅರ್ಜಿ ಸಲ್ಲಿಸಬೇಕು. ಅಲ್ಲದೆ, ರಾಜ್ಯದ ವಾಸ್ತವ ಪರಿಸ್ಥಿತಿಯನ್ನು ಸಮರ್ಥವಾಗಿ ಮಂಡಿಸುವ ಮೂಲಕ ರೈತರ ಹಿತವನ್ನು ಕಾಪಾಡಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಯಾರನ್ನೋ ಸಂತೋಷಪಡಿಸಲು ರಾಜ್ಯದ ರೈತರಿಗೆ ಅನ್ಯಾಯ ಮಾಡುವ ಕೆಲಸವನ್ನು ಸರ್ಕಾರ ಮಾಡಬಾರದು. ರೈತರ ಹಿತವನ್ನು ರಕ್ಷಿಸುವಲ್ಲಿ ಮುಖ್ಯಮಂತ್ರಿ ಮುತುವರ್ಜಿ ವಹಿಸಬೇಕು ಎಂದು ಆಗ್ರಹಿಸಿದರು.

ಕಾವೇರಿ ನೀರು ಹರಿಸುವ ಕುರಿತು ಇಂತಹ ಆದೇಶ ಹೊರಬರುವ ಸಾಧ್ಯತೆ ಮುಖ್ಯಮಂತ್ರಿಗಳಿಗೆ ತಿಳಿದಿರಲಿಲ್ಲವೇ? ಆದೇಶ ಬರುವ ಮುನ್ನವೇ ನೀರು ಹರಿಸಿದ್ದು ಏಕೆ? ಕಾವೇರಿ ಜಲಾನಯನ ಪ್ರದೇಶದಲ್ಲಿ ಎಷ್ಟು ನೀರಿದೆ ಎಂಬ ಮಾಹಿತಿ ಸರ್ಕಾರಕ್ಕೆ ಇರಲಿಲ್ಲವೇ ಎಂದು ವಿಜಯೇಂದ್ರ ಪ್ರಶ್ನಿಸಿದರು.

# ಆ.13ರಿಂದ ಮುಂಗಾರು ಅಧಿವೇಶನ

ಬೆಂಗಳೂರು: ರಾಜ್ಯ ವಿಧಾನಮಂಡಲದ ಮುಂಗಾರು ಅಧಿವೇಶನ ಆಗಸ್ಟ್ 13ರಿಂದ ಆರಂಭವಾಗಲಿದ್ದು, ಈ ಸಂಬಂಧ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ಮಂಗಳವಾರ ಅಧಿಕೃತ ಅಧಿಸೂಚನೆ ಹೊರಡಿಸಿದೆ.

ಬೆಂಗಳೂರಿನ ವಿಧಾನಸೌಧದಲ್ಲಿ ವಿಧಾನಮಂಡಲದ ಉಭಯ ಸದನಗಳ ಮುಂಗಾರು ಅಧಿವೇಶನ ಆಗಸ್ಟ್ 13ರಂದು ಬೆಳಗ್ಗೆ 11 ಗಂಟೆಗೆ ಆರಂಭವಾಗಲಿದ್ದು, ಆಗಸ್ಟ್ 27ರವರೆಗೆ ನಡೆಯಲಿದೆ.

ಮುಂಗಾರು ಅಧಿವೇಶನಕ್ಕೂ ಮುನ್ನ ರಾಜ್ಯ ಸಚಿವ ಸಂಪುಟ ವಿಸ್ತರಣೆಯಾಗುವ ಸಾಧ್ಯತೆಯಿದ್ದು, ಹೊಸ ಸಚಿವರು ಸಂಪುಟಕ್ಕೆ ಸೇರ್ಪಡೆಯಾಗುವ ನಿರೀಕ್ಷೆ ಇದೆ. ಸಂಪುಟ ಪುನರ್‌ರಚನೆಯಲ್ಲಿ ಶೇ.75ರಷ್ಟು ಹೊಸಬರು ಹಾಗೂ ಶೇ.25ರಷ್ಟು ಹಾಲಿ ಸಚಿವರಿಗೆ ಅವಕಾಶ ಸಿಗಲಿದೆ ಎಂಬ ಚರ್ಚೆ ನಡೆಯುತ್ತಿದೆ.

ಮುಂಗಾರು ಅಧಿವೇಶನದಲ್ಲಿ ರಾಜ್ಯವನ್ನು ಕಾಡುತ್ತಿರುವ ಹಲವು ಪ್ರಮುಖ ಸಮಸ್ಯೆಗಳು ಹಾಗೂ ರಾಜಕೀಯವಾಗಿ ಮಹತ್ವ ಪಡೆದಿರುವ ವಿಷಯಗಳು ಪ್ರತಿಧ್ವನಿಸುವ ಸಾಧ್ಯತೆಯಿದೆ. ಕೆಪಿಎಸ್‌ಸಿ ನೇಮಕಾತಿ ಅಕ್ರಮ, ಬರ ಪರಿಸ್ಥಿತಿ ಮತ್ತು ಬರ ಪರಿಹಾರ ಕ್ರಮಗಳು, ಪಂಚ ಗ್ಯಾರಂಟಿ ಯೋಜನೆಗಳಿಂದ ಉಂಟಾಗಿರುವ ಆರ್ಥಿಕ ಹೊರೆ ಹಾಗೂ ಯೋಜನೆಗಳ ಪರಿಷ್ಕರಣೆ ಕುರಿತು ಪ್ರತಿಪಕ್ಷಗಳು ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳುವ ಸಾಧ್ಯತೆಯಿದೆ. ಇದರ ಜೊತೆಗೆ ಬಿಡದಿ ಟೌನ್‌ಶಿಪ್ ಯೋಜನೆ, ಬಿಜೆಪಿ ಶಾಸಕರ ಮೇಲೆ ಮೊಟ್ಟೆ ಎಸೆದು ಹಲ್ಲೆ ನಡೆಸಿದ ಪ್ರಕರಣ, ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ, ಆರ್‌ಎಸ್‌ಎಸ್ ನೋಂದಣಿ ವಿಚಾರ ಮತ್ತು ರಾಮಮಂದಿರ ದೇಣಿಗೆ ದುರ್ಬಳಕೆ ಆರೋಪವೂ ಅಧಿವೇಶನದಲ್ಲಿ ಚರ್ಚೆಗೆ ಬರುವ ಸಾಧ್ಯತೆಯಿದೆ.




# ಸೈಟ್ ಸ್ವಚ್ಛಗೊಳಿಸಿ, ಇಲ್ಲವಾದರೆ ದಂಡಕಟ್ಟಿ..!

ಬೆಂಗಳೂರು: ಬೆಂಗಳೂರು ನಗರವನ್ನು ಸ್ವಚ್ಛ, ಸುಂದರ ಹಾಗೂ ವಾಸಯೋಗ್ಯ ನಗರವನ್ನಾಗಿಸುವ ಉದ್ದೇಶದಿಂದ ಆಗಸ್ಟ್ 2026ರಲ್ಲಿ 'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ನಗರದ ಎಲ್ಲಾ ಖಾಲಿ ನಿವೇಶನಗಳ ಮಾಲೀಕರು ತಮ್ಮ ನಿವೇಶನಗಳನ್ನು ಆಗಸ್ಟ್ 15ರೊಳಗೆ ಕಡ್ಡಾಯವಾಗಿ ಸ್ವಚ್ಛಗೊಳಿಸುವಂತೆ ಸೂಚಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ಎಲ್ಲಾ ನಗರ ಪಾಲಿಕೆಗಳು ಹಾಗೂ ಇತರೆ ಸಂಸ್ಥೆಗಳ ವತಿಯಿಂದ ನಗರದ ರಸ್ತೆಗಳಲ್ಲಿ ಕಂಡುಬರುವ ಕಪ್ಪುಚುಕ್ಕೆಗಳು, ಕಟ್ಟಡ ಮತ್ತು ಭಗ್ನಾವಶೇಷ ತ್ಯಾಜ್ಯ, ಮರದ ಕೊಂಬೆಗಳು, ವಿದ್ಯುತ್ ಕಂಬಗಳು ಹಾಗೂ ಪೈಪುಗಳನ್ನು ಸಾಮೂಹಿಕವಾಗಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಘನತ್ಯಾಜ್ಯ ನಿರ್ವಹಣಾ ಉಪವಿಧಿಗಳು–2020ರ ಉಪವಿಧಿ 18(1)(ಬಿ)ರ ಅನ್ವಯ ಖಾಲಿ ನಿವೇಶನಗಳನ್ನು ಸ್ವಚ್ಛ ಹಾಗೂ ನೈರ್ಮಲ್ಯಯುತ ಸ್ಥಿತಿಯಲ್ಲಿ ನಿರ್ವಹಿಸುವುದು ಮಾಲೀಕರ ಕಡ್ಡಾಯ ಜವಾಬ್ದಾರಿಯಾಗಿದೆ. ಹೀಗಾಗಿ, ನಿವೇಶನಗಳಲ್ಲಿ ಶೇಖರಣೆಯಾಗಿರುವ ತ್ಯಾಜ್ಯ ಹಾಗೂ ಕಟ್ಟಡದ ಅವಶೇಷಗಳನ್ನು ಆಗಸ್ಟ್ 15ರೊಳಗೆ ಮಾಲೀಕರೇ



ತೆರವುಗೊಳಿಸಬೇಕು.

ನಿಗದಿತ ಅವಧಿಯೊಳಗೆ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸದಿದ್ದಲ್ಲಿ, ನಗರ ಪಾಲಿಕೆಯ ವತಿಯಿಂದ ತ್ಯಾಜ್ಯ ಮತ್ತು ಭಗ್ನಾವಶೇಷಗಳನ್ನು ತೆರವುಗೊಳಿಸಿ, ಅದಕ್ಕೆ ತಗಲುವ ವೆಚ್ಚವನ್ನು ನಿವೇಶನದ ವಿಸ್ತೀರ್ಣ ಹಾಗೂ ತೆರವುಗೊಳಿಸಿದ ತ್ಯಾಜ್ಯದ ಪ್ರಮಾಣಕ್ಕೆ ಅನುಗುಣವಾಗಿ ಆಸ್ತಿ ತೆರಿಗೆಯೊಂದಿಗೆ ವಸೂಲಿ ಮಾಡಲಾಗುವುದು. ತೆರಿಗೆ ಬಾಕಿಯನ್ನು ಕರ್ನಾಟಕ ಭೂಕಂದಾಯ ಕಾಯ್ದೆ, 1964ರ ಅನ್ವಯ ವಸೂಲಿ ಮಾಡಲಾಗುವುದು.

ಆಗಸ್ಟ್ 15ರೊಳಗೆ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸದಿರುವುದನ್ನು ಸಾರ್ವಜನಿಕರು ಗಮನಿಸಿದಲ್ಲಿ, ಅಂತಹ ನಿವೇಶನಗಳ ಛಾಯಚಿತ್ರದೊಂದಿಗೆ ಜಿಪಿಎಸ್ ಸ್ಥಳ ನಿರ್ದೇಶಾಂಕಗಳನ್ನು ವಾಟ್ಸ್‌ಆಪ್ ಚಾಟ್‌ಬಾಟ್ ಸಂಖ್ಯೆ +91–9448197197ಕ್ಕೆ ಕಳುಹಿಸಿ ದೂರು ಸಲ್ಲಿಸಬಹುದು. ದೂರುದಾರರ ಮಾಹಿತಿಯನ್ನು ಗೌಪ್ಯವಾಗಿ ಇಡಲಾಗುವುದು.

ನಿವೇಶನಗಳನ್ನು ಸ್ವಚ್ಛಗೊಳಿಸಿದ ಬಳಿಕ ಮಾಲೀಕರು ಸುತ್ತಮುತ್ತ ಬೇಲಿ ಅಥವಾ ಕಾಂಪೌಂಡ್ ಗೋಡೆ ನಿರ್ಮಿಸಿಕೊಂಡು, ಅನಧಿಕೃತವಾಗಿ ತ್ಯಾಜ್ಯ ವಿಲೇವಾರಿ ಮಾಡದಂತೆ ಅಗತ್ಯ ವ್ಯವಸ್ಥೆ ಕಲ್ಪಿಸಿಕೊಳ್ಳಬೇಕು ಎಂದು ಸೂಚಿಸಲಾಗಿದೆ.

ಸ್ವಚ್ಛ, ಸುಂದರ ಹಾಗೂ ವಾಸಯೋಗ್ಯ ಬೆಂಗಳೂರಿನ ನಿರ್ಮಾಣಕ್ಕೆ ಸಾರ್ವಜನಿಕರು ಸಹಕರಿಸಿ ಕೈಜೋಡಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

ಭಾರತ ಸಾರಥಿ
29/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕಳಪೆ ಬಜಾಜ್ ಇವಿ ಆಟೋದಿಂದ ಬೇಸತ್ತು ಚಾಲಕ ಆತ್ಮಹತ್ಯೆಗೆ ಯತ್ನ: ಸ್ವಾಭಿಮಾನಿ ಚಾಲಕರ ಟ್ರೇಡ್ ಯೂನಿಯನ್ ತೀವ್ರ ಆಕ್ರೋಶ

ಬೆಂಗಳೂರು: ಬಜಾಜ್ ಶೋರೂಮ್‌ನಿಂದ ಖರೀದಿಸಿದ್ದ ಎಲೆಕ್ಟ್ರಿಕ್ ಆಟೋ ರಿಕ್ಷಾ ಪದೇ ಪದೇ ಕೆಟ್ಟು ರಸ್ತೆಯಲ್ಲಿಯೇ ನಿಲ್ಲುತ್ತಿದ್ದ ಹಿನ್ನೆಲೆಯಲ್ಲಿ ಮನನೊಂದು ಆಟೋ ಚಾಲಕರೊಬ್ಬರು ಅಂಬಾ ಬಜಾಜ್ ಶೋರೂಮ್ ಮುಂಭಾಗ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ತೀವ್ರ ಕಳವಳಕ್ಕೆ ಕಾರಣವಾಗಿದೆ ಎಂದು ಸ್ವಾಭಿಮಾನಿ ಚಾಲಕರ ಟ್ರೇಡ್ ಯೂನಿಯನ್ ಆರೋಪಿಸಿದೆ.

ಕಷ್ಟಪಟ್ಟು ದುಡಿದು ಜೀವನ ಸಾಗಿಸುತ್ತಿರುವ ಆಟೋ ಚಾಲಕರು ತಮ್ಮ ಜೀವನೋಪಾಯಕ್ಕಾಗಿ ನಂಬಿಕೆಯಿಂದ ಹೊಸ ಎಲೆಕ್ಟ್ರಿಕ್ ಆಟೋಗಳನ್ನು ಖರೀದಿಸುತ್ತಿದ್ದಾರೆ. ಆದರೆ, ಬಜಾಜ್ ಕಂಪನಿಯ ಉಠಉಠ ಇಗಿ ಆಟೋ ವಾಹನ ಖರೀದಿಸಿ ಕೇವಲ ಮೂರು ತಿಂಗಳಾಗಿದ್ದರೂ, ಈ ಅವಧಿಯಲ್ಲಿ ಸುಮಾರು 9 ರಿಂದ 10 ಬಾರಿ ವಾಹನ ರಸ್ತೆಯಲ್ಲಿಯೇ ಬ್ರೇಕ್‌ಡೌನ್ ಆಗಿದೆ ಎಂದು ಸಂಘಟನೆ ತಿಳಿಸಿದೆ.



ಹೊಸ ವಾಹನದಲ್ಲಿಯೇ ಪದೇ ಪದೇ ತಾಂತ್ರಿಕ ದೋಷಗಳು ಕಾಣಿಸಿಕೊಂಡಿದ್ದರೂ, ಶೋರೂಮ್ ಸಿಬ್ಬಂದಿ ಹಾಗೂ ಕಂಪನಿಯು ಸೂಕ್ತ ಪರಿಹಾರ ನೀಡದೆ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಲಾಗಿದೆ. ಇದರಿಂದ ಬಾಧಿತ ಚಾಲಕರು ತೀವ್ರ ಮಾನಸಿಕ ಹಾಗೂ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಸಂಘಟನೆ ಕಳವಳ ವ್ಯಕ್ತಪಡಿಸಿದೆ.

ಈಗಾಗಲೇ 'ಶಕ್ತಿ ಯೋಜನೆ' ಜಾರಿಯಾದ ನಂತರ ಆಟೋ ಚಾಲಕರ ದಿನನಿತ್ಯದ ಆದಾಯ ಕುಸಿದಿದ್ದು, ಅನೇಕ ಚಾಲಕರು ಜೀವನ ನಿರ್ವಹಣೆಗೆ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಗುಣಮಟ್ಟದ ಕುರಿತು ಪ್ರಶ್ನೆಗಳಿರುವ ಎಲೆಕ್ಟ್ರಿಕ್ ಆಟೋಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡುವ ಮೂಲಕ ಚಾಲಕರ ಸಮುದಾಯಕ್ಕೆ ಅನ್ಯಾಯವಾಗುತ್ತಿದೆ ಎಂದು ಸ್ವಾಭಿಮಾನಿ ಚಾಲಕರ ಟ್ರೇಡ್ ಯೂನಿಯನ್ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಸೂಕ್ತ ಗುಣಮಟ್ಟ ಮತ್ತು ವಿಶ್ವಾಸಾರ್ಹತೆ ಇಲ್ಲದ ವಾಹನಗಳನ್ನು ಮಾರಾಟ ಮಾಡುವ ಮೂಲಕ ಚಾಲಕರ ಜೀವ ಹಾಗೂ ಜೀವನೋಪಾಯದೊಂದಿಗೆ ಆಟವಾಡಲಾಗುತ್ತಿದೆ. ಈ ಕುರಿತು ಸಂಬಂಧಪಟ್ಟ ಕಂಪನಿ, ಶೋರೂಮ್, ಸರ್ಕಾರ ಹಾಗೂ ಸಾರಿಗೆ ಇಲಾಖೆ ತಕ್ಷಣವೇ ಮಧ್ಯಪ್ರವೇಶಿಸಿ ನ್ಯಾಯ ಒದಗಿಸಬೇಕು ಎಂದು ಸಂಘಟನೆ ಆಗ್ರಹಿಸಿದೆ.

ಸಂಘಟನೆಯ ಪ್ರಮುಖ ಬೇಡಿಕೆಗಳು:

ಆತ್ಮಹತ್ಯೆಗೆ ಯತ್ನಿಸಿದ ಬಾಧಿತ ಆಟೋ ಚಾಲಕರಿಗೆ ತಕ್ಷಣವೇ ಸೂಕ್ತ ಹಾಗೂ ಪೂರ್ಣ ನಷ್ಟಪರಿಹಾರ ನೀಡಬೇಕು.

ತಾಂತ್ರಿಕ ದೋಷಗಳಿಂದ ಕೂಡಿರುವ ಕಳಪೆ ಮಟ್ಟದ ಇವಿ ಆಟೋವನ್ನು ತಕ್ಷಣವೇ ವಾಪಸ್ ಪಡೆದು, ಹೊಸ ಹಾಗೂ ಉತ್ತಮ ಗುಣಮಟ್ಟದ ವಾಹನವನ್ನು ನೀಡಬೇಕು ಅಥವಾ ವಾಹನ ಖರೀದಿಗೆ ಪಾವತಿಸಿರುವ ಸಂಪೂರ್ಣ ಹಣವನ್ನು ಹಿಂತಿರುಗಿಸಬೇಕು.

ಕಳಪೆ ವಾಹನ ಮಾರಾಟ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಬಜಾಜ್ ಕಂಪನಿ ಹಾಗೂ ಅಂಬಾ ಬಜಾಜ್ ಶೋರೂಮ್ ವಿರುದ್ಧ ಸಮಗ್ರ ತನಿಖೆ ನಡೆಸಿ, ಅಗತ್ಯ ಕಾನೂನು ಕ್ರಮ ಕೈಗೊಳ್ಳಬೇಕು.

ಮಾರುಕಟ್ಟೆಯಲ್ಲಿ ಮಾರಾಟವಾಗುತ್ತಿರುವ ಎಲೆಕ್ಟ್ರಿಕ್ ಆಟೋ ರಿಕ್ಷಾಗಳ ಗುಣಮಟ್ಟವನ್ನು ಸಾರಿಗೆ ಇಲಾಖೆ ತಕ್ಷಣವೇ ಪರಿಶೀಲಿಸಬೇಕು.

ಆಟೋ ಚಾಲಕರಿಗೆ ಆಗುತ್ತಿರುವ ಆರ್ಥಿಕ ಶೋಷಣೆ ಮತ್ತು ಅನ್ಯಾಯವನ್ನು ತಡೆಯಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು.

ಆಟೋ ಚಾಲಕರ ಹಕ್ಕುಗಳ ರಕ್ಷಣೆ ಹಾಗೂ ಈ ಪ್ರಕರಣದಲ್ಲಿ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸ್ವಾಭಿಮಾನಿ ಚಾಲಕರ ಟ್ರೇಡ್ ಯೂನಿಯನ್ ಹೋರಾಟವನ್ನು ಮುಂದುವರಿಸಲಿದೆ. ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಕಂಪನಿಯು ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಸಂಘಟನೆ ಎಚ್ಚರಿಕೆ ನೀಡಿದೆ.

# ಬೆಂಗಳೂರಿನಲ್ಲಿ 550ಕ್ಕೂ ಹೆಚ್ಚು ಉದ್ಯಮ ನಾಯಕರ ಸಮಾಗಮ

ಬೆಂಗಳೂರು

ಬೆಂಗಳೂರಿನ ಲಲಿತ್ ಅಶೋಕ್‌ನಲ್ಲಿ ನಡೆದ ಫಿನ್‌ಟೆಕ್ ಫ್ಯೂಷನ್ ಇಂಡಿಯಾನ ಎರಡನೇ ಬೆಂಗಳೂರು ಆವೃತ್ತಿ, '2047ಕ್ಕೆ ಭಾರತದ ಹಣಕಾಸು ವಾಸ್ತುಶಿಲ್ಪ ನಿರ್ಮಾಣ' ಎಂಬ ಧ್ಯೇಯದೊಂದಿಗೆ ಯಶಸ್ವಿಯಾಗಿ ಸಂಪನ್ನಗೊಂಡಿತು. ಆಹ್ವಾನಿತರಿಗೆ ಮಾತ್ರ ಸೀಮಿತವಾಗಿದ್ದ ಈ ವೇದಿಕೆಯಲ್ಲಿ 174 ಸಂಸ್ಥೆಗಳನ್ನು ಪ್ರತಿನಿಧಿಸುವ 550ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದರು. ಫಿನ್‌ಟೆಕ್ ಕಂಪನಿಗಳು, ಬ್ಯಾಂಕುಗಳು, ಎನ್‌ಬಿಎಫ್‌ಸಿಗಳು, ನಿಯಂತ್ರಣ ಸಂಸ್ಥೆಗಳು, ನೀತಿ ನಿರೂಪಕರು, ಹೂಡಿಕೆದಾರರು, ಜಾಗತಿಕ ಸಾಮರ್ಥ್ಯ ಕೇಂದ್ರಗಳು ಹಾಗೂ ಶೈಕ್ಷಣಿಕ ಕ್ಷೇತ್ರದ ಪ್ರಮುಖರು ಒಂದೇ ವೇದಿಕೆಯಲ್ಲಿ ಸಮಾಗಮಿಸಿದ್ದರು.



ಸಾಂಪ್ರದಾಯಿಕ ಸಮ್ಮೇಳನಗಳಂತೆ ಕೇವಲ ಚರ್ಚೆಗಳಿಗೆ ಸೀಮಿತವಾಗದೆ, ಕಾರ್ಯರೂಪಕ್ಕೆ ಬರಬಹುದಾದ ಉದ್ಯಮ ಸಹಯೋಗಗಳನ್ನು ರೂಪಿಸುವುದು ಒಂದು ದಿನದ ಈ ಸಮಾವೇಶದ ಪ್ರಮುಖ ಉದ್ದೇಶವಾಗಿತ್ತು. ಸಮಾವೇಶದಲ್ಲಿ 50ಕ್ಕೂ ಹೆಚ್ಚು ಭಾಷಣಕಾರರು ಭಾಗವಹಿಸಿದ್ದರು. ಸೆಬಿ ಮತ್ತು ಆರ್‌ಬಿಐನ ಮಾಜಿ ಹಿರಿಯ ಅಧಿಕಾರಿಗಳು, ಪಿಬಿ ಫಿನ್‌ಟೆಕ್, ಎನ್‌ಇಎಸ್‌ಎಲ್, ಆರ್‌ಬಿಐಎಚ್, ಯುಐಡಿಎಐ ಸೇರಿದಂತೆ ಪ್ರಮುಖ ಬ್ಯಾಂಕುಗಳು, ಫಿನ್‌ಟೆಕ್ ಸಂಸ್ಥೆಗಳು ಹಾಗೂ ವೆಂಚರ್ ಕ್ಯಾಪಿಟಲ್ ಸಂಸ್ಥೆಗಳ ಹಿರಿಯ ನಾಯಕರು ವಿಚಾರ ವಿನಿಮಯ ನಡೆಸಿದರು. ಸಮಾವೇಶದಲ್ಲಿ ನಾಲ್ಕು ಪ್ರಮುಖ ಭಾಷಣಗಳು, ಆರು ನಾಯಕತ್ವ ಸಮಿತಿ ಚರ್ಚೆಗಳು, ಮೂರು ಖಾಸಗಿ ನಾಯಕತ್ವ ಪ್ರಯೋಗಾಲಯಗಳು ಹಾಗೂ ವಿಶೇಷ ಸಿಎಕ್ಸ್‌ಒ ನೆಟ್‌ವರ್ಕಿಂಗ್ ಸಂಜೆಯ ಕಾರ್ಯಕ್ರಮಗಳು ನಡೆದವು.

# ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಸಭೆ: ಪ್ರಮುಖ ಬೇಡಿಕೆಗಳ ಕುರಿತು ಚರ್ಚೆ

ಬೆಂಗಳೂರು, ಜು. 28: ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಯೊಂದಿಗೆ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಮಹತ್ವದ ಸಭೆ ನಡೆಯಿತು. ಸಭೆಯಲ್ಲಿ ಉಳಿದ ಮೂರು ಸಾರಿಗೆ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರು ವಿಡಿಯೋ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡಿದ್ದರು.

ಸಾರಿಗೆ ನಿಗಮಗಳ ನೌಕರರ ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಸಂಬಂಧಿಸಿದಂತೆ ಸರ್ಕಾರದ ಗಮನ ಸೆಳೆಯುವ ಉದ್ದೇಶದಿಂದ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಸಲಾಯಿತು.

ನೌಕರರ ವೇತನ ಪರಿಷ್ಕರಣೆ, ಮೂಲ ವೇತನ ಹೆಚ್ಚಳ, ಬಾಕಿ ವೇತನ ಪಾವತಿ ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಜಂಟಿ ಕ್ರಿಯಾ ಸಮಿತಿಯ ಪದಾಧಿಕಾರಿಗಳು ತಮ್ಮ ಅಭಿಪ್ರಾಯಗಳನ್ನು ಮಂಡಿಸಿದರು.

ಸಭೆಯಲ್ಲಿ ಸಂಘಟನೆಯ ಪ್ರಮುಖ ಮುಖಂಡರುಗಳಾದ ಜಯದೇವರಾಜ ಅರಸು, ಜ್ಯೋತಿ ಅನಂತ ಸುಬ್ಬರಾವ್, ಮಂಜುನಾಥ್, ರೇವಪ್ಪ, ಸೋಮಣ್ಣ, ಗಂಡಸಿ ಸದಾನಂದ ಸ್ವಾಮಿ, ದೇವರಾಜ ಅರಸು, ಚಂದ್ರೇಗೌಡ, ಅದರ ಗುಂಜಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಸಭೆಯಲ್ಲಿ ಕೈಗೊಂಡ ಪ್ರಮುಖ ಒತ್ತಾಯಗಳು ಹೀಗಿವೆ: ವೇತನ ಪರಿಷ್ಕರಣೆಯನ್ನು 2024ರ ಜನವರಿ 1ರಿಂದ 2027ರ ಡಿಸೆಂಬರ್ 31ರವರೆಗೆ ನಾಲ್ಕು ವರ್ಷಗಳ ಅವಧಿಗೆ ಜಾರಿಗೊಳಿಸಬೇಕು.

ನೌಕರರ ಮೂಲ ವೇತನವನ್ನು ಶೇ.20ರಷ್ಟು ಹೆಚ್ಚಳ




ಮಾಡಬೇಕು. ಉಳಿದಿರುವ 12 ತಿಂಗಳ ವೇತನ ಹಿಂಬಾಕಿಯನ್ನು ಶೀಘ್ರವಾಗಿ ಪಾವತಿಸಬೇಕು. ಸರ್ಕಾರಿ ನೌಕರರಿಗೆ ನೀಡುತ್ತಿರುವ ಮಾದರಿಯಲ್ಲಿಯೇ ವಾರ್ಷಿಕ ಬಡ್ತಿದರಗಳನ್ನು ಪರಿಷ್ಕರಿಸಬೇಕು.

ಬಾಟಾ ಹಾಗೂ ಇತರ ಭತ್ಯೆಗಳಿಗೆ ಸಂಬಂಧಿಸಿದ ನೌಕರರ ಬೇಡಿಕೆಗಳನ್ನು ಈಡೇರಿಸಬೇಕು. ಸಾರಿಗೆ ನಿಗಮಗಳ ನೌಕರರ ಪ್ರಮುಖ ಬೇಡಿಕೆಗಳನ್ನು ಸರ್ಕಾರಕ್ಕೆ ಮನವರಿಕೆ ಮಾಡಿಕೊಡುವ ನಿಟ್ಟಿನಲ್ಲಿ ಶೀಘ್ರದಲ್ಲೇ ಸಾರಿಗೆ ಸಚಿವರೊಂದಿಗೆ ಸಭೆ ಏರ್ಪಡಿಸಲಾಗುವುದು ಎಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರು ಸಭೆಯಲ್ಲಿ ತಿಳಿಸಿದರು.

ಸಾರಿಗೆ ನೌಕರರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಈ ಬೇಡಿಕೆಗಳ ಕುರಿತು ತಕ್ಷಣವೇ ಸೂಕ್ತ ಕ್ರಮ ಕೈಗೊಂಡು, ಅವುಗಳನ್ನು ಶೀಘ್ರವಾಗಿ ಈಡೇರಿಸಬೇಕು ಇಲ್ಲವಾದರೆ ಮತ್ತೆ ಹೋರಾಟ ಹಾದಿ ಹಿಡಿಯಬೇಕಾಗುವುದು ಎಂದು ಜಂಟಿ ಕ್ರಿಯಾ ಸಮಿತಿಯ ಮುಖಂಡರು ಆಗ್ರಹಿಸಿದರು.

# ಮೂರು ಹೊಸ ಸೇವೆಗಳು ಬಿಡುಗಡೆ

ಬೆಂಗಳೂರು

ದೇಶದ ಹಿರಿಯ ನಾಗರಿಕರ ಆರೈಕೆ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಅನ್ವಯ ಕಿನ್ ಕೇರ್ ಸಂಸ್ಥೆಯು ತನ್ನ 10ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ 'ಕೃತಜ್ಞ' ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಮೂರು ಹೊಸ ಸೇವೆಗಳನ್ನು ಬಿಡುಗಡೆ ಮಾಡಿದೆ.




ಕಳೆದ ಒಂದು ದಶಕದಲ್ಲಿ ದೇಶದ 38ಕ್ಕೂ ಹೆಚ್ಚು ನಗರಗಳಲ್ಲಿ 1.5 ಲಕ್ಷಕ್ಕೂ ಅಧಿಕ ಹಿರಿಯ ನಾಗರಿಕರಿಗೆ ಸೇವೆ ಒದಗಿಸಿರುವ ಸಂಸ್ಥೆಯು, ಹಿರಿಯರ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಅಗತ್ಯಗಳನ್ನು ಪೂರೈಸುವ ಉದ್ದೇಶದಿಂದ ಕ್ಯುರಾಪಾಡ್, 3000 ಬಿಸಿ ಥೆರಪ್ಯೂಟಿಕ್ಸ್ ಮತ್ತು ಪುಣ್ಯಕ ಎಂಬ ಮೂರು ಹೊಸ ಸೇವೆಗಳನ್ನು ಪರಿಚಯಿಸಿದೆ.

ದೇಶಕ್ಕಾಗಿ ನಿಸ್ವಾರ್ಥ ಸೇವೆ ಸಲ್ಲಿಸಿದ ಶೌರ್ಯ ಪ್ರಶಸ್ತಿ ಪುರಸ್ಕೃತರಾದ ಪರಮವೀರ ಚಕ್ರ, ವೀರ ಚಕ್ರ ಮತ್ತು ಸೇನಾ ಪದಕ ಪುರಸ್ಕೃತರ ಕುಟುಂಬಗಳು ಹಾಗೂ ಪದ್ಮಶ್ರೀ ಪುರಸ್ಕೃತರ ಕುಟುಂಬಗಳಿಗೆ ಜೀವಮಾನದ ಉಚಿತ ತುರ್ತು ಸ್ಪಂದನ ವ್ಯವಸ್ಥೆ ಮತ್ತು ಹಿರಿಯ ನಾಗರಿಕರ ಸ್ಮಾರ್ಟ್ ವಾಚ್ ಸೇವೆಯನ್ನು ಉಚಿತವಾಗಿ ಒದಗಿಸುವುದಾಗಿ ಸಂಸ್ಥೆ ಇದೇ ಸಂದರ್ಭದಲ್ಲಿ ಘೋಷಿಸಿದೆ.

ವೃದ್ಧಾಪ್ಯದಲ್ಲಿ ದೇಶದ ಈ ಮಹಾನ್ ಸಾಧಕರ ಕುಟುಂಬಗಳ ಹಿರಿಯರು ಯಾವುದೇ ತುರ್ತು ಪರಿಸ್ಥಿತಿಯಲ್ಲಿ ಒಂಟಿಯಾಗಬಾರದು ಎಂಬ ಉದ್ದೇಶದಿಂದ ಈ ವಿಶೇಷ ಸೇವೆಯನ್ನು ನೀಡಲಾಗುತ್ತಿದೆ ಎಂದು ಸಂಸ್ಥೆ ತಿಳಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಅನ್ವಯ ಕಿನ್ ಕೇರ್ ಸಂಸ್ಥಾಪಕ ಹಾಗೂ ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ರೆಡ್ಡಿ, "ಮಕ್ಕಳಿಂದ ದೂರವಿದ್ದು ಒಂಟಿಯಾಗಿ ಜೀವನ ನಡೆಸುತ್ತಿರುವ ದೇಶದ ಲಕ್ಷಾಂತರ ಪೋಷಕರ ಭೀತಿ ಮತ್ತು ಆತಂಕಕ್ಕೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ 10 ವರ್ಷಗಳ ಹಿಂದೆ ಅನ್ವಯ ಆರಂಭವಾಯಿತು. ಇಂದು ಲಕ್ಷಾಂತರ ಕುಟುಂಬಗಳಿಗೆ ನೆಮ್ಮದಿಯ ನಿದ್ರೆ ನೀಡಲು ಸಾಧ್ಯವಾಗಿದೆ ಎಂಬ ತೃಪ್ತಿ ನಮಗಿದೆ. ಹಿರಿಯ ನಾಗರಿಕರ ನೋವು, ಆರೋಗ್ಯ ಮತ್ತು ನಂಬಿಕೆಯನ್ನು ನೇರವಾಗಿ ತಲುಪುವ ನಿಟ್ಟಿನಲ್ಲಿ ಈ ಮೂರು ಹೊಸ ಸೇವೆಗಳು ನಮ್ಮ ಸಣ್ಣ ಪ್ರಯತ್ನವಾಗಿದೆ," ಎಂದು ಹೇಳಿದರು.

# ಬೆಂಗಳೂರಿನಲ್ಲಿ ವಿಶ್ವ ಹೆಪಟೈಟಿಸ್ ದಿನ ಆಚರಣೆ

ಬೆಂಗಳೂರು

ವಿಶ್ವ ಹೆಪಟೈಟಿಸ್ ದಿನದ ಅಂಗವಾಗಿ ಕರ್ನಾಟಕ ಗ್ಯಾಸ್ಟ್ರೋ ಸೆಂಟರ್, ಲಯನ್ಸ್ ಇಂಟರ್‌ನ್ಯಾಷನಲ್ ಡಿಸ್ಟ್ರಿಕ್ಟ್ 317ಎ ಹಾಗೂ ಇತರ ಸಹಯೋಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ನಗರದ ನಾಗಪುರ ಶಾಖೆಯಲ್ಲಿ ವಾಕ್‌ಥಾನ್ ಮತ್ತು ಉಚಿತ ಹೆಪಟೈಟಿಸ್ ಬಿ ಹಾಗೂ ಸಿ ತಪಾಸಣಾ ಶಿಬಿರವನ್ನು ಆಯೋಜಿಸಲಾಯಿತು.



'ಹೆಪಟೈಟಿಸ್: ಲೆಟ್ಸ್ ಬ್ರೇಕ್ ಇಟ್ ಡೌನ್' ಎಂಬ ವಿಶ್ವ ಆರೋಗ್ಯ ಸಂಸ್ಥೆಯ 2026ರ ವರ್ಷದ ಸಂದೇಶವನ್ನು ಆಧರಿಸಿ ನಡೆದ ಕಾರ್ಯಕ್ರಮವು ಹೆಪಟೈಟಿಸ್ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ರೋಗವನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು ಹಾಗೂ ತಡೆಗಟ್ಟುವ ಕ್ರಮಗಳನ್ನು ಉತ್ತೇಜಿಸುವ ಉದ್ದೇಶ ಹೊಂದಿತ್ತು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್, ಮಹಾಲಕ್ಷ್ಮೀ ಲೇಔಟ್ ಕ್ಷೇತ್ರದ ಶಾಸಕ ಕೆ. ಗೋಪಾಲಯ್ಯ ಹಾಗೂ ಮಲ್ಲೇಶ್ವರಂ ಕ್ಷೇತ್ರದ ಶಾಸಕ ಡಾ. ಸಿ.ಎನ್. ಅಶ್ವತ್ಥನಾರಾಯಣ ಭಾಗವಹಿಸಿದ್ದರು. ಲಯನ್ಸ್ ಸಂಸ್ಥೆಯ ಹಿರಿಯ ನಾಯಕರಾದ ಜಿಲ್ಲಾ ಗವರ್ನರ್ ಡಾ. ಜಿ. ಮೋಹನ್ ಹಾಗೂ ಕೆ. ಈಶ್ವರನ್ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಬೆಂಬಲ ವ್ಯಕ್ತಪಡಿಸಿದರು.

ಬೆಳಿಗ್ಗೆ 7ರಿಂದ 8 ಗಂಟೆಯವರೆಗೆ ವಾಕ್‌ಥಾನ್ ನಡೆಯಿತು. ಬಳಿಕ ಬೆಳಿಗ್ಗೆ 9ರಿಂದ ಮಧ್ಯಾಹ್ನ 1ರವರೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

ನೂರಾರು ನಾಗರಿಕರು ಶಿಬಿರದ ಪ್ರಯೋಜನ ಪಡೆದರು. ಉಚಿತ ಹೆಪಟೈಟಿಸ್ ಬಿ ಮತ್ತು ಸಿ ರಕ್ತಪರೀಕ್ಷೆ, ಫೈಬ್ರೋಸ್ಕ್ಯಾನ್ ಮೂಲಕ ಯಕೃತ್ ತಪಾಸಣೆ, ಹೆಪಟೈಟಿಸ್ ಬಿ ಲಸಿಕೆ ಹಾಗೂ ಗ್ಯಾಸ್ಟ್ರೋಎಂಟರಾಲಜಿ ತಜ್ಞರಿಂದ ವೈದ್ಯಕೀಯ ಸಲಹೆಗಳನ್ನು ಉಚಿತವಾಗಿ ನೀಡಲಾಯಿತು. ಕರ್ನಾಟಕ ಗ್ಯಾಸ್ಟ್ರೋ ಸೆಂಟರ್‌ನ ನಿರ್ದೇಶಕ ಡಾ. ಉಮೇಶ್ ಜಾಲಿಹಾಲ್, ಡಾ. ಇರ್ಷಾದ್ ಅಲಿ ಎಚ್. ಹಾಗೂ ಡಾ. ಪವನ್ ಕುಮಾರ್ ಮದ್ದೂರಿ ಅವರು ಹೆಪಟೈಟಿಸ್ ಕುರಿತು ಜಾಗೃತಿ ಮೂಡಿಸಿದರು. ತಪಾಸಣೆ, ಆರಂಭಿಕ ಹಂತದಲ್ಲೇ ರೋಗ ಪತ್ತೆ, ಸಮಯೋಚಿತ ಚಿಕಿತ್ಸೆ ಹಾಗೂ ಲಸಿಕೆಗಳ ಮೂಲಕ ಹೆಪಟೈಟಿಸ್‌ನ ಹರಡುವಿಕೆಯನ್ನು ತಡೆಗಟ್ಟುವ ಮಹತ್ವದ ಕುರಿತು ಅವರು ವಿವರಿಸಿದರು. ಕಾರ್ಯಕ್ರಮದಲ್ಲಿ ಸಾರ್ವಜನಿಕರು, ವೈದ್ಯಕೀಯ ಮತ್ತು ನರ್ಸಿಂಗ್ ವಿದ್ಯಾರ್ಥಿಗಳು ಹಾಗೂ ನಾರ್ತ್‌ವೆಸ್ಟ್ ಆಸ್ಪತ್ರೆ, ಫೋರ್ಟಿಸ್ ಆಸ್ಪತ್ರೆ ರಾಜಾಜಿನಗರ, ಸರ್ವೋದಯ ನರ್ಸಿಂಗ್ ಕಾಲೇಜು, ಶೇಷಾದ್ರಿಪುರಂ ಈವಿನಿಂಗ್ ಕಾಲೇಜು ಮತ್ತು ಗೌತಮ್ ನರ್ಸಿಂಗ್ ಕಾಲೇಜಿನ ಸ್ವಯಂಸೇವಕರು ಸಕ್ರಿಯವಾಗಿ ಭಾಗವಹಿಸಿದರು. ಅವರ ಸಹಭಾಗಿತ್ವ ಕಾರ್ಯಕ್ರಮದ ಯಶಸ್ಸಿಗೆ ಪ್ರಮುಖ ಕಾರಣವಾಯಿತು.

ತಜ್ಞ ವೈದ್ಯರ ಸೇವೆ, ಉಚಿತ ಆರೋಗ್ಯ ತಪಾಸಣೆ, ಲಸಿಕೆ ಹಾಗೂ ಸಮುದಾಯದ ಸಕ್ರಿಯ ಭಾಗವಹಿಸುವಿಕೆಯೊಂದಿಗೆ ನಡೆದ ಈ ಕಾರ್ಯಕ್ರಮವು ಹೆಪಟೈಟಿಸ್ ನಿರ್ಮೂಲನೆ ಮತ್ತು ಯಕೃತ್ ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.

# ಆರಂಭಿಕ ಬಾಲ್ಯ ಆರೈಕೆಗೆ ಯುನೈಟೆಡ್‌ವೇ ಬೆಂಗಳೂರು ಬಲ



ರಾಯಚೂರು

ಜಿಇ ಹೆಲ್ತ್‌ಕೇರ್ ಮತ್ತು ಯುನೈಟೆಡ್ ವೇ ಬೆಂಗಳೂರು ಸಂಸ್ಥೆಗಳು ಹತ್ತು ವರ್ಷಗಳ ಯಶಸ್ವಿ ಸಹಭಾಗಿತ್ವವನ್ನು ಆಚರಿಸುತ್ತಿದ್ದು, ರಾಯಚೂರು ಜಿಲ್ಲಾಡಳಿತದ ಸಹಯೋಗದೊಂದಿಗೆ ಕರ್ನಾಟಕದಲ್ಲಿ ಆರಂಭಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಕಾರ್ಯಗಳನ್ನು ಕೈಗೊಂಡಿವೆ.

ಯುನೈಟೆಡ್ ವೇ ಬೆಂಗಳೂರು ಸಂಸ್ಥೆಯ ಪ್ರಮುಖ ಉಪಕ್ರಮವಾದ 'ಬೋರ್ನ್ ಲರ್ನಿಂಗ್ ಕ್ಯಾಂಪೇನ್' ಮೂಲಕ ಅಂಗನವಾಡಿ ವ್ಯವಸ್ಥೆಗಳನ್ನು ಬಲಪಡಿಸುವುದರ ಜೊತೆಗೆ, ರಾಜ್ಯದಾದ್ಯಂತ ಆರಂಭಿಕ ಶಿಕ್ಷಣದ ಗುಣಮಟ್ಟ ಮತ್ತು ಫಲಿತಾಂಶಗಳನ್ನು ಸುಧಾರಿಸುವ ಗುರಿಯನ್ನು ಹೊಂದಲಾಗಿದೆ.

ಕರ್ನಾಟಕದ ಮಹತ್ವಾಕಾಂಕ್ಷಿ ಜಿಲ್ಲೆಗಳಲ್ಲಿ ಒಂದಾಗಿರುವ ರಾಯಚೂರಿನಲ್ಲಿ ಜಾರಿಗೊಂಡಿರುವ ಈ ಅಭಿಯಾನವು ಮಕ್ಕಳ ಜೀವನದ ಅತ್ಯಂತ ಮಹತ್ವದ ಆರಂಭಿಕ ವರ್ಷಗಳಲ್ಲಿ ಸಮಗ್ರ ಬೆಳವಣಿಗೆಗೆ ಪೂರಕವಾಗುವಂತೆ ಅಂಗನವಾಡಿ ಕೇಂದ್ರಗಳನ್ನು ಮಕ್ಕಳ ಸ್ನೇಹಿ ಹಾಗೂ ಚೈತನ್ಯಮಯ ಕಲಿಕಾ ವಾತಾವರಣಗಳಾಗಿ ಪರಿವರ್ತಿಸುವತ್ತ ಗಮನಹರಿಸಿದೆ.

ಇದರ ಭಾಗವಾಗಿ ರಾಯಚೂರಿನ ಸುಮಾರು 48 ಅಂಗನವಾಡಿ ಕೇಂದ್ರಗಳನ್ನು ನವೀಕರಿಸಲಾಗಿದ್ದು, 0ರಿಂದ 6 ವರ್ಷದೊಳಗಿನ ಸುಮಾರು 4,200 ಮಕ್ಕಳು ಇದರ ಪ್ರಯೋಜನ ಪಡೆದಿದ್ದಾರೆ.

ಈ ಸಹಭಾಗಿತ್ವವನ್ನು ಬೆಂಗಳೂರಿನ ವೈಟ್‌ಫೀಲ್ಡ್, ಕೆ.ಆರ್.ಪುರಂ ಮತ್ತು ಕಾಡುಗೋಡಿ ಪ್ರದೇಶಗಳಲ್ಲಿಯೂ ಆರಂಭಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣಕ್ಕೆ ಬೆಂಬಲ ನೀಡುವಂತೆ ವಿಸ್ತರಿಸಲಾಗಿದೆ.

ರಾಯಚೂರಿನಲ್ಲಿ ಈ ಉಪಕ್ರಮದ ಯಶಸ್ಸಿಗೆ ಜಿ ಇ ಹೆಲ್ತ್‌ಕೇರ್, ಯುನೈಟೆಡ್ ವೇ ಬೆಂಗಳೂರು, ಜಿಲ್ಲಾಧಿಕಾರಿಗಳ ಕಚೇರಿ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳು, ಅಂಗನವಾಡಿ ಕಾರ್ಯಕರ್ತೆಯರು, ಸ್ಥಳೀಯ ಹಿತಾಸಕ್ತಿದಾರರು ಮತ್ತು ಸಮುದಾಯಗಳ ನಡುವಿನ ಬಲವಾದ ಸಹಭಾಗಿತ್ವ ಪ್ರಮುಖ ಕಾರಣವಾಗಿದೆ.

ಈ ಸಹಭಾಗಿತ್ವದಡಿ ಅಂಗನವಾಡಿ ಮೂಲಸೌಕರ್ಯ ಸುಧಾರಣೆ, ಮಕ್ಕಳ ವಯೋಮಾನಕ್ಕೆ ಅನುಗುಣವಾದ ಕಲಿಕಾ ಸಾಮಗ್ರಿಗಳ ಲಭ್ಯತೆ ಹೆಚ್ಚಿಸುವುದು, ಅಂಗನವಾಡಿ ಕಾರ್ಯಕರ್ತೆಯರ ಸಾಮರ್ಥ್ಯ ವೃದ್ಧಿಸುವುದು ಹಾಗೂ ಆರಂಭಿಕ ಬಾಲ್ಯ ಅಭಿವೃದ್ಧಿಯಲ್ಲಿ ಪೋಷಕರು ಮತ್ತು ಸಮುದಾಯದ ಸಕ್ರಿಯ ಭಾಗವಹಿಸುವಿಕೆಯನ್ನು ಉತ್ತೇಜಿಸುವುದಕ್ಕೆ ಆದ್ಯತೆ ನೀಡಲಾಗಿದೆ.

# ಅಧಿಕಾರಿಗಳ ವಿರುದ್ಧ ರೈತರ ಆಕ್ರೋಶ

ರಾಯಚೂರು: ಜಿಲ್ಲೆಯ ದೇವದುರ್ಗ ತಾಲೂಕಿನ ಇಂಗಳದಾಳ ಗ್ರಾಮದಲ್ಲಿ ನಾರಾಯಣಪುರ ಬಲದಂಡೆ ಕಾಲುವೆ ನೀರು ಜಮೀನುಗಳಿಗೆ ನುಗ್ಗಿ ಲಕ್ಷಾಂತರ ರೂಪಾಯಿ ಮೌಲ್ಯದ ಬೆಳೆ ಹಾನಿಯಾಗಿದೆ. ಇದರಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕೆಬಿಜೆಎನ್‌ಎಲ್ ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಲುವೆಯಲ್ಲಿ ಹೂಳು ತುಂಬಿಕೊಂಡಿದ್ದು, ಗಿಡಗಂಟೆಗಳು ಬೆಳೆದಿದ್ದರೂ ಅವುಗಳನ್ನು ತೆರವುಗೊಳಿಸದೆ ನೀರು ಹರಿಸಿದ ಹಿನ್ನೆಲೆಯಲ್ಲಿ ಕಾಲುವೆ ನೀರು ಜಮೀನುಗಳಿಗೆ ನುಗ್ಗಿದೆ ಎಂದು ರೈತರು ಆರೋಪಿಸಿದ್ದಾರೆ. ನಾರಾಯಣಪುರ ಬಲದಂಡೆ ಕಾಲುವೆಯ 17ನೇ ಉಪಕಾಲುವೆಯಲ್ಲಿ ಗಿಡಗಂಟೆಗಳು ಬೆಳೆದಿದ್ದರಿಂದ ಇಂಗಳದಾಳ ಹಾಗೂ ಬೂದಿನಾಳ ಗ್ರಾಮದ ಜಮೀನುಗಳಿಗೆ ನೀರು ನುಗ್ಗಿದೆ. ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಬೆಳೆದಿದ್ದ ಹತ್ತಿ ಬೆಳೆ ನೀರಿನಲ್ಲಿ ಮುಳುಗಿ ಹಾನಿಯಾಗಿದ್ದು, ರೈತರು ಕಂಗಾಲಾಗಿದ್ದಾರೆ. ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಅನಿವಾರ್ಯವಾಗಿ ರೈತರೇ ಜೆಸಿಬಿ ಯಂತ್ರ ಬಳಸಿ ಕಾಲುವೆಯಲ್ಲಿದ್ದ ಗಿಡಗಂಟೆಗಳನ್ನು ತೆರವುಗೊಳಿಸಿ ಸ್ವಚ್ಛಗೊಳಿಸಿಕೊಂಡಿದ್ದಾರೆ.



ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಶಾಂತಿನಗರದಲ್ಲಿ ಅನಾಥ ವಾಹನಗಳ ತೆರವು ಕಾರ್ಯಾಚರಣೆಗೆ ಮುಂದಾಗಿರುವ ಪಾಲಿಕೆ ಅಧಿಕಾರಿಗಳು, ವಾಹನಗಳನ್ನು ಗುರುತಿಸುವ ನಿಟ್ಟಿನಲ್ಲಿ ಸ್ಟಿಕ್ಕರ್ ಅಂಟಿಸುವ ಕಾರ್ಯ ಕೈಗೊಂಡರು. ಶಾಂತಿನಗರ ಶಾಸಕ ಎನ್.ಎ. ಹ್ಯಾರಿಸ್ ಹಾಗೂ ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್ ಜಿ. ಅವರು ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿ ಪರಿಶೀಲನೆ ನಡೆಸಿದರು.

# 'ತಂತ್ರಜ್ಞಾನ ಮತ್ತು ಮಾನವೀಯ ಮೌಲ್ಯಗಳ ಸಮನ್ವಯದಿಂದ ಮಾತ್ರ ಸಮಗ್ರ ಅಭಿವೃದ್ಧಿ ಸಾಧ್ಯ'

ಚಿಕ್ಕಬಳ್ಳಾಪುರ

ಕೃತಕ ಬುದ್ಧಿಮತ್ತೆಯಂತಹ ಆಧುನಿಕ ತಂತ್ರಜ್ಞಾನವು ಕೇವಲ ನಗರ ಪ್ರದೇಶಗಳಿಗೆ ಸೀಮಿತವಾಗದೆ, ಗ್ರಾಮೀಣ ಭಾಗದ ಪ್ರತಿಭಾವಂತ ಯುವಕ-ಯುವತಿಯರಿಗೂ ತಲುಪಿದಾಗ ಮಾತ್ರ ದೇಶದ ನೈಜ ಅಭಿವೃದ್ಧಿ ಸಾಧ್ಯ ಎಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಹೇಳಿದ್ದಾರೆ.

ಚಿಕ್ಕಬಳ್ಳಾಪುರ ತಾಲೂಕಿನ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ ಆಯೋಜಿಸಿದ್ದ ಗ್ರಾಮೀಣ ಪ್ರದೇಶದ ಕೃತಕ ಬುದ್ಧಿಮತ್ತೆ ಕೌಶಲ್ಯ ಮತ್ತು ಅನುಭವ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.



ತಂತ್ರಜ್ಞಾನವು ವೇಗವಾಗಿ ಬೆಳೆಯುತ್ತಿರುವ ಇಂದಿನ ಕಾಲಘಟ್ಟದಲ್ಲಿ ಕೃತಕ ಬುದ್ಧಿಮತ್ತೆಯಂತಹ ಆಧುನಿಕ ತಂತ್ರಜ್ಞಾನಕ್ಕೆ ಕರುಣೆ, ನೈತಿಕತೆ ಮತ್ತು ಸದ್ಗುಣಗಳ ಸ್ಪರ್ಶವಿರಬೇಕು. ತಂತ್ರಜ್ಞಾನವು ಮಾನವನ ಬುದ್ಧಿವಂತಿಕೆ ಹಾಗೂ ಸದ್ಗುಣಗಳನ್ನು ಮತ್ತಷ್ಟು ಹೆಚ್ಚಿಸುವಂತಿರಬೇಕು. ಸತ್ಯಸಾಯಿ ಗ್ರಾಮದಂತಹ ಪವಿತ್ರ ಹಾಗೂ ಸೇವಾ ಮನೋಭಾವದ ವಾತಾವರಣದಲ್ಲಿ ಈ ಕೇಂದ್ರ ಆರಂಭವಾಗಿರುವುದು ಅತ್ಯಂತ ಸೂಕ್ತವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ರೂರಲ್ ಶೋರ್ಸ್ ಸಂಸ್ಥೆಯು ಕಳೆದ 18 ವರ್ಷಗಳಿಂದ ಗ್ರಾಮೀಣ ಪ್ರದೇಶದ ಯುವಜನರು ಉದ್ಯೋಗ ಅರಸಿ ನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸಿ, ಅವರು ವಾಸಿಸುವ ಸ್ಥಳದಲ್ಲಿಯೇ ಉದ್ಯೋಗಾವಕಾಶ ಕಲ್ಪಿಸುತ್ತಿರುವುದು ಶ್ಲಾಘನೀಯ. ಈವರೆಗೆ ಸುಮಾರು 30 ಸಾವಿರಕ್ಕೂ ಹೆಚ್ಚು ಯುವಕ-ಯುವತಿಯರಿಗೆ ತರಬೇತಿ ಹಾಗೂ ಉದ್ಯೋಗಾವಕಾಶ ಕಲ್ಪಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ಅಮೆರಿಕದಲ್ಲಿಯೂ ಸಂಸ್ಥೆಯ ಮೂಲಕ ಸುಮಾರು 500 ಯುವತಿಯರು ಹಾಗೂ ಮಹಿಳೆಯರಿಗೆ ಉದ್ಯೋಗ ಒದಗಿಸಿರುವುದು ಗಮನಾರ್ಹ ಎಂದು ಡಾ. ಶಾಲಿನಿ ರಜನೀಶ್ ಹೇಳಿದರು.

ಉಚಿತ ಶಿಕ್ಷಣ, ಉಚಿತ ಆರೋಗ್ಯ ಸೇವೆ ಹಾಗೂ ಪೌಷ್ಟಿಕ ಆಹಾರ ಒದಗಿಸುವುದು ಪ್ರತಿಯೊಬ್ಬರ ಮೂಲಭೂತ ಹಕ್ಕು ಎಂಬ ತತ್ವದಡಿ ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಸೇವಾ ಕಾರ್ಯಗಳು ಶ್ಲಾಘನೀಯವಾಗಿವೆ. ಭಾರತದ ಪ್ರಥಮ ಸಂಪೂರ್ಣ ಉಚಿತ ಗ್ರಾಮೀಣ ವೈದ್ಯಕೀಯ ಕಾಲೇಜು ಸೇರಿದಂತೆ ಹಲವು ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುತ್ತಿರುವುದು ಮಾದರಿಯಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕವು ದೇಶದ ತಂತ್ರಜ್ಞಾನ ರಾಜಧಾನಿಯಾಗಿ ಬೆಳೆಯುತ್ತಿದ್ದು, ಇಂತಹ ಕೃತಕ ಬುದ್ಧಿಮತ್ತೆ ಕೌಶಲ್ಯ ಕೇಂದ್ರಗಳು ಗ್ರಾಮೀಣ ಯುವಕರನ್ನು ಭವಿಷ್ಯದ ತಂತ್ರಜ್ಞಾನ ಕ್ಷೇತ್ರಕ್ಕೆ ಸಜ್ಜುಗೊಳಿಸಲಿವೆ. ಭಾರತವು ಜಾಗತಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ನಾಯಕತ್ವ ವಹಿಸುವಲ್ಲಿ ಗ್ರಾಮೀಣ ಭಾಗದ ಪ್ರತಿಭೆಗಳ ಕೊಡುಗೆ ಅತ್ಯಂತ ಮಹತ್ವದ್ದಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಸದ್ಗುರು ಶ್ರೀ ಮಧುಸೂದನ ಸಾಯಿ, ರೂರಲ್ ಶೋರ್ಸ್ ಸಂಸ್ಥೆಯ ನಿರ್ದೇಶಕರು, ಗಣ್ಯರು, ದೇಶ-ವಿದೇಶಗಳ ಭಕ್ತಾದಿಗಳು ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದೊಡ್ಡಕೆರೆಯಲ್ಲಿ ಅಕ್ರಮ ಮೀನುಗಾರಿಕೆ?

## ಸರ್ಕಾರಕ್ಕೆ ಲಕ್ಷಾಂತರ ರೂ. ನಷ್ಟ–ಇಲಾಖೆಯ ನಿರ್ಲಕ್ಷ್ಯದ ವಿರುದ್ಧ ಸ್ಥಳೀಯರ ಆಕ್ರೋಶ



ಬಂಗಾರಪೇಟೆ

ತಾಲ್ಲೂಕಿನ 375 ಹೆಕ್ಟೇರ್ ಜಲವಿಸ್ತೀರ್ಣ ಹೊಂದಿರುವ ಮುಷ್ಟ್ರಹಳ್ಳಿ ದೊಡ್ಡಕೆರೆಯಲ್ಲಿ ಮೀನುಗಾರಿಕೆ ಗುತ್ತಿಗೆ ನಿಯಮಾನುಸಾರ ರದ್ದುಗೊಂಡಿದ್ದರೂ, ಅಕ್ರಮ ಮೀನುಗಾರಿಕೆ ನಿರಂತರವಾಗಿ ನಡೆಯುತ್ತಿರುವ ಆರೋಪ ಕೇಳಿಬಂದಿದೆ.

ಗುತ್ತಿಗೆದಾರರ ಹಕ್ಕು ರದ್ದಾಗಿದ್ದರೂ ಪ್ರತಿನಿತ್ಯ ಮೀನುಗಳನ್ನು ಹಿಡಿದು ಮಾರುಕಟ್ಟೆಗೆ ಸಾಗಿಸಲಾಗುತ್ತಿದೆ ಎಂದು ಸ್ಥಳೀಯ ಮೀನುಗಾರರು ಹಾಗೂ ಸಾರ್ವಜನಿಕರು ಆರೋಪಿಸಿದ್ದು, ಮೀನುಗಾರಿಕೆ ಇಲಾಖೆಯ ಕಾರ್ಯವೈಖರಿಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮುಷ್ಟ್ರಹಳ್ಳಿ ದೊಡ್ಡಕೆರೆಯ ಮೀನುಪಾಶುವಾರು ಹಕ್ಕನ್ನು 2024–25ರಿಂದ 2028–29ರವರೆಗೆ ಐದು ವರ್ಷಗಳ ಅವಧಿಗೆ ಇ–ಟೆಂಡರ್ ಮೂಲಕ ಬೇತಮಂಗಲ ಗ್ರಾಮದ ಬಿ.ವಿ. ಹರೀಶ್ ಕುಮಾರ್ ಅವರಿಗೆ ನೀಡಲಾಗಿತ್ತು. 2024–25ನೇ ಸಾಲಿಗೆ ರೂ 8,22,222, 2025–26ಕ್ಕೆ ರೂ 8,63,333, 2026–27ಕ್ಕೆ ರೂ 9,06,500, 2027–28ಕ್ಕೆ ರೂ 9,51,825 ಹಾಗೂ 2028–29ಕ್ಕೆ ರೂ. 9,99,416 ಗುತ್ತಿಗೆ ಮೊತ್ತ ನಿಗದಿಪಡಿಸಿ ಮೀನುಗಾರಿಕೆ ನಿರ್ದೇಶಕರು 2025ರ ಜನವರಿ 23ರಂದು ದೃಢೀಕರಣ ಆದೇಶ ಹೊರಡಿಸಿದ್ದರು.

ಈ ಆದೇಶವು ಇಲಾಖೆಯ ಅನುಬಂಧ–14 ಹಾಗೂ 15ರ ಷರತ್ತುಗಳಿಗೆ ಒಳಪಟ್ಟಿದ್ದು, ಮುಚ್ಚಳಿಕೆ ಪತ್ರ ನೋಂದಣಿ ಸೇರಿದಂತೆ ಎಲ್ಲ ನಿಯಮಗಳನ್ನು ಪಾಲಿಸುವ ಷರತ್ತಿನೊಂದಿಗೆ ಜಾರಿಗೊಂಡಿತ್ತು. ಅಲ್ಲದೆ, ಮುಷ್ಟ್ರಹಳ್ಳಿ ಕೆರೆಗೆ ಸಂಬಂಧಿಸಿದ ರಿಟ್ ಅರ್ಜಿ ಸಂಖ್ಯೆ 20245/2024 ಹೈಕೋರ್ಟ್‌ನಲ್ಲಿ ಬಾಕಿಯಿದ್ದು, ಅಂತಿಮ ತೀರ್ಪಿಗೆ ಒಳಪಟ್ಟು ಆದೇಶ ನೀಡಲಾಗಿತ್ತು.

ಗುತ್ತಿಗೆ ಅವಧಿಯ ಪ್ರಕಾರ 2025–26ನೇ ಸಾಲಿನ ಮೀನು ಪಾಶುವಾರು ಹಕ್ಕು 2026ರ ಮಾರ್ಚ್ 31ರಂದು ಅಂತ್ಯಗೊಂಡಿತ್ತು. ಇದಾದ ಬಳಿಕ 2026–27ನೇ ಸಾಲಿನ ನವೀಕರಣಕ್ಕಾಗಿ. 9,06,500 ರೂ. ಗುತ್ತಿಗೆ ಮೊತ್ತ ಹಾಗೂ ರೂ. 4,533 ಮುದ್ರಾಂಕ ಶುಲ್ಕವನ್ನು ಖಜಾನೆ–2 ಮೂಲಕ 2026ರ ಏಪ್ರಿಲ್ 30ರೊಳಗೆ ಪಾವತಿಸಿ ನವೀಕರಿಸಿಕೊಳ್ಳುವಂತೆ ಮೀನುಗಾರಿಕೆ ಸಹಾಯಕ ನಿರ್ದೇಶಕರು 2026ರ ಏಪ್ರಿಲ್ 1ರಂದು ಗುತ್ತಿಗೆದಾರರಿಗೆ ಅಧಿಕೃತ ನೋಟಿಸ್ ನೀಡಿದ್ದರು. ಜೊತೆಗೆ, ಹಿಂದಿನ ಸಾಲಿನಲ್ಲಿ ಕೆರೆಯಲ್ಲಿ ಬಿಡಲಾಗಿದ್ದ ಮೀನುಮರಿಗಳ ವಿವರ, ಹಿಡುವಳಿ ಮಾಡಿದ ಮೀನಿನ ಪ್ರಮಾಣ ಹಾಗೂ ಗಳಿಸಿದ ಆದಾಯದ ಮಾಹಿತಿಯನ್ನೂ ಸಲ್ಲಿಸುವಂತೆ ಸೂಚಿಸಲಾಗಿತ್ತು.

ಆದರೆ ನಿಗದಿತ ಗಡುವಿನೊಳಗೆ ನವೀಕರಣ ಮೊತ್ತ ಪಾವತಿಸದ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶದ ಅನುಬಂಧ–14ರ ಕಂಡಿಕೆ–12ರ ಷರತ್ತು ಉಲ್ಲಂಘನೆಯಾಗಿದೆ ಎಂದು ಪರಿಗಣಿಸಿ, ಮೀನುಗಾರಿಕೆ ಸಹಾಯಕ ನಿರ್ದೇಶಕರು 2026ರ ಮೇ 29ರಂದು ಮೀನುಗಾರಿಕೆ ಉಪನಿರ್ದೇಶಕರಿಗೆ ವರದಿ ಸಲ್ಲಿಸಿ, 2026–27ರಿಂದ ಅನ್ವಯವಾಗುವಂತೆ ಟೆಂಡರ್ ದೃಢೀಕರಣ ಆದೇಶವನ್ನು ರದ್ದುಪಡಿಸಲು ಶಿಫಾರಸು ಮಾಡಿದ್ದರು. ಅದರಂತೆ ಗುತ್ತಿಗೆ ರದ್ದುಗೊಂಡಿದ್ದು, ಗುತ್ತಿಗೆದಾರರ ಭದ್ರತಾ ಠೇವಣಿಯನ್ನೂ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ಜೊತೆಗೆ, ಕೆರೆಯನ್ನು ಮರು ಟೆಂಡರ್ ಮೂಲಕ ವಿಲೇವಾರಿ ಮಾಡಲು ಅನುಮತಿ ಕೋರಲಾಗಿದೆ.

ಆದರೆ ಗುತ್ತಿಗೆ ರದ್ದಾದ ಬಳಿಕವೂ ಕೆರೆಯಲ್ಲಿ ಅಕ್ರಮ ಮೀನುಗಾರಿಕೆ ನಡೆಯುತ್ತಿರುವುದು ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಪ್ರತಿನಿತ್ಯ ಬಲೆ ಬೀಸಿ ಮೀನುಗಳನ್ನು ಅಕ್ರಮವಾಗಿ ಹಿಡಿದು ಸಾಗಿಸಲಾಗುತ್ತಿದೆ. ಸರ್ಕಾರಿ ಆದಾಯಕ್ಕೆ ಲಕ್ಷಾಂತರ ರೂಪಾಯಿ ನಷ್ಟವಾಗುತ್ತಿದ್ದರೂ ಸ್ಥಳದಲ್ಲಿ ಯಾವುದೇ ಕಾವಲು ವ್ಯವಸ್ಥೆ, ಜಪ್ತಿ ಕಾರ್ಯಾಚರಣೆ ಅಥವಾ ನಿರಂತರ ನಿಗಾ ಕಾಣುತ್ತಿಲ್ಲ ಎಂದು ಸ್ಥಳೀಯರು ದೂರಿದ್ದಾರೆ.

ಗುತ್ತಿಗೆ ಹಕ್ಕೇ ಇಲ್ಲದಿದ್ದರೂ ಕೆರೆಯಲ್ಲಿ ನಿರಂತರ ಮೀನುಗಾರಿಕೆ ನಡೆಯುತ್ತಿದೆ. ಇಲಾಖೆಯ ಅಧಿಕಾರಿಗಳು ಕೇವಲ ಪತ್ರ ವ್ಯವಹಾರಕ್ಕೆ ಸೀಮಿತರಾಗಿದ್ದು, ಅಕ್ರಮ ತಡೆಯುವಲ್ಲಿ ವಿಫಲರಾಗಿದ್ದಾರೆ.

ಸರ್ಕಾರದ ಆಸ್ತಿಯನ್ನು ಕಣ್ಣೆದುರೇ ಲೂಟಿ ಮಾಡಲಾಗುತ್ತಿದ್ದರೂ ಕ್ರಮ ಕೈಗೊಳ್ಳದಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಸ್ಥಳೀಯರು ಆರೋಪವಾಗಿದೆ.

ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ ಅಕ್ರಮ ಮೀನುಗಾರಿಕೆಯನ್ನು ಸಂಪೂರ್ಣವಾಗಿ ನಿಲ್ಲಿಸಬೇಕು, ಅಕ್ರಮವಾಗಿ ಮೀನುಗಾರಿಕೆ ನಡೆಸುತ್ತಿರುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು, ಅಕ್ರಮವಾಗಿ ಹಿಡಿದ ಮೀನು ಹಾಗೂ ಬಳಸುತ್ತಿರುವ ಉಪಕರಣಗಳನ್ನು ಜಪ್ತಿ ಮಾಡಬೇಕು ಹಾಗೂ ಮುಷ್ಟ್ರಹಳ್ಳಿ ದೊಡ್ಡಕೆರೆಯನ್ನು ನಿಯಮಾನುಸಾರ ಮರು ಟೆಂಡರ್ ಮೂಲಕ ವಿಲೇವಾರಿ ಮಾಡಿ ಸ್ಥಳೀಯ ಮೀನುಗಾರರ ಹಿತಾಸಕ್ತಿಯನ್ನು ಕಾಪಾಡಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಅಗತ್ಯ ಕ್ರಮ: ರಾಜಣ್ಣ

ಈ ಕುರಿತು ಪ್ರತಿಕ್ರಿಯಿಸಿದ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಡಾ. ರಾಜಣ್ಣ, ಮುಷ್ಟ್ರಹಳ್ಳಿ ದೊಡ್ಡಕೆರೆಯಲ್ಲಿ ಅಕ್ರಮ ಮೀನುಗಾರಿಕೆ ನಡೆಯುತ್ತಿರುವ ಮಾಹಿತಿ ನಮ್ಮ ಗಮನಕ್ಕೂ ಬಂದಿದೆ. ಸ್ಥಳೀಯ ಅಧಿಕಾರಿಗಳಿಗೆ ತಕ್ಷಣವೇ ಸ್ಥಳ ಪರಿಶೀಲನೆ ನಡೆಸಿ ಅಕ್ರಮ ತಡೆಯಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ನಿಯಮ ಉಲ್ಲಂಘಿಸಿರುವವರ ವಿರುದ್ಧ ಇಲಾಖಾ ನಿಯಮಾನುಸಾರ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

# ಜಗತ್ತಿಗೆ ಶಾಂತಿ ಬೋಧಿಸಿದ ಬುದ್ಧನ ಆದರ್ಶ: ಮಲ್ಲಪ್ಪ ಯರಗೋಳ

ದೊಡ್ಡಬಳ್ಳಾಪುರ

ಗೌತಮ ಬುದ್ಧನು ಜಗತ್ತಿಗೆ ಅಹಿಂಸೆ, ಕರುಣೆ ಮತ್ತು ಶಾಂತಿಯ ಮಾರ್ಗವನ್ನು ಬೋಧಿಸಿದ ದಾರಿ ತೋರಿದ ಮಹಾನ್ ದಾರ್ಶನಿಕ ಎಂದು ದೊಡ್ಡಬಳ್ಳಾಪುರ ತಾಲ್ಲೂಕು ತಹಶೀಲ್ದಾರ್ ಡಾ. ಮಲ್ಲಪ್ಪ ಕೆ ಯರಗೋಳ ತಿಳಿಸಿದರು.

ನಗರದ ಸರ್ಕಾರಿ ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ದೊಡ್ಡಬಳ್ಳಾಪುರ ಬೌದ್ಧ ದರ್ಮ ಸಮಾಜದ ವತಿಯಿಂದ ಗೌತಮ ಬುದ್ದ ಅವರ ಜೀವನ ಚರಿತ್ರೆ ಕುರಿತು ವಿದ್ಯಾರ್ಥಿಗಳಿಗೆ ನಡೆಸಿದ ಪ್ರಬಂಧ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿ ಅಸಮಾನತೆ, ಕಂದಾಚಾರಗಳಂತಹ ಆಚರಣೆಗಳಿಂದ ನರಳುತ್ತಿದ್ದ, ಜಗತ್ತಿಗೆ ಜ್ಞಾನದ ಬೆಳಕಾಗಿ, ಶಾಂತಿ, ಸಮಾನತೆಯ ದಾರಿ ತೋರಿದವರು ಭಗವಾನ್ ಬುದ್ಧರು. ಜಗತ್ತಿಗೆ ಶಾಂತಿ ಬೋಧಿಸಿದ ಬುದ್ಧನ ಆದರ್ಶ, ವಿಚಾರಗಳ ಬಗ್ಗೆ ಎಲ್ಲರಿಗೂ ಅರಿವು ಮೂಡಿಸಬೇಕಾಗಿದೆ ಎಂದರು.

ದೊಡ್ಡಬಳ್ಳಾಪುರ ತಾಲ್ಲೂಕು ಬೌದ್ಧ ದಮ್ಮ ಸಮಾಜದ ಕಾರ್ಯದರ್ಶಿ ರಾಜೇಂದ್ರ ಮಾತನಾಡಿ, ದೊಡ್ಡಬಳ್ಳಾಪುರ ಅಂಬೇಡ್ಕರ್ ಭವನದಲ್ಲಿ ಜು.29 ರಂದು ಬುಧವಾರ ಸಂಜೆ ಗಂಟೆಗೆ ದಮ್ಮಚಕ್ಕ ಪವತ್ತನ ದಿನಾಚರಣೆ ನಡೆಯಲಿದೆ. ಗೌತಮ ಬುದ್ಧನು ಜ್ಞಾನೋದಯದ ನಂತರ ತನ್ನ ಮೊದಲ ಐದು ಶಿಷ್ಯರಿಗೆ ಸಾರಾನಾಥದ ಜಿಂಕೆ ವನದಲ್ಲಿ ಮೊದಲ ಧರ್ಮೋಪದೇಶ ನೀಡಿದ ಪವಿತ್ರ ದಿನವನ್ನು ದಮ್ಮ ಚಕ್ಕ ಪವತ್ತನ ದಿನಾಚರಣೆ ಎಂದು ಆಚರಿಸಲಾಗುತ್ತದೆ . ಇದನ್ನು ಆಷಾಢ ಹುಣ್ಣಿಮೆಯಂದು ಆಚರಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸಿ.ಎನ್.ಶೇಷಾದ್ರಿ, ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಪಿ.ಗೋವಿಂದರಾಜು, ಬೌದ್ಧ ದಮ್ಮ ಸಮಾಜ ಅಧ್ಯಕ್ಷ ನಾಗರಾಜು, ವಿಶ್ವಜ್ಞಾನಿ ಸೇವಾ ಟ್ರಸ್ಟ್ ಪದಾಧಿಕಾರಿಗಳಾದ ನಾರಾಯಣಪ್ಪ, ಚಿಕ್ಕಣ್ಣ, ಗಂಗಬೈಲಪ್ಪ, ವಿದ್ಯಾರ್ಥಿ ನಿಲಯ ಮೇಲ್ವಿಚಾರಕ ಶಿವಪ್ಪ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ವಕೀಲರ ಸಂಘಕ್ಕೆ ಜಗದೀಶ್ ಆಯ್ಕೆ

ಕನಕಪುರ

ತಾಲೂಕಿನ ವಕೀಲರ ಸಂಘದ 2020–28 ನೇ ಸಾಲಿನ ನೂತನ ಅಧ್ಯಕ್ಷರಾಗಿ ಸಿ.ಎಂ.ಜಗದೀಶ ಹಾಗೂ ಉಪಾಧ್ಯಕ್ಷರಾಗಿ ಪಿ.ಮಹೇಶ ಆಯ್ಕೆಯಾದರು.

ನಗರದ ಜೆ.ಎಂ.ಎಫ್.ಸಿ ನ್ಯಾಯಾಲಯ ಆವರಣದಲ್ಲಿ ನಡೆದ ವಕೀಲರ ಸಂಘದ ಪದಾಧಿಕಾರಿಗಳ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸಿ.ಎಂ.ಜಗದೀಶ, ಉಪಾಧ್ಯಕ್ಷ ಸ್ಥಾನಕ್ಕೆ ಪಿ.ಮಹೇಶ ಆಯ್ಕೆಯಾದರು.

ನೂತನ ಕಾರ್ಯದರ್ಶಿ ಸ್ಥಾನಕ್ಕೆ ಕೆ.ಎನ್.ಮಂಜುನಾಥ, ಖಜಾಂಚಿ ಸ್ಥಾನಕ್ಕೆ ಬಿ.ಸಿ. ವಿಮಲ, ಮಹಿಳಾ ಕಾರ್ಯಕಾರಿ ಸಮಿತಿ ಸ್ಥಾನಕ್ಕೆ ಕೆ.ಸಿ.ಭಾವನಾ, ಬಿ.ಎಂ.ಗಂಗಮ್ಮ, ಪುರುಷರ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಜೆ.ಅಭಿಷೇಕ್, ಆರ್.ಚೇತನ್ ಕುಮಾರ್, ಡಿ.ಲೋಕೇಶ್, ಎಸ್. ಜೈರಾಮೇಗೌಡ, ನಬಿ.ಎಸ್.ಮಹೇಶ್ ಕುಮಾರ್, ಕೆ.ವಿ. ಸಂತೋಶ್, ಯು.ವಿಜಯ್ ಕುಮಾರ್ ರವರುಗಳು ಆಯ್ಕೆಯಾಗಿರುವುದಾಗಿ ಚುನಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಜಯಮಾದೇವ್ ಫಲಿತಾಂಶ ಘೋಷಿಸಿದರು.

ನೂತನ ಅಧ್ಯಕ್ಷ ಸಿ.ಎಂ.ಜಗದೀಶ ಮಾತನಾಡಿ ನನ್ನ ಎಲ್ಲಾ ಹಿರಿಯ ಮತ್ತು ಕಿರಿಯ ವಕೀಲರು ನನ್ನನ್ನು ಬಹುಮತ ದಿಂದ ಚುನಾಯಿಸಿದ್ದು ಅವರಿಗೆ ನನ್ನ ತುಂಬು ಹೃದಯದ ವಂದನೆಗಳನ್ನು ಸಲ್ಲಿಸುತ್ತಾ, ಬಾರ್ ಅಸೋಸಿಯೇಷನ್ ಎಲ್ಲಾ ಸಮಸ್ಯೆಗಳು ಮತ್ತು ಬೇಡಿಕೆಗಳನ್ನು ಗಮನ ಹರಿಸಿ ನನ್ನ ಕರ್ತವ್ಯವನ್ನು ನಿರ್ವಹಿಸುತ್ತೇನೆ ಎಂದು ತಿಳಿಸಿದರು.

ಸಂಘದ ಮಾಜಿ ಅಧ್ಯಕ್ಷ ಎ.ಸಿ.ಚನ್ನೇಗೌಡ, ವಕೀಲರಾದ ಮನೋಜ್ ಎಸ್.ವಿ.ವೀರಪ್ಪ,, ರೇಖಾ, ಪ್ರತಿಭಾ, ಮಹೇಂದ್ರ, ಕೆ.ಮಾದೇಗೌಡ, ಶಿವರುದ್ರಯ್ಯ, ಸಿ.ಎನ್.ನಾರಾಯಣ್, ಸಂಜಯ್, ಶಿವಶಂಕರ್, ಗುಂಡಣ್ಣ, ಕಿರಣ್‌ಕುಮಾರ್, ಸೇರಿದಂತೆ ಎಲ್ಲಾ ಹಿರಿಯ ಹಾಗೂ ಕಿರಿಯ ವಕೀಲ ರುಗಳು ಈ ವೇಳೆ ಉಪಸ್ಥಿತರಿದ್ದರು.

# ಕಾಮಗಾರಿಗಳ ಗುಣಮಟ್ಟ, ಅನುದಾನದ ಸಮರ್ಪಕ ಬಳಕೆ



ಬೂದಿಕೋಟೆ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ನರೇಗಾ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಗುಣಮಟ್ಟ, ಅನುದಾನದ ಸಮರ್ಪಕ ಬಳಕೆ ಹಾಗೂ ಸಾರ್ವಜನಿಕರಿಗೆ ಯೋಜನೆಯ ಸೌಲಭ್ಯಗಳು ಪರಿಣಾಮಕಾರಿಯಾಗಿ ತಲುಪಿರುವುದನ್ನು ಖಚಿತಪಡಿಸಿಕೊಳ್ಳಲು ಸಾಮಾಜಿಕ ಲೆಕ್ಕ ಪರಿಶೋಧನೆ ಅತ್ಯಂತ ಮಹತ್ವದ್ದಾಗಿದೆ ಎಂದು ಬಲಮಂದೆ ಗ್ರಾಮ ಪಂಚಾಯಿತಿಯ ಆಡಳಿತಾಧಿಕಾರಿ ಹಾಗೂ ತಾಲೂಕು ತೋಟಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕಿ ಶಿವಕುಮಾರಿ ಹೇಳಿದರು.

ಹೋಬಳಿಯ ಬಲಮಂದೆ ಗ್ರಾಮ ಪಂಚಾಯಿತಿಯಲ್ಲಿ ಆಯೋಜಿಸಿದ್ದ ನರೇಗಾ ಗ್ರಾಮ ಸಭೆ ಹಾಗೂ ಸಾಮಾಜಿಕ ಲೆಕ್ಕ ಪರಿಶೋಧನಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಗ್ರಾಮೀಣ ಜೀವನೋಪಾಯ ಅಭಿವೃದ್ಧಿ ಕಾರ್ಯಕ್ರಮವಾದ ನರೇಗಾ ಇದೀಗ ವಿಬಿಜಿ ರಾಮಜಿ ಆಗಿ ಪರಿವರ್ತನೆಗೊಂಡಿದ್ದು, ಇದರಡಿ ಸರ್ಕಾರದಿಂದ ದೊರೆಯುವ ವಿವಿಧ ಸೌಲಭ್ಯಗಳು ಮತ್ತು ಅವಕಾಶಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ನರೇಗಾ ಯೋಜನೆಯಡಿ ಕೈಗೊಂಡಿರುವ ಪ್ರತಿಯೊಂದು ಕಾಮಗಾರಿಯಲ್ಲೂ ಪಾರದರ್ಶಕತೆ, ಹೊಣೆಗಾರಿಕೆ ಹಾಗೂ ಸಾರ್ವಜನಿಕರ ಪಾಲ್ಗೊಳ್ಳುವಿಕೆ ಇರಬೇಕು. ಸಾಮಾಜಿಕ ಲೆಕ್ಕ ಪರಿಶೋಧನೆಯ ಮೂಲಕ ಗ್ರಾಮಸ್ಥರು ಕಾಮಗಾರಿಗಳ ಕುರಿತು ತಮ್ಮ ಅಭಿಪ್ರಾಯ, ಸಲಹೆ ಹಾಗೂ ದೂರುಗಳನ್ನು ಮುಕ್ತವಾಗಿ ದಾಖಲಿಸಬಹುದು. ಇದರಿಂದ ಯೋಜನೆಗಳ ಅನುಷ್ಠಾನ ಇನ್ನಷ್ಟು ಪರಿಣಾಮಕಾರಿಯಾಗುತ್ತದೆ ಎಂದರು. ಸಭೆಯಲ್ಲಿ ಸಾಮಾಜಿಕ ಲೆಕ್ಕ ಪರಿಶೋಧನಾ ತಂಡದವರು ನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ವಿವರ, ವೆಚ್ಚ, ಕೂಲಿ ಪಾವತಿ ಹಾಗೂ ದಾಖಲೆಗಳ ಕುರಿತು ಮಾಹಿತಿ ನೀಡಿದರು. ಗ್ರಾಮಸ್ಥರಿಂದ ಬಂದ ಪ್ರಶ್ನೆಗಳಿಗೆ ಅಧಿಕಾರಿಗಳು ಉತ್ತರಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಭಾಸ್ಕರ್, ಕಾರ್ಯದರ್ಶಿ ರವಿಕುಮಾರ್, ಸಾಮಾಜಿಕ ಲೆಕ್ಕಪರಿಶೋಧನಾಧಿಕಾರಿ ನಾರಾಯಣಸ್ವಾಮಿ ಪಂಚಾಯಿತಿ ಸಿಬ್ಬಂದಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ವೀರ ಯೋಧರಿಗೆ ಗೌರವ ನಮನ: ಸೇವೆ ಸ್ಮರಣೆ



ತುಮಕೂರು

ಭಾರತೀಯ ವೀರ ಯೋಧರು ಪರಾಕ್ರಮ ಮೆರೆದು ಶತ್ರುಗಳ ಹುಟ್ಟಡಗಿಸಿ ಭಾರತ ಮಾತೆಯ ವಿಜಯಪತಾಕೆ ಹಾರಿಸಿದ ದಿನವನ್ನು ದೇಶ ಭಕ್ತಿ ಜಾಗೃತಿ ಕಾರ್ಯಕ್ರಮವಾಗಿ ವಿಜಯ್ ದಿವಸ್ ಎಂದು ಸೋಮವಾರ ನಗರದಲ್ಲಿ ಆಚರಿಸಿದ ಭಗತ್ ಕ್ರಾಂತಿ ಸೇನೆ ಮುಖಂಡರು ವೀರ ಯೋಧರಿಗೆ ಗೌರವ ನಮನ ಸಲ್ಲಿಸಿ ಅವರ ತ್ಯಾಗದ ಸ್ಮರಣೆ ಮಾಡಿದರು.

ನಗರದ ಬಿಜಿಎಸ್ ವೃತ್ತದಲ್ಲಿ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅವರು, ಭಾರತಮಾತೆ ಚಿತ್ರ ಹಾಗೂ ಹುತಾತ್ಮ ಯೋಧರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ಸಾವು ನೋವನ್ನು ಲೆಕ್ಕಿಸದೆ ಜೀವದ ಹಂಗು ತೊರೆದು ದೇಶದ ಗಡಿಯಲ್ಲಿ ಕಾವಲು ಕಾಯುತ್ತಿರುವ ನಮ್ಮ ಯೋಧರು ನಮ್ಮ ರಕ್ಷಣೆ ಮಾಡುತ್ತಿದ್ದಾರೆ. ಅವರ ತ್ಯಾಗವನ್ನು ಪ್ರತಿಯೊಬ್ಬ ಭಾರತೀಯರೂ ಗೌರವಿಸಿ ಕೃತಜ್ಞತೆ ಸಲ್ಲಿಸಬೇಕು. ಎಲ್ಲದಕ್ಕಿಂಥಾ ದೇಶವೇ ಮೊದಲು ಎನ್ನುವ ಮನೋಭಾವ ಬೆಳೆಸಿಕೊಂಡು ದೇಶಪ್ರೇಮ ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಿವೃತ್ತ ಯೋಧರಾದ ಸಿದ್ಧಗಂಗಯ್ಯ, ಪ್ರಸನ್ನ ಕುಮಾರ್, ರಾಜಣ್ಣ, ಸೋಮಯ್ಯ, ನಾಗರಾಜಯ್ಯ ಅವರನ್ನು ಭಗತ್ ಕ್ರಾಂತಿ ಸೇನೆಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಭಗತ್ ಕ್ರಾಂತಿ ಸೇನೆ ಮುಖಂಡರಾದ ಆರಾಧ್ಯ ಮಂಚಲದೊರೆ, ಚೇತನ್, ಶ್ರೀನಿವಾಸಗೌಡ, ಹೇಮಂತ್, ರಾಕೇಶ್, ವಿನಯ್, ರಘು, ಅಜಯ್, ಪ್ರತೀಕ್, ಕೆಂಪರಾಜು, ಸತೀಶ್, ಮದನ್ ಪಟೇಲ್, ಅಭಿ, ಮಿಥುನ್, ಶಾಮಣ್ಣ, ಮುಖಂಡರಾದ ರವಿ ಚೆಂಗಾವರ, ನಿಸರ್ಗ ರಮೇಶ್, ಬಂಬೂ ಮೋಹನ್, ಪ್ರತಾಪ್, ಕಿರಣ್, ಕೇಬಲ್ ಬಸವರಾಜು ಮೊದಲಾದವರು ಭಾಗವಹಿಸಿದ್ದರು.

# ನ್ಯಾಯಾಧೀಶರ ವಿರುದ್ಧ ಅವಹೇಳನಕಾರಿ ಹೇಳಿಕೆ ಬೇಸರ



ಮಾಲೂರು

ನಗರದ ಜೆಎಂಎಫ್‌ಸಿ ನ್ಯಾಯಾಲಯದ ಸಿವಿಲ್ ನ್ಯಾಯಾಧೀಶರಾದ ಗಾಯಿತ್ರಿ ಅವರ ವಿರುದ್ಧವಾಗಿ ಸುಳ್ಳು ಸುದ್ದಿ ಹಬ್ಬಿಸುತ್ತಿರುವವರ ವಿರುದ್ಧವಾಗಿ ನ್ಯಾಯಾಲಯದ ಕಾರ್ಯಕಲಾಪಗಳಿಂದ ಹೊರಗುಳಿದು ಪ್ರಧಾನ ಸಿವಿಲ್ ನ್ಯಾಯಾಧೀಶರಿಗೆ ಬೆಂಬಲ ಸೂಚಿಸುತ್ತಿರುವದಾಗಿ ತಾಲೂಕು ವಕೀಲರ ಸಂಘದ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಹೇಳಿದರು.

ನಗರದ ಜೆಎಂಎಫ್‌ಸಿ ನ್ಯಾಯಾಲಯದ ಆವರಣದಲ್ಲಿರುವ ವಕೀಲರ ಸಂಘದ ಕಚೇರಿಯ ಸಭಾಂಗಣದಲ್ಲಿ ಸಭೆ ನಡೆಸಿ ಜುಲೈ 18ರಂದು ನಡೆದ ಘಟನೆಯನ್ನು ಖಂಡಿಸಿ ನಿರ್ಣಯ ಕೈಗೊಂಡು ನ್ಯಾಯಾಲಯದ ಕಾರ್ಯ ಕಲಾಪಗಳಿಂದ ಹೊರಗುಳಿದು ನ್ಯಾಯಾದೀಶರಿಗೆ ಬೆಂಬಲ ಸೂಚಿಸಿ ನ್ಯಾಯಾಲಯದ ಮುಂಭಾಗ ಮಾತನಾಡಿದ ಅವರು

ಕಳೆದ ಒಂದುವಾರದಿಂದ ನ್ಯಾಯಾಧೀಶರ ವಿರುದ್ಧವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರಿಸುತ್ತಿರುವ ಸುದ್ದಿಗಳನ್ನು ಕಾದು ನೋಡಿದ್ದೇವೆ, ದಿನೇ ದಿನೇ ಅವಹೇಳನಕಾರಿ ಹೇಳಿಕೆಗಳು ವಿಡಿಯೋಗಳು ಅಪ್ಲೋಡ್ ಮಾಡುತ್ತಿರುವುದು ಬೇಸರದ ಸಂಗತಿಯಾಗಿದೆ, ಬೆಂಗಳೂರು ವಕೀಲರ ಸಂಘದ ಅಧ್ಯಕ್ಷರಾದ ವಿವೇಕ್ ಸುಬ್ಬಾರೆಡ್ಡಿ ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ನಮ್ಮ ಸಂಘದ ಸದಸ್ಯರು ಯಾರು ಸಹ ಅವರಿಗೆ ನ್ಯಾಯಾಧೀಶರನ್ನು ವರ್ಗಾವಣೆ ಮಾಡಿ ಅಮಾನತ್ತು ಮಾಡಿ ಎಂದು ಅರ್ಜಿ ಸಲ್ಲಿಸಿಲ್ಲ ಆದರೆ ಅವರೇ ಸ್ವತಹ ವಿಡಿಯೋ ನೋಡಿ ರಿಜಿಸ್ಟರ್‌ಗೆ ದೂರು ನೀಡಿದ್ದಾರೆ. ನೀವು ಬೆಂಗಳೂರು ವಕೀಲರ ಸಂಘದ ಅಧ್ಯಕ್ಷರಾಗಿದ್ದು, ಮಾಲೂರು ಸಂಘದ ಅಧ್ಯಕ್ಷರು ಅಲ್ಲ ಪದಾಧಿಕಾರಿಗಳು ಅಲ್ಲ, ನಾವೇನು ನಿಮ್ಮಲ್ಲಿ ಮನವಿ ಮಾಡಲಿಲ್ಲ, ಸ್ಥಳೀಯವಾಗಿ ನಡೆಯುತ್ತಿರುವ ವಿಷಯಗಳ ಬಗ್ಗೆ ನಿಮಗೆ ಅರಿವಿಲ್ಲ ಸಮಾಜದ ಘಾತುಕ ಶಕ್ತಿಗಳು ಬೆಳೆದು ನಿಂತಿವೆ, ನ್ಯಾಯಾಧೀಶರು ಇಲ್ಲಿಗೆ ವರ್ಗಾವಣೆಯಾಗಿ ಬಂದು ಎರಡು ತಿಂಗಳು ಕಳೆದಿವೆ, ಅನಾಮದೆಯ ವ್ಯಕ್ತಿ ಆಸಿಡ್ ಎರಚಿದವರನ್ನು ಬಂಧಿಸಿದ್ದರೆ, ಈ ಘಟನೆ ನಡೆಯುತ್ತಿರಲಿಲ್ಲವೇನೋ. ಜುಲೈ 18ರಂದು ನ್ಯಾಯಾಧೀಶರು ಅವರ ವಸತಿಗೃಹಕ್ಕೆ ಊಟಕ್ಕೆ ಹೋಗಿ ಬರುವ ವೇಳೆ ವಿನಯ್ ವೆಂಕಟೇಶ್ ನ್ಯಾಯಾಧೀಶರ ಕಾರಿನ ಮೇಲೆ ದಾಳಿ ನಡೆಸಿ ಅಶ್ಲೀಲ ಪದಗಳಿಂದ ನಿಂದಿಸಿದ್ದಾರೆ, ಜುಲೈ 9ರ ಘಟನೆಯನ್ನು ನೆನಪಿನಲ್ಲಿಟ್ಟುಕೊಂಡು. ಪೂರ್ವ ನಿಯೋಜಿತ ಕೃತ್ಯವಾಗಿ ಜುಲೈ 18ರಂದು ಎರಡನೇ ಅಂತಸ್ತಿನಿಂದ ವಿಡಿಯೋ ಮಾಡಿಸಿ ಮೂರು ದಿನಗಳ ನಂತರ ಎಡಿಟಿಂಗ್ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದುಬಿಡುತ್ತಾರೆ ಅವರು ಅವ್ಯಾಚ್ಚ ಶಬ್ದಗಳಿಂದ ನಿಂದಿಸಿರುವದು ಅಪ್ಲೋಡ್ ಮಾಡುವುದಿಲ್ಲ ಯಾರೋ ಒಬ್ಬರಿಗೆ ಹಣ ನೀಡಿ ಪ್ರಚಾರ ಮಾಡಿಸಿಕೊಳ್ಳುತ್ತಾರೆ. ನ್ಯಾಯಾಂಗ ಅಸ್ಥಿರಗೊಳಿಸುವ ಪ್ರಯತ್ನ ಮಾಡಿದರೆ ನಾವು ಸಮಾಜದಲ್ಲಿ ಬದುಕಲು ಅಸಾಧ್ಯವಾಗುತ್ತದೆ ವರ್ಗಾವಣೆ ಮತ್ತೊಂದು ತೀರ್ಮಾನ ಕೈಗೊಂಡರೆ ಮತ್ತೊಬ್ಬ ಅಧಿಕಾರಿಗಳು ಕಾರ್ಯನಿರ್ವಹಿಸಲು ಕಷ್ಟಕರವಾಗಬಹುದು ಎಂದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಅಮರನಾರಾಯಣ, ಕೆ.ಎಚ್. ಹರೀಶ್ ಕುಮಾರ್, ಡಿ.ನಾರಾಯಣಸ್ವಾಮಿ, ಎಂ,ಮುನಿರಾಜು, ಕೆ.ಮುನಿಯಪ್ಪ, ಸಿ.ಅಶ್ವತ್ ನಾರಾಯಣ, ವಕೀಲ ಸುನಿಲ್ ಕುಮಾರ್, ಹೆಚ್.ಎಲ್. ನಾಗರಾಜ್, ಪ್ರದೀಪ್, ರಾಜೇಶ್, ರಾಮೇಗೌಡ, ರಮೇಶ್, ಆನಂದ್, ಅಂಗಸ ಗಿರಿಯಪ್ಪ, ಸುಬ್ರಮಣಿ, ವಿನಯ್, ಭುವನ, ಶ್ರೀನಿವಾಸ್ ಕಿರಣ್, ಲಕ್ಷ್ಮೀ, ಉಷಾ, ವರಲಕ್ಷ್ಮೀ ಭುವನ, ಮಂಜುಳಾದೇವಿ, ಚಂದ್ರಹಾಸ್, ಇನ್ನಿತರರು ಹಾಜರಿದ್ದರು.

# 29ರಂದು ಶ್ರೀ ಹಡಪದ ಅಪ್ಪಣ್ಣ ಜಯಂತಿ

ತುಮಕೂರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾ ನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಇದೇ 29ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ಶ್ರೀ ಹಡಪದ ಅಪ್ಪಣ್ಣ ಜಯಂತಿ" ಕಾರ್ಯಕ್ರಮ ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಆಚರಿಸಲಾಗುತ್ತಿದ್ದು, ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಸಮುದಾಯದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿ/ಸಿಬ್ಬಂದಿ ವರ್ಗದವರು, ಸಮಾಜದ ಗಣ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ ಕೆ.ಮಿರ್ಜಿ ಮನವಿ ಮಾಡಿದ್ದಾರೆ.

# 30ರಂದು ನೇರ ಉದ್ಯೋಗ ಸಂದರ್ಶನ

ತುಮಕೂರು

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕ್ವೆಸ್ ಕಾರ್ಪ್ ಪ್ರೈ. ಲಿ. ಹಾಗೂ ಹೆಚ್.ಡಿ.ಬಿ. ಫೈನಾನ್ಸ್ ಸರ್ವಿಸಸ್ ಪ್ರೈ. ಲಿ. ಸಂಸ್ಥೆಯ ಸಹಭಾಗಿತ್ವದಲ್ಲಿ ಡಾಟಾ ಎಂಟ್ರಿ ಆಪರೇಟರ್, ಬ್ರಾಂಡ್ ಪ್ರಮೋಟರ್ (ಏರ್‌ಟೆಲ್ & ಸ್ಯಾಮ್‌ಸಂಗ್) ಹಾಗೂ ಸೇಲ್ಸ್ ಆಫೀಸರ್ ಹುದ್ದೆಗಳಿಗೆ ಇದೇ 30ರಂದು ನೇರ ಸಂದರ್ಶನ ನಡೆಯಲಿದೆ. ಪಿಯುಸಿ ಮತ್ತು ಯಾವುದೇ ಪದವಿ ಪಾಸಾದ ಅಭ್ಯರ್ಥಿಗಳು ನೇರಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ವೇತನ 14,500 ರಿಂದ 18,000 ರೂ.ಗಳವರೆಗೆ ನೀಡಲಾಗುತ್ತದೆ. ಅರ್ಹ ಅಭ್ಯರ್ಥಿಗಳು ಜುಲೈ 30ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಡಿ.ಡಿ.ಪಿ.ಐ ಬಸ್ ನಿಲ್ದಾಣ, ವಾಸನ್ ಕಣ್ಣಿನ ಆಸ್ಪತ್ರೆ ಹತ್ತಿರ, ಮೂಲೆಮನೆ ಹೋಟಲ್ ಪಕ್ಕ, ಸೋಮೇಶ್ವರಪುರಂ, 14ನೇ ಕ್ರಾಸ್, ತುಮಕೂರು–572102 ಇಲ್ಲಿ ತಮ್ಮ ಬಯೋಡೇಟಾದೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816–2278488, ಮೊ.ಸಂ. 8792669410, 7760174554ನ್ನು ಸಂಪರ್ಕಿಸಬೇಕೆಂದು ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹದಗೆಟ್ಟ ರಸ್ತೆ: ದುರಸ್ತಿಗೆ ಆಗ್ರಹ



ವಿಜಯಪುರ

ಪಟ್ಟಣದ ಚನ್ನಕೇಶವ ಸ್ವಾಮಿ ದೇವಾಲಯದ ಪಕ್ಕದಲ್ಲಿರುವ ಮುಖ್ಯ ರಸ್ತೆಯಲ್ಲಿ ವಾಹನಗಳನ್ನು ಅಡ್ಡಾದಿಡ್ಡಿಯಾಗಿ ಹೆಚ್ಚಿನ ಸಂಖ್ಯೆಯಲ್ಲಿ ನಿಲ್ಲಿಸುವುದರಿಂದ ಮತ್ತು ರಸ್ತೆ ಹದಗೆಟ್ಟಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಮುಖಂಡ ಅಶೋಕ್ ಆರೋಪಿಸಿದ್ದಾರೆ.

ಸ್ವಲ್ಪ ಮಳೆ ಬಂದರೂ ರಸ್ತೆಯಲ್ಲಿ ಗುಂಡಿಗಳು ಬಿದ್ದು ನೀರು ನಿಲ್ಲುತ್ತಿದೆ. ಕಳೆದ ಕೆಲವು ದಿನಗಳಿಂದ ಸುರಿದ ಮಳೆಯಿಂದಾಗಿ ರಸ್ತೆಯುದ್ದಕ್ಕೂ ಕೆಸರು, ಕೊಚ್ಚೆ ಗುಂಡಿಗಳು ನಿರ್ಮಾಣವಾಗಿವೆ. ರಸ್ತೆಯ ಮಧ್ಯದಲ್ಲೇ ಮಳೆ ನೀರು ನಿಂತು ವಾಹನ ಸಂಚಾರಕ್ಕೆ ಅಡಚಣೆಯಾಗಿದೆ. ದ್ವಿಚಕ್ರ ವಾಹನ ಸವಾರರು ಜಾರಿ ಬೀಳುವ ಭೀತಿ ಎದುರಿಸುತ್ತಿದ್ದಾರೆ. ದೇವಾಲಯಕ್ಕೆ ಬರುವ ಭಕ್ತರ ಸಂಖ್ಯೆ ಹೆಚ್ಚಿರುವುದರಿಂದ ಈ ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಿದೆ. ರಸ್ತೆಯ ಎರಡೂ ಬದಿಯಲ್ಲಿ ಕಾರು, ವ್ಯಾನ್ ಗಳನ್ನು ನಿಲ್ಲಿಸುವುದರಿಂದ ರಸ್ತೆ ಕಿರಿದಾಗಿ ಸಂಚಾರಕ್ಕೆ ಮತ್ತಷ್ಟು ತೊಂದರೆಯಾಗುತ್ತಿದೆ. ಪಾದಚಾರಿಗಳಿಗೂ ನಡೆದಾಡಲು ಕಷ್ಟವಾಗುತ್ತಿದೆ.

ಈ ಬಗ್ಗೆ ಮಾತನಾಡಿದ ಸ್ಥಳೀಯರಾದ ಅಶೋಕ್ ಅವರು, ಸಂಬಂಧಪಟ್ಟ ಪುರಸಭೆ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ರಸ್ತೆಯನ್ನು ಸರಿಪಡಿಸಬೇಕು. ನೀರು ಸರಾಗವಾಗಿ ಹರಿದು ಹೋಗಲು ಚರಂಡಿ ವ್ಯವಸ್ಥೆ ಮಾಡಬೇಕು ಮತ್ತು ಅಕ್ರಮ ವಾಹನ ನಿಲುಗಡೆಗೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದ್ದಾರೆ.

# ಕುಡಿಯುವ ನೀರಿನ ಸಮಸ್ಯೆಯಿಂದ ಕೆಜಿಎಫ್‌ಗೆ ಮುಕ್ತಿ: ಶಾಸಕಿ



ಬೇತಮಂಗಲ

ಹುಲ್ಕೂರು ಗ್ರಾ.ಪಂ ವ್ಯಾಪ್ತಿಯ ವೆಂಕಟಾಪುರ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿಶೇಷ ಅನುದಾನದಡಿ ನೂತನವಾಗಿ ನಿರ್ಮಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕೆಜಿಎಫ್ ಶಾಸಕಿ ರೂಪಕಲಾ ಶಶಿಧರ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಅಗತ್ಯ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಸಮಾಜ ಕಲ್ಯಾಣ ಇಲಾಖೆಯ ವಿಶೇಷ ಅನುದಾನದಡಿ ಪ್ರತಿ ಶುದ್ಧ ನೀರಿನ ಘಟಕವನ್ನು ಸುಮಾರು 12 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಹಂತ ಹಂತವಾಗಿ ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಇಂತಹ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಒದಗಿಸುವ ಮೂಲಕ ಕೆಜಿಎಫ್ ಕ್ಷೇತ್ರವನ್ನು ಕುಡಿಯುವ ನೀರಿನ ಸಮಸ್ಯೆಯಿಂದ ಮುಕ್ತಗೊಳಿಸುವ ಗುರಿಯನ್ನು ಹೊಂದಿದ್ದೇವೆ ಎಂದು ತಿಳಿಸಿದರು.

ವೆಂಕಟಾಪುರ ಗ್ರಾಮದ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಜಯರಾಮ್ ರೆಡ್ಡಿ ಮಾತನಾಡಿ, ನಮ್ಮ ಗ್ರಾಮದಲ್ಲಿ ಹಲವು ವರ್ಷಗಳಿಂದ ಕುಡಿಯುವ ನೀರಿನ ತೀವ್ರ ಸಮಸ್ಯೆ ಇತ್ತು. ಗ್ರಾಮಸ್ಥರು ಸುಮಾರು ಎರಡು ಕಿಲೋಮೀಟರ್ ದೂರ ಹೋಗಿ ಶುದ್ಧ ನೀರನ್ನು ತರುತ್ತಿದ್ದರು. ಈಗ ಶಾಸಕಿ ರೂಪಕಲಾ ಶಶಿಧರ್ ಅವರ ಪ್ರಯತ್ನದಿಂದ ಈ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆತಿದ್ದು, ಗ್ರಾಮಸ್ಥರ ಪರವಾಗಿ ಅವರಿಗೆ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸುತ್ತೇವೆ ಎಂದರು.

ಅದೇ ವೇಳೆ, ನಮ್ಮ ಗ್ರಾಮಕ್ಕೆ ಇನ್ನೂ ಬಸ್ ನಿಲ್ದಾಣದ ಸೌಲಭ್ಯ ಇಲ್ಲದಿರುವುದನ್ನು ಶಾಸಕರ ಗಮನಕ್ಕೆ ತಂದಿದ್ದೇವೆ. ಈ ಸಮಸ್ಯೆಯನ್ನು ಅತಿ ಶೀಘ್ರದಲ್ಲಿ ಪರಿಹರಿಸುವುದಾಗಿ ಅವರು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಮುಖಂಡ ಅ. ಮು. ಲಕ್ಷ್ಮೀನಾರಾಯಣ, ಪ್ರಸನ್ನ, ವಿನೂ ಕಾರ್ತಿಕ್, ಸುರೇಂದ್ರ ಗೌಡ, ಶಂಕರಮ್ಮ, ನಾಗರತ್ನಮ್ಮ, ಶ್ರೀಶಕ್ತಿ ಸಂಘದ ಸದಸ್ಯರು, ಗ್ರಾಮ ಪಂಚಾಯಿತಿ ಸಿಬ್ಬಂದಿ, ಮಹಿಳೆಯರು,ಗ್ರಾಮಸ್ಥರು ಉಪಸ್ಥಿತರಿದ್ದರು.

ಭಾರತ ಸಾರಥಿ

29/07/2026

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ನಾಯಕತ್ವ ಕಾರ್ಯಾಗಾರ

ಕೋಲಾರ

ಮಡಿಲು ಶಾಲೆ, ಕೋಲಾರ ಹಾಗೂ ರೋಟರಿ ಸಂಸ್ಥೆ ಕೋಲಾರ ಇವರುಗಳ ವತಿಯಿಂದ "ಲೀಡ್-ಇನ್‌ಫ್ಲುಯೆನ್ಸ್ ಇನ್‌ಸ್ಪೈರ್" ನಾಯಕತ್ವ ಕಾರ್ಯಾಗಾರವನ್ನು ಮಡಿಲು ಶಾಲೆ ಕೋಲಾರದಲ್ಲಿ ಆಯೋಜಿಸಲಾಗಿತ್ತು.

ಅಧಿಕಾರ ಅಥವಾ ಹುದ್ದೆಯಿಲ್ಲದಿದ್ದರೂ ಸಮಾಜದಲ್ಲಿ ಪ್ರಭಾವ ಬೀರುವ ನಾಯಕತ್ವವನ್ನು ಬೆಳೆಸುವ ಉದ್ದೇಶದಿಂದ ಈ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಬೆಳಿಗ್ಗೆ ಪರಿಚಯಾತ್ಮಕ ಚಟುವಟಿಕೆಗಳ ಮೂಲಕ ಆರಂಭವಾದ ಕಾರ್ಯಕ್ರಮದಲ್ಲಿ ಭಾಗವಹಿಸಿದವರು ತಮ್ಮ ಪರಿಚಯದೊಂದಿಗೆ ತಮ್ಮಲ್ಲಿರುವ ಉತ್ತಮ ಗುಣಗಳನ್ನು ಹಂಚಿಕೊಂಡರು. ನಂತರ ನಾಯಕತ್ವ ಎಂದರೇನು, ನಾಯಕತ್ವ ಎಲ್ಲರಿಂದಲೂ ಸಾಧ್ಯವೇ ಹಾಗೂ ಈ ಕಾರ್ಯಾಗಾರದ ಉದ್ದೇಶವೇನು ಎಂಬ ವಿಷಯಗಳ ಕುರಿತು ಸಂವಾದ ನಡೆಯಿತು.

"ನನ್ನ ನಾಯಕತ್ವದ ಕಥೆ" ಎಂಬ ಚಟುವಟಿಕೆಯಲ್ಲಿ, ಯಾವುದೇ ಅಧಿಕೃತ ಅಧಿಕಾರವಿಲ್ಲದಿದ್ದರೂ ತಮ್ಮ ಜೀವನದಲ್ಲಿ ಇತರರ ಮೇಲೆ ಸಕಾರಾತ್ಮಕ ಪ್ರಭಾವ ಬೀರಿದ ಅಥವಾ ಸಮಸ್ಯೆ ಪರಿಹರಿಸಿದ ಅನುಭವಗಳನ್ನು ಭಾಗವಹಿಸಿದವರು ಹಂಚಿಕೊಂಡರು. ಇದರಿಂದ ನಾಯಕತ್ವವು ಹುದ್ದೆಯಿಂದಲ್ಲ, ಜವಾಬ್ದಾರಿ ಮತ್ತು ಪ್ರಭಾವದಿಂದ ಆರಂಭವಾಗುತ್ತದೆ ಎಂಬ ಸಂದೇಶ ಸ್ಪಷ್ಟವಾಯಿತು.

ಕಾರ್ಯಾಗಾರದಲ್ಲಿ ಪ್ರೇರಣೆ ನೀಡಿದ ನಾಯಕರ ಗುಣಲಕ್ಷಣಗಳ ಕುರಿತು ಚಿಂತನೆ ನಡೆಸಲಾಯಿತು. ಪ್ರಾಮಾಣಿಕತೆ, ಧೈರ್ಯ, ಕರುಣೆ, ದೃಷ್ಟಿಕೋನ, ಸೇವಾ ಮನೋಭಾವ, ಆಲಿಸುವ ಗುಣ ಮತ್ತು ತಂಡದೊಂದಿಗೆ ಕಾರ್ಯನಿರ್ವಹಿಸುವ ಸಾಮರ್ಥ್ಯದಂತಹ ನಾಯಕತ್ವದ ಮೌಲ್ಯಗಳನ್ನು ಗುರುತಿಸಲಾಯಿತು.

ನಂತರ ನಡೆದ ಅಧಿವೇಶನದಲ್ಲಿ ನಾಯಕತ್ವ ಮತ್ತು ಅಧಿಕಾರ, ನಾಯಕತ್ವ ಮತ್ತು ನಿರ್ವಹಣೆ, ಹುದ್ದೆ ಮತ್ತು ಪ್ರಭಾವ, ಶಕ್ತಿ ಮತ್ತು ಸೇವೆ ನಡುವಿನ ವ್ಯತ್ಯಾಸಗಳನ್ನು ಉದಾಹರಣೆಗಳೊಂದಿಗೆ ವಿವರಿಸಲಾಯಿತು. ಕುಟುಂಬ, ಕೆಲಸದ ಸ್ಥಳ, ಗ್ರಾಮ ಹಾಗೂ ಸಮುದಾಯದಲ್ಲಿ ನಾಯಕತ್ವದ ಮಹತ್ವವನ್ನು ಚರ್ಚಿಸಲಾಯಿತು.


ಮಧ್ಯಾಹ್ನದ ಅಧಿವೇಶನದಲ್ಲಿ "ನನ್ನ ತಂಡ, ನನ್ನ ಸಂಸ್ಥೆ ಮತ್ತು ನನ್ನ ಸಮುದಾಯ" ಎಂಬ ಮೂರು ನಾಯಕತ್ವದ ವಲಯಗಳ ಮೂಲಕ ಭಾಗವಹಿಸಿದವರು ತಮ್ಮ ಪ್ರಭಾವದ ವ್ಯಾಪ್ತಿಯನ್ನು ಗುರುತಿಸಿದರು. ಧೈರ್ಯ, ಸ್ವತಂತ್ರ ಚಿಂತನೆ, ಉತ್ಸಾಹ, ಕಾರ್ಯತಂತ್ರ, ಸಹಭಾಗಿತ್ವ ನಿರ್ಮಾಣ, ಸಮಯಪ್ರಜ್ಞೆ, ಜನರ ಬಗ್ಗೆ ಕಾಳಜಿ ಮತ್ತು ಜಾಲ ನಿರ್ಮಾಣ ಸೇರಿದಂತೆ ಎಂಟು ಪ್ರಮುಖ ನಾಯಕತ್ವ ಗುಣಗಳ ಕುರಿತು ಚರ್ಚೆ ನಡೆಯಿತು.

ಕೊನೆಯಲ್ಲಿ ಪ್ರತಿಯೊಬ್ಬರೂ ಮುಂದಿನ 30 ದಿನಗಳಲ್ಲಿ ಕೈಗೊಳ್ಳುವ ಒಂದು ನಾಯಕತ್ವದ ಸಂಕಲ್ಪವನ್ನು ಬರೆದು ಹಂಚಿಕೊಂಡರು. "ನಾಯಕತ್ವವೆಂದರೆ ಅಧಿಕಾರದಲ್ಲಿರುವುದಲ್ಲ ಜವಾಬ್ದಾರಿಯನ್ನು ಸ್ವೀಕರಿಸುವುದಾಗಿದೆ ಎಂಬ ಸಂದೇಶದೊಂದಿಗೆ ಕಾರ್ಯಾಗಾರ ಮುಕ್ತಾಯಗೊಂಡಿತು.

ಈ ಕಾರ್ಯಕ್ರಮವನ್ನು ಕೋಲಾರ ರೋಟರಿ ಸಂಸ್ಥೆ ಕಾರ್ಯದರ್ಶಿ ರೋ. ಬಿ ಕೆ ನಾಗರಾಜ್ ಉದ್ಘಾಟಿಸಿದರು. ಮಡಿಲು ಶಾಲೆಯ ಅನಿತಾ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಈ ಕಾರ್ಯಕ್ರಮವು ಹರಿ ಸ್ಮರಣ್ ಮತ್ತು ವರುಣ್ ರವರು ಪಠಿಸಿದ ಮೇಧಾ ಸೂಕ್ತದಿಂದ ಪ್ರಾರಂಭವಾಯಿತು. ಈ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಶೈಲಜಾ ಶಂಕರ ನಾರಾಯಣ, ಸೀನಿಯರ್ ಸ್ಟೇಟ್ ಅಸೋಸಿಯೇಟ್, ಫೌಂಡೇಶನ್ ಫಾರ್ ರೆಸ್ಪಾನ್ಸಿವ್ ಗವರ್ನೆನ್ಸ್ ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಸಿಕೊಟ್ಟರು.

ಈ ಕಾರ್ಯಕ್ರಮಕ್ಕೆ ಫೌಂಡೇಶನ್ ಫಾರ್ ರೆಸ್ಪಾನ್ಸಿವ್ ಗವರ್ನೆನ್ಸ್‌ನ ಬಿಜಾಪುರ, ಎಚ್.ಡಿ ಕೋಟೆ ಹಾಗೂ ಮುಳಬಾಗಿಲು ತಾಲೂಕಿನ ತಂಡದ ಸದಸ್ಯರು ಹಾಜರಿದ್ದರು. ಹಾಗೆ ಮಡಿಲು ಶಾಲೆಯ ಮುಖ್ಯಸ್ಥೆ ಸೌಮ್ಯ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಮಲ್ಲೇಶೆಟ್ಟಿ ಆರೋಗ್ಯ ಕೇಂದ್ರಕ್ಕೆ ಅಮೇರಿಕಾ ವಿಜ್ಞಾನಿಗಳ ಭೇಟಿ



ಶಿಡ್ಲಘಟ್ಟ

ತಾಲ್ಲೂಕಿನ ಮಳ್ಳೂರಿನ ಗೌರಮ್ಮ ಮಲ್ಲೇಶೆಟ್ಟಿ ಆರೋಗ್ಯ ಕೇಂದ್ರಕ್ಕೆ ಅಮೇರಿಕಾ (ಯುಎಸ್‌ಎ) ದೇಶದ ವಿಜ್ಞಾನಿಗಳ (ಸೈಂಟಿಸ್ಟ್‌ಗಳ) ತಂಡ ಭೇಟಿ ನೀಡಿ, ಕೇಂದ್ರದಲ್ಲಿ ನಡೆಯುತ್ತಿರುವ ಆರೋಗ್ಯ ಸೇವೆಗಳು ಹಾಗೂ ಸಮಾಜಮುಖಿ ಕಾರ್ಯಕ್ರಮಗಳನ್ನು ಪರಿಶೀಲಿಸಿತು.

ನಂತರ ವಿಜ್ಞಾನಿಗಳು ಮಧುಮೇಹ (ಡಯಾಬಿಟಿಸ್) ನಿಯಂತ್ರಣಕ್ಕೆ ಆಹಾರ ಪದ್ಧತಿಯ ಮಹತ್ವವನ್ನು ವಿವರಿಸಿ, ಉತ್ತಮ ಗುಣಮಟ್ಟದ ಅಕ್ಕಿಯನ್ನು ಆಹಾರದಲ್ಲಿ ಬಳಸುವುದರಿಂದ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಸಲಹೆ ನೀಡಿದರು. ಜೊತೆಗೆ ಆರೋಗ್ಯಕರ ಜೀವನಶೈಲಿ, ಸಮತೋಲಿತ ಆಹಾರ ಮತ್ತು ನಿಯಮಿತ ಆರೋಗ್ಯ ತಪಾಸಣೆಯ ಅಗತ್ಯವನ್ನೂ ತಿಳಿಸಿದರು.

ಅಮೆರಿಕ ದೇಶದ ಖ್ಯಾತ ಪ್ರೊಫೆಸರ್ ಭಾರತ್ಲೋಮ್ ಡೀನ್ ಅವರು ಮಾತನಾಡಿ,ಮಳ್ಳೂರಿನ ಗೌರಮ್ಮ ಮಲ್ಲೇಶೆಟ್ಟಿ ಆರೋಗ್ಯ ಕೇಂದ್ರದಲ್ಲಿ ನಿರಂತರವಾಗಿ ಉಚಿತ ಆರೋಗ್ಯ ಶಿಬಿರಗಳು ಸೇರಿದಂತೆ ವಿವಿಧ ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದಕ್ಕೆ ಬಹಳ ಸಂತೋಷವಾಗುತ್ತಿದೆ ಎಂದು ತಿಳಿಸಿ, ಗ್ರಾಮೀಣ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ಉಚಿತವಾಗಿ ತಲುಪಿಸುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದರು.

ನಮ್ಮ ದೇಶದ ಅಮೇಜಾನ್ ಪ್ರಾಂತ್ಯದಲ್ಲಿ ಒಳ್ಳೆಯ ಗುಣಮಟ್ಟದ ಅಕ್ಕಿಯನ್ನು ಬೆಳೆಯುತ್ತಿದ್ದು ,ಆ ಅಕ್ಕಿಯ ಸೇವನೆಯಿಂದ ಅಲ್ಲಿ ಸಾಕಷ್ಟು ಜನರಿಗೆ ಡಯಾಬಿಟಿಸ್ ನಿಯಂತ್ರಣಕ್ಕೆ ಬಂದಿದ್ದು ಭಾರತ ದೇಶದಲ್ಲಿಯು ಈ ಅಕ್ಕಿಯನ್ನು ಬಳಸುವುದರಿಂದ ಇಲ್ಲಿನ ಜನರಿಗೆ ಡಯಾಬಿಟಿಸ್ ನಿಯಂತ್ರಣಕ್ಕೆ ಬರುತ್ತದೆ ಎಂದು ತಿಳಿಸಿದರು.

ಆಹಾರ ಖಾತೆ ಸಚಿವ ಕೆ ಎಚ್ ಮುನಿಯಪ್ಪ ರವರು ಗೌರಮ್ಮ ಮಲ್ಲೇಶೆಟ್ಟಿ ಆರೋಗ್ಯ ಕೇಂದ್ರಕ್ಕೆ ಭೇಟಿ ಮಾಡಿ ವಿದೇಶಿ ಸೈಂಟಿಸ್ಟ್‌ಗಳ ಜೊತೆ ಮಾತನಾಡಿ ಮುಂದಿನ ಗುರುವಾರ ಈ ವಿಚಾರವಾಗಿ ಅಧಿಕಾರಿಗಳ ಜೊತೆ ಚರ್ಚೆ ನಡೆಸಿ ಮುಂದಿನ ತೀರ್ಮಾನ ತೆಗೆದುಕೊಳ್ಳುವಂತೆ ತಿಳಿಸಿದರು.

ಎಮ್‌ಎಸ್ ರಾಮಯ್ಯ ಆಸ್ಪತ್ರೆಯ ಖ್ಯಾತ ವೈದ್ಯ ಹಾಗೂ ಗೌರಮ್ಮ ಮಲ್ಲೇಶೆಟ್ಟಿ ಆರೋಗ್ಯ ಕೇಂದ್ರದ ಮುಖ್ಯಸ್ಥ ಡಾ. ಸಂದೀಪ್ ರವರು ಮಾತನಾಡಿ ನಮ್ಮ ಆರೋಗ್ಯ ಕೇಂದ್ರದಲ್ಲಿ 3000ಕ್ಕೂ ಹೆಚ್ಚು ಡಯಾಬಿಟಿಸ್ ರೋಗಿಗಳು ಚಿಕಿತ್ಸೆ ಪಡೆದುಕೊಳ್ಳುತ್ತಿದ್ದು, ಅಮೆರಿಕದ ವಿಜ್ಞಾನಿಗಳ ನೀಡುವ ಅಕ್ಕಿಯನ್ನು ಮೊದಲು 100 ರೋಗಿಗಳಿಗೆ ವಿತರಣೆ ಮಾಡಿ ಅವರಲ್ಲಿ ಡಯಾಬಿಟಿಸ್ ಕಡಿಮೆಯಾದರೆ ಅಂತ ಅಂತವಾಗಿ ಎಲ್ಲಾ ಡಯಾಬಿಟಿಸ್ ರೋಗಿಗಳಿಗೂ ವಿತರಣೆ ಮಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಅಮೇರಿಕಾದ ವಿಜ್ಞಾನಿ ಹಾಗೂ ಖ್ಯಾತ ಪ್ರೊಫೆಸರ್ ಡೇವಿಡ್ ರಾಬಿನ್ಸ್ ,ಪುವ್ವಾಡ ಫೌಂಡೇಶನ್ ಸಂಸ್ಥಾಪಕರಾದ ಶ್ರೀಮತಿ ಕಲಾವತಿ , ವೀರಕುಮಾರ್ ,ಡಾ. ಪ್ರಿಯಾಂಕಾ, ಸಮತ್ವಂ ಸಂಸ್ಥೆಯ ಅಧ್ಯಕ್ಷ ಸತ್ಯನಾರಾಯಣ ಸ್ವಯಂಸೇವಕ ಪ್ರವೀಣ್, ಮನೋಜ್ ಎನ್, ಶ್ರೇಯಸ್, ಮಂಜುನಾಥ್, ನರೇಂದ್ರ, ಮುರಳಿ ಮುಂತಾದವರಿದ್ದರು.

## ಮಕ್ಕಳನ್ನು ಓದಿಗೆ ಸೀಮಿತಗೊಳಿಸದೆ ಕ್ರೀಡೆಗೆ ಪ್ರೋತ್ಸಾಹಿಸಿ: ಸ್ವಾಮೀಜಿ

ತುಮಕೂರು

ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್‌ನ 75 ವರ್ಷಾಚರಣೆ ಅಂಗವಾಗಿ ನಗರದಲ್ಲಿ ಸೋಮವಾರ ಆರಂಭವಾದ ಆರು ದಿನಗಳ ಯೋನೆಕ್ಸ್-ಸನ್‌ರೈಸ್ ರಾಜ್ಯ ರ್‍ಯಾಂಕಿಂಗ್ ಬ್ಯಾಡ್ಮಿಂಟನ್ ಅಂಡರ್-11 ಮತ್ತು ಅಂಡರ್-13 ವಿಭಾಗಗಳ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ, ಶಾಸಕ ಜಿ.ಬಿ. ಜ್ಯೋತಿಗಣೇಶ್, ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷ ಕುಮಾರ್ ಬಂಗಾರಪ್ಪ ಅವರು ಬ್ಯಾಡ್ಮಿಂಟನ್ ಆಡುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಸ್ವಾಮೀಜಿ, ಮಕ್ಕಳನ್ನು ಕೇವಲ ಓದಿಗೆ ಸೀಮಿತಗೊಳಿಸಬೇಡಿ, ಅವರು ಕ್ರೀಡಾ ಚಟುವಟಿಕೆಯಲ್ಲಿ ಪಾಲ್ಗೊಳ್ಳಲು ಪೋಷಕರು ಪ್ರೋತ್ಸಾಹ ನೀಡಬೇಕು. ಇಲ್ಲಿ ಸೇರಿರುವ 11ರಿಂದ 13 ವರ್ಷದ ಮಕ್ಕಳ ಮುಖದಲ್ಲಿ ಉತ್ಸಾಹದ ಚಿಲುಮೆ ಉಕ್ಕುತ್ತಿದೆ. ಇಂತಹ ಮಕ್ಕಳಿಗೆ ಸರಿಯಾದ ತರಬೇತಿ ನೀಡಿದರೆ ಅವರು ದೊಡ್ಡ ಸಾಧನೆ ಮಾಡುವುದರಲ್ಲಿ ಸಂದೇಹವಿಲ್ಲ ಎಂದರು.

ಕ್ರೀಡೆಯಲ್ಲಿ ಸೋಲು-ಗೆಲುವು ಸಹಜ. ಸೋತವರು ಕುಗ್ಗುವುದು, ಗೆದ್ದವರು ಹಿಗ್ಗುವುದು ಬೇಡ. ಸೋತವರು ಮತ್ತಷ್ಟು ತಯಾರಿ ಮಾಡಿಕೊಂಡು ಗೆಲುವು ಪಡೆಯಲು ಪ್ರಯತ್ನಿಸಬೇಕು. ಗೆದ್ದವರು ಮತ್ತೊಂದು ಸ್ಪರ್ಧೆಯ ಗೆಲುವಿನತ್ತ ಗಮನಹರಿಸಬೇಕು. ಶ್ರದ್ಧೆ, ಆತ್ಮವಿಶ್ವಾಸ, ತಯಾರಿಯೊಂದಿಗೆ ಸಾಧನೆ ಮಾಡಬಹುದು. ಕ್ರೀಡೆಯಲ್ಲಿ ಎತ್ತರಕ್ಕೆ ಏರಿ ದೇಶದ ಘನತೆಯನ್ನು ಎತ್ತಿಹಿಡಿಯಬೇಕು ಎಂದು ಹೇಳಿದರು.



ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷ, ಮಾಜಿ ಸಚಿವ ಕುಮಾರ್ ಬಂಗಾರಪ್ಪ ಅವರು ರಾಜಕೀಯ ಕ್ಷೇತ್ರಕ್ಕಿಂತಾ ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚು ಆಸಕ್ತಿಯಿಂದ ತೊಡಗಿಕೊಂಡಿದ್ದಾರೆ. ನಮ್ಮ ಕ್ರೀಡಾಪಟುಗಳನ್ನು ರಾಷ್ಟ್ರೀಯ, ಅಂತರರಾಷ್ಟ್ರೀಯ ಮಟ್ಟಕ್ಕೆ ತಯಾರು ಮಾಡುವ ಕಾಳಜಿ ಹೊಂದಿರುವುದು ಶ್ಲಾಘನೀಯ. ಯಲಹಂಕ ಬಳಿ ಸರ್ಕಾರದಿಂದ 40 ಎಕರೆ ಜಮೀನು ಪಡೆದು ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಮಾಡಲು ಹೊರಟಿದ್ದಾರೆ. ಅಲ್ಲಿ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಿ ತರಬೇತಿ ನೀಡಿ ಹೊಸ ಕ್ರೀಡಾಪ್ರತಿಭೆಗಳು ಬೆಳಕಿಗೆ ಬರಲು ನೆರವಾಗಲಿ ಎಂದು ಸಿದ್ಧಲಿಂಗ ಸ್ವಾಮೀಜಿ ಹೇಳಿದರು.

ಶಾಸಕ ಜಿ.ಬಿ. ಜ್ಯೋತಿಗಣೇಶ್ ಮಾತನಾಡಿ, ತುಮಕೂರು ನಗರ ಕ್ರೀಡಾಪಟುಗಳು, ಕ್ರೀಡಾಪ್ರೇಮಿಗಳಿಗೆ ಹೆಸರಾಗಿದೆ. ದೊಡ್ಡ ಮಟ್ಟದ ಹಲವಾರು ಪಂದ್ಯಾವಳಿಗಳು ನಡೆದಿವೆ. ಈ ಬಾರಿ ರಾಜ್ಯಮಟ್ಟದ ಪ್ರತಿಷ್ಠಿತ ಬ್ಯಾಡ್ಮಿಂಟನ್ ಟೂರ್ನಿ ನಡೆಯುತ್ತಿರುವುದು ಅಭಿಮಾನದ ವಿಚಾರ. ಈ ಪಂದ್ಯಾವಳಿ ಮೂಲಕ ರಾಷ್ಟ್ರ, ಅಂತರರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸುವ ಸಾಮರ್ಥ್ಯ ಬ್ಯಾಡ್ಮಿಂಟರ್ ಪಟುಗಳು ಹೊರಹೊಮ್ಮಲಿ. ನಗರದ ಕ್ರೀಡಾಪ್ರೇಮಿಗಳು ಆರು ದಿನಗಳ ಕಾಲ ನಡೆಯುವ ಪಂದ್ಯಾವಳಿ ವೀಕ್ಷಿಸಿ ಸಂಭ್ರಮಿಸಬೇಕು ಎಂದು ಮನವಿ ಮಾಡಿದರು.

ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷ ಕುಮಾರ್ ಬಂಗಾರಪ್ಪ ಮಾತನಾಡಿ, ಈ ಟೂರ್ನಮೆಂಟ್‌ನಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ನಗರದಲ್ಲಿ 640 ಆಟಗಾರರು ನೋಂದಣಿ ಮಾಡಿದ್ದಾರೆ. ರಾಜ್ಯದ ಅನೇಕ ಪ್ರತಿಭಾವಂತ ಬ್ಯಾಡ್ಮಿಂಟನ್ ಆಟಗಾರರು ವಿಶ್ವ ಮಟ್ಟದಲ್ಲಿ ಹೆಸರು ಮಾಡಿದ್ದಾರೆ. ಮುಂಬರುವ ಒಲಂಪಿಕ್ ಗುರಿ ಇಟ್ಟುಕೊಂಡು ಪ್ರತಿಭಾನ್ವಿತ ಬ್ಯಾಡ್ಮಿಂಟನ್ ಆಟಗಾರರನ್ನು ಗುರುತಿಸಲು, ಸಿದ್ಧಪಡಿಸಲು ಈ ಟೂರ್ನಮೆಂಟ್ ಉತ್ತಮ ವೇದಿಕೆ ಆಗಲಿದೆ ಎಂದು ಹೇಳಿದರು.

ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಗೌರವ ಕಾರ್ಯದರ್ಶಿ ವಿ. ಮುರಳಿಧರ್, ಖಜಾಂಚಿ ನಿಶ್ಚಿತಾ, ತುಮಕೂರು ಬ್ಯಾಡ್ಮಿಂಟನ್ ಅಕಾಡೆಮಿ ಅಧ್ಯಕ್ಷ ಪಿ. ಪ್ರವೀಣ್, ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಗೌರವ ಕಾರ್ಯದರ್ಶಿ ವಿ. ಮುರಳಿಧರ್, ಸಂಯೋಜಕರಾದ ನಿಶಾಂತ್, ಗುರುಪ್ರಸಾದ್, ಉದ್ಯಮಿಗಳಾದ ಅಜಯ್‌ಕುಮಾರ್, ಎಂ. ನಾಗರಾಜು, ಟಿ.ವಿ. ವೆಂಕಟಸ್ವಾಮಿ, ಊರುಕೆರೆ ಪುರುಷೋತ್ತಮ್, ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಅಸೋಸಿಯೇಷನ್ ಕಾರ್ಯದರ್ಶಿ ಎ.ಎನ್. ಪ್ರಭಾಕರ್ ಮೊದಲಾದವರು ಭಾಗವಹಿಸಿದ್ದರು.

## ಸಮಾಜದ ಸ್ವಾಸ್ಥ್ಯ ಕಾಪಾಡುವ ಪೌರಕಾರ್ಮಿಕರು ಮೊದಲು ಆರೋಗ್ಯದ ಕಡೆ ಗಮನಹರಿಸಬೇಕು: ನ್ಯಾಯಾಧೀಶ

ಕೋಲಾರ

ಸಮಾಜದ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಪೌರ ಕಾರ್ಮಿಕರ ಪಾತ್ರ ಬಹಳ ದೊಡ್ಡದು. ಸಾರ್ವಜನಿಕರ ಸ್ವಾಸ್ಥ್ಯ ಕಾಪಾಡುವ ನೀವು, ಮೊದಲು ನಿಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಮಾನ್ಯ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಭು ಎನ್. ಬಡಿಗೇರ್ ಅವರು ಸಲಹೆ ನೀಡಿದರು.

ಸೋಮವಾರ ನಗರದ ನಗರಸಭೆ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ "ಕಾನೂನು ಅರಿವು ಕಾರ್ಯಕ್ರಮ"ವನ್ನು ಉದ್ದೇಶಿಸಿ ಅವರು ಮಾತನಾಡಿದರು. ಪೌರಕಾರ್ಮಿಕರು ಪ್ರತಿದಿನ ಕಸ ವಿಲೇವಾರಿ ಮಾಡುವಾಗ ಕಡ್ಡಾಯವಾಗಿ ಗ್ಲೌಸ್ ಮತ್ತು ಮಾಸ್ಕ್ ಧರಿಸಬೇಕು. ನಗರಸಭೆಯಿಂದ ನೀಡಲಾಗುವ ಸುರಕ್ಷತಾ ಪರಿಕರಗಳನ್ನು ಕಡೆಗಣಿಸದೆ ಬಳಸಬೇಕು ಎಂದು ಕಿವಿಮಾತು ಹೇಳಿದರು.

ತಮ್ಮ 18 ವರ್ಷಗಳ ವೃತ್ತಿಜೀವನದಲ್ಲಿ ಪೌರ ಕಾರ್ಮಿಕರ ಕಷ್ಟಗಳನ್ನು ಹತ್ತಿರದಿಂದ ಕಂಡಿರುವುದಾಗಿ ಸ್ಮರಿಸಿದ ನ್ಯಾಯಾಧೀಶರು, "ರಕ್ತಹೀನತೆ, ಚರ್ಮರೋಗ, ಹಾಗೂ ಉಸಿರಾಟದ ತೊಂದರೆಗಳು ಪೌರಕಾರ್ಮಿಕರಲ್ಲಿ ಹೆಚ್ಚಾಗಿ ಕಂಡುಬರುತ್ತವೆ. ಹಾಗಾಗಿ ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿದ್ದರೂ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯಿರಿ" ಎಂದರು.




ಇದೇ ವೇಳೆ ಕೋಲಾರದಲ್ಲಿ ಹಲವು ಪೌರಕಾರ್ಮಿಕರ ಸೇವೆ ಕಾಯಂಗೊಂಡಿರುವುದಕ್ಕೆ ಅವರು ಹರ್ಷ ವ್ಯಕ್ತಪಡಿಸಿದರು.

ಪೌರಕಾರ್ಮಿಕರಿಗೆ ಉಚಿತ ಕಾನೂನು ನೆರವಿನ ಬಗ್ಗೆ ಮಾಹಿತಿ ನೀಡಿದ ಅವರು, "ನಿಮ್ಮ ಆಸ್ತಿ, ಕೌಟುಂಬಿಕ ಸಮಸ್ಯೆಗಳು ಅಥವಾ ಬೇರೆ ಯಾವುದೇ ವಿಚಾರಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಉಚಿತ ಕಾನೂನು ನೆರವು ಲಭ್ಯವಿದೆ. ಪ್ರಾಧಿಕಾರದಿಂದಲೇ ಉಚಿತವಾಗಿ ವಕೀಲರನ್ನು ನೇಮಿಸಲಾಗುವುದು, ಯಾವುದೇ ಶುಲ್ಕ ಪಾವತಿಸುವ ಅಗತ್ಯವಿಲ್ಲ. ದಲ್ಲಾಳಿಗಳ ಮೊರೆ ಹೋಗಿ ಹಣ ಕಳೆದುಕೊಳ್ಳಬೇಡಿ" ಎಂದು ಭರವಸೆ ನೀಡಿದರು. ಅಪರಾಧ ಸಂತ್ರಸ್ತರಿಗೆ ನೀಡಲಾಗುವ ಪರಿಹಾರದ ಕುರಿತು ವಿವರಿಸಿದ ಅವರು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ (ಪೋಕ್ಸೊ) ಸಂತ್ರಸ್ತರಿಗೆ 3 ರಿಂದ 7 ಲಕ್ಷ ರೂ.ವರೆಗೆ ಹಾಗೂ ಕೊಲೆಯಾದ ವ್ಯಕ್ತಿಯ ಅವಲಂಬಿತರಿಗೆ ವಯಸ್ಸಿನ ಆಧಾರದ ಮೇಲೆ 1 ರಿಂದ 3 ಲಕ್ಷ ರೂ.ವರೆಗೆ ಪರಿಹಾರ ಒದಗಿಸಲು ಕಾನೂನಿನಲ್ಲಿ ಅವಕಾಶವಿದೆ. ಈ ಕುರಿತು ಅರಿವು ಮೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪೌರಕಾರ್ಮಿಕ ಸಂಘದ ಉಪಾಧ್ಯಕ್ಷರು, ಮುಖಂಡರಾದ ವೆಂಕಟೇಶ್, ಸುಬ್ರಮಣಿ, ನಗರಸಭೆ ವ್ಯವಸ್ಥಾಪಕರಾದ ಶ್ರೀಮತಿ ರಾಜೇಶ್ವರಿ, ಆರೋಗ್ಯಾಧಿಕಾರಿ ಸಂಜಯ್ ಹಾಗೂ ನಗರಸಭೆಯ ಪೌರಕಾರ್ಮಿಕರು ಉಪಸ್ಥಿತರಿದ್ದರು.

## ಕೋಲಾರದಲ್ಲಿ ಶೇ. 100ರಷ್ಟು ಮತದಾರರ ನಮೂನೆಗಳ ವಿತರಣೆ ಯಶಸ್ವಿ

ಕೋಲಾರ

ಜಿಲ್ಲೆಯಲ್ಲಿ ಚುನಾವಣಾ ಪೂರ್ವಸಿದ್ಧತೆಗಳು ಮತ್ತು ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವು ಅತ್ಯಂತ ಯಶಸ್ವಿಯಾಗಿ ಮತ್ತು ಚುರುಕಾಗಿ ನಡೆಯುತ್ತಿದೆ.

ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಿಂದ ಬಿಡುಗಡೆಯಾದ ಅಧಿಕೃತ ದೈನಂದಿನ ವರದಿಯ ಪ್ರಕಾರ, ಜಿಲ್ಲೆಯ ಒಟ್ಟು 12,95,265 ಮತದಾರರಿಗೆ ಸಂಬಂಧಿಸಿದಂತೆ, ಬೂತ್ ಮಟ್ಟದ ಅಧಿಕಾರಿಗಳ (BLO) ಮೂಲಕ ನಮೂನೆಗಳ (Enumeration Forms) ವಿತರಣಾ ಕಾರ್ಯವು ಈಗಾಗಲೇ ಶೇ. 100ರಷ್ಟು ಸಂಪೂರ್ಣಗೊಂಡಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ಡಿಜಿಟಲೀಕರಣ ಪ್ರಕ್ರಿಯೆಯು ಜಿಲ್ಲೆಯಾದ್ಯಂತ ಅತ್ಯಂತ ವ್ಯವಸ್ಥಿತವಾಗಿ ಸಾಗುತ್ತಿದೆ. ಜುಲೈ 27ರ ಮಧ್ಯಾಹ್ನ 4:00 ಗಂಟೆಯ ಅಂಕಿ-ಅಂಶಗಳ ಪ್ರಕಾರ, ವಿತರಿಸಲಾದ ಒಟ್ಟು ನಮೂನೆಗಳ ಪೈಕಿ 10,71,185 ನಮೂನೆಗಳ ಡಿಜಿಟಲೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ. ಅಂದರೆ, ಜಿಲ್ಲೆಯಲ್ಲಿ ಒಟ್ಟಾರೆ ಶೇ. 82.70ರಷ್ಟು ದಾಖಲೆಗಳ ಡಿಜಿಟಲೀಕರಣ ಕಾರ್ಯವು ಮುಕ್ತಾಯವಾದಂತಾಗಿದೆ. ಇದರ ಜೊತೆಗೆ 6,166 (ಶೇ. 0.48ರಷ್ಟು) ನಮೂನೆಗಳನ್ನು ಮತದಾರರು ನೇರವಾಗಿ ಆನ್‌ಲೈನ್ ಮೂಲಕವೇ ಸಲ್ಲಿಸಿದ್ದಾರೆ.

ಮತದಾರರ ಪಟ್ಟಿಯನ್ನು ದೋಷಮುಕ್ತಗೊಳಿಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಒಟ್ಟು 1,09,215 ಮತದಾರರನ್ನು ವಿಶೇಷ ವರ್ಗದಡಿ (ASDDO) ಗುರುತಿಸಿ ವರ್ಗೀಕರಿಸಲಾಗಿದೆ. ಈ ಪಟ್ಟಿಯ ವಿವರಗಳನ್ನು ಗಮನಿಸಿದರೆ, 56,605 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರು,

25,654 ಮೃತಪಟ್ಟವರು, 13,755 ಗೈರಾದ ಅಥವಾ ಸಂಪರ್ಕಕ್ಕೆ ಸಿಗದ ಮತದಾರರು, 12,225 ಈಗಾಗಲೇ ನೋಂದಣಿಯಾದವರು ಹಾಗೂ 976 ಇತರೆ ಕಾರಣಗಳಡಿ ಬರುವ ಮತದಾರರಾಗಿದ್ದಾರೆ.

ಈ ಡಿಜಿಟಲೀಕರಣ ಮತ್ತು ವಿತರಣಾ ಪ್ರಕ್ರಿಯೆಯು ಜಿಲ್ಲೆಯ ಎಲ್ಲಾ ಆರು ವಿಧಾನಸಭಾ ಕ್ಷೇತ್ರಗಳಾದ ಶ್ರೀನಿವಾಸಪುರ, ಮುಳಬಾಗಿಲು, ಕೆ.ಜಿ.ಎಫ್, ಬಂಗಾರಪೇಟೆ, ಕೋಲಾರ ಮತ್ತು ಮಾಲೂರುಗಳಲ್ಲಿ ಭರದಿಂದ ಸಾಗುತ್ತಿದೆ. ಅತಿ ಹೆಚ್ಚು ಅಂದರೆ 2,42,034 ಮತದಾರರನ್ನು ಹೊಂದಿರುವ ಕೋಲಾರ ಕ್ಷೇತ್ರದಲ್ಲಿ 1,99,266 ನಮೂನೆಗಳು ಡಿಜಿಟಲೀಕರಣಗೊಂಡಿವೆ. ಹಾಗೆಯೇ, ಮುಳಬಾಗಿಲು ಕ್ಷೇತ್ರದಲ್ಲಿ 2,24,684 ಮತದಾರರ ಪೈಕಿ 1,91,097 ಹಾಗೂ ಶ್ರೀನಿವಾಸಪುರ ಕ್ಷೇತ್ರದಲ್ಲಿ 2,19,027ರ ಪೈಕಿ 1,88,185 ನಮೂನೆಗಳನ್ನು ಡಿಜಿಟಲ್ ಮಾಡಲಾಗಿದೆ.

## ರಾಜ್ಯ ಮಟ್ಟದ ಬೈಠಕ್; ಸಂಘಟನಾ ಬಲವರ್ಧನೆಗೆ ಒತ್ತು

ವಿಜಯಪುರ

ಪಟ್ಟಣದ ಶ್ರೀಲಕ್ಷ್ಮೀ ನರಸಿಂಹ ಕನ್ವೆನ್ಷನ್ ಹಾಲ್‌ನಲ್ಲಿ ವಿಶ್ವ ಹಿಂದೂ ಪರಿಷದ್ ಕರ್ನಾಟಕ ದಕ್ಷಿಣ ಪ್ರಾಂತ ಮಟ್ಟದ ಎರಡು ದಿನಗಳ ಪ್ರಾಂತ ಬೈಠಕ್ ಯಶಸ್ವಿಯಾಗಿ ನಡೆಯಿತು.

ಬೈಠಕ್ನ ಅಂಗವಾಗಿ ಪಟ್ಟಣದ ಚನ್ನಕೇಶವಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ನೆರವೇರಿಸಿ, ಗೋಪೂಜೆ ಹಾಗೂ ದೀಪ ಬೆಳಗುವ ಮೂಲಕ ಅಧಿಕೃತವಾಗಿ ಚಾಲನೆ ನೀಡಲಾಯಿತು.

ಪ್ರಾಂತ ಬೈಠಕ್‌ನಲ್ಲಿ ಕರ್ನಾಟಕ ದಕ್ಷಿಣ ಪ್ರಾಂತದ 8 ವಿಭಾಗಗಳ ವ್ಯಾಪ್ತಿಯ 38 ಜಿಲ್ಲೆಗಳ ವಿವಿಧ ಆಯಾಮಗಳ 300ಕ್ಕೂ ಹೆಚ್ಚು ಜಿಲ್ಲಾ ಪದಾಧಿಕಾರಿಗಳು ಭಾಗವಹಿಸಿದ್ದರು.

ಬೈಠಕ್ ಹಿನ್ನೆಲೆಯಲ್ಲಿ ಪಟ್ಟಣದ ಮುಖ್ಯರಸ್ತೆಗಳಲ್ಲಿ ಕೇಸರಿ ಬಂಟಿಂಗ್ಸ್ ಹಾಗೂ ಓಂ ಧ್ವಜಗಳನ್ನು ಕಟ್ಟಿ ಆಕರ್ಷಕವಾಗಿ ಅಲಂಕರಿಸಲಾಗಿತ್ತು.




ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಕೀರ್ತನಾ ಯಾತ್ರೆ ನಡೆಸಲಾಯಿತು. ಬಳಿಕ ವಿಶ್ವ ಹಿಂದೂ ಪರಿಷದ್ ಬೆಂಗಳೂರು ಗ್ರಾಮಾಂತರ ಜಿಲ್ಲಾ ಘಟಕದ ವತಿಯಿಂದ ಗಣ್ಯರೊಂದಿಗೆ ಸಂವಾದ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ವಿವಿಧ ಭಾಗಗಳಿಂದ ಆಗಮಿಸಿದ್ದ ಕಾರ್ಯಕರ್ತರಿಗೆ ಆಧ್ಯಾತ್ಮ ರಾಮಾಯಣ ಪುಸ್ತಕವನ್ನು ಉಚಿತವಾಗಿ ವಿತರಿಸಲಾಯಿತು. ಬೈಠಕನಲ್ಲಿ ಸಂಘಟನೆಯ ಮುಂದಿನ ಆರು ತಿಂಗಳ ಕಾರ್ಯಯೋಜನೆ ಹಾಗೂ ವಿವಿಧ ಕಾರ್ಯವಿಚಾರಗಳ ಕುರಿತು ವಿಸ್ತೃತ ಚರ್ಚೆ ನಡೆಸಲಾಯಿತು. ಸ್ಥಾಣು ಮಾಲಯನ್ ಜೀ, ಕರ್ನಾಟಕ ದಕ್ಷಿಣ ಪ್ರಾಂತ ಅಧ್ಯಕ್ಷ ದೀಪಕ್ ರಾಜಗೋಪಾಲ್, ಸುರೇಶ್ ಕುಸುಮ ನಾರಾಯಣ ಚಾರ್, ಶರಣ್ ಪಂಪ್ ವೆಲ್, ಗೌರಿಶಂಕರ್, ಸತೀಶ್ ಸೇರಿದಂತೆ ವಿವಿಧ ಗಣ್ಯರು ಹಾಜರಿದ್ದರು.

## ಉದ್ಯಮಶೀಲತಾ ತಿಳುವಳಿಕೆ ಶಿಬಿರ

ರಾಮನಗರ

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಪ್ರಾಯೋಜಕತ್ವದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಸ್ವಂತ ಉದ್ಯೋಗ ಸ್ಥಾಪಿಸಲು ಬಯಸುವ ಮಹಿಳೆಯರಿಗೆ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಇದೇ 29 ರಂದು ತಾಲ್ಲೂಕಿನ ಮಿನಿ ವಿಧಾನಸೌಧದಲ್ಲಿರುವ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಜಿಲ್ಲೆಯ ಆಸಕ್ತ ಮಹಿಳಾ ಮಹಿಳಾ ಉದ್ಯಮಶೀಲರಿಗೆ ಅನುಕೂಲವಾಗಲು ಸ್ವಂತ ಉದ್ಯಮ ಸ್ಥಾಪಿಸಲು ಅನುಸರಿಸುವ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರದ ಕುರಿತು ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಆಯೋಜಿಸಲಾಗಿದೆ.

ಅಭ್ಯರ್ಥಿಗಳು 18 ರಿಂದ 40 ವರ್ಷದೊಳಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ. ಪಾಸಾಗಿರಬೇಕು. ಎಲ್ಲಾ ವರ್ಗದ ಮಹಿಳೆಯರಿಗೆ ಆದ್ಯತೆ ನೀಡಲಾಗುವುದು. ಆಸಕ್ತ ಮಹಿಳೆಯರು ಜು. 28ರವರೆಗೆ ಹೆಸರು ನೋಂದಾಯಿಸಬಹುದು.

ಹೆಚ್ಚಿನ ಮಾಹಿತಿಗೆ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ನಂ. 208, ಕಂದಾಯ ಭವನ, ಬಿ.ಎಂ. ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ-562159 ಅಥವಾ 7090299843 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಸಿಡಾಕ್‌ನ ಸಲಹೆಗಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ವಿತೀಯ ಮುದ್ರಣ ಕಂಡ ಕಾಲಡಿಯ ಕಣ್ಣು

ಕೋಲಾರ

ಬಿಡುಗಡೆಗೊಂಡ ಹದಿನೈದು ದಿನಗಳೊಳಗೆ ದಲಿತ ಚಳವಳಿಯ ಮಂಚೂಣಿ ನಾಯಕ ಸಿ.ಎಂ. ಮುನಿಯಪ್ಪರ ಆತ್ಮಕಥನ ಕಾಲಡಿಯ ಕಣ್ಣು ದ್ವಿತೀಯ ಮುದ್ರಣವನ್ನು ಕಂಡು ಓದುಗರ ಮನ್ನಣೆಗೆ ಪಾತ್ರವಾಗಿದೆ.

ಸಿ.ಎಂ.ಮುನಿಯಪ್ಪರ ನಾಲ್ಕು ದಶಕಗಳ ಚಳವಳಿಯ ಬದುಕು, ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಚಾರಿತ್ರಿಕ ಹೋರಾಟದ ಹಾದಿಯನ್ನು ದಾಖಲಿಸುತ್ತಲೇ, ಕಗ್ಗತ್ತಲಲ್ಲಿದ್ದ ದಮನಿತ ಲೋಕದ ಒಡಲಾಳದ ಧ್ವನಿಯಾಗಿ ಕಾಲಡಿಯ ಕಣ್ಣು ಕೃತಿಯು ದಲಿತ ಲೋಕದ ಕಥನವಾಗಿ ಮೂಡಿ ಬಂದಿತ್ತು.

2026 ಜುಲೈ 10 ರಂದು ಮುಂಗೋಳಿ ಪ್ರಕಾಶನದ ಮೂಲಕ ಈ ಕೃತಿಯು ಸಾವಿರ ಪ್ರತಿಗಳ ಮೊದಲ ಮುದ್ರಣ ಬಿಡುಗಡೆಗೊಂಡ ಹದಿನೈದು ದಿನಕ್ಕೆ ಕೃತಿಯ ಎಲ್ಲಾ ಪ್ರತಿಗಳು ಮಾರಾಟವಾಗಿ, ನಾಡಿನ ಓದುಗರಿಂದ ವ್ಯಾಪಕವಾಗಿ ಬೇಡಿಕೆ ಬಂದಿದ್ದರಿಂದ ಮತ್ತೇ ಸಾವಿರ ಪ್ರತಿಗಳನ್ನು ಮುದ್ರಿಸಲಾಗಿದೆ.



ಸಾವಿರಾರು ವರ್ಷಗಳಿಂದ ಅಕ್ಷರ ಸಂಸ್ಕೃತಿಯಿಂದಲೇ ವಂಚಿತವಾಗಿದ್ದ ಸಮುದಾಯದ ಕಥನವನ್ನು ಇಡೀ ಕನ್ನಡ ನಾಡು ಪ್ರೀತಿಯಿಂದ ಸ್ವೀಕರಿಸಿದೆ, ಇದು ಸ್ವಾಭಿಮಾನ, ಸಮಾನತೆಯ ಹೋರಾಟದ ಹಾದಿಗೆ ಪ್ರಜ್ಞಾವಂತ ಓದುಗರು ನೀಡಿದ ಅಭೂತ ಪೂರ್ವ ಮನ್ನಣೆ ಎನ್ನಲಾಗಿದೆ.

ಮೊದಲ ಮುದ್ರಣ ಹೊರ ಬಂದ ತಕ್ಷಣವೇ ನಾಡಿನ ಮೂಲೆ ಮೂಲೆಗಳಿಂದ ದಲಿತ ಚಳವಳಿಯ ಹಿರಿಯರು, ಸಾಹಿತಿಗಳು, ಯುವಕರು ಮತ್ತು ವಿದ್ಯಾರ್ಥಿಗಳು ಕೃತಿಕಾರರೊಂದಿಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳುತ್ತಿದ್ದಾರೆ.

ದಲಿತ ಚಳವಳಿಯ ಇತಿಹಾಸ ಮತ್ತು ನೈಜ ಘಟನೆಗಳ ಚಿತ್ರಣ ಕಣ್ಣಿಗೆ ಕಟ್ಟಿದಂತಿದೆ ಎಂಬ ಓದುಗರ ಪ್ರೀತಿಯ ನುಡಿಗಳು ತಮ್ಮ ಬರವಣಿಯ ಸಾರ್ಥಕತೆಯನ್ನು ಹೆಚ್ಚಿಸಿವೆ, ಎರಡನೇ ಮುದ್ರಣಕ್ಕೆ ಪ್ರೇರಣೆ ನೀಡಿದ ಪ್ರೀತಿಯ ಓದುಗ ಬಂಧುಗಳಿಗೆ ಕೃತಿಕಾರ ಸಿ.ಎಂ.ಮುನಿಯಪ್ಪ ಋಣಿಯಾಗಿರುವುದಾಗಿ ತಿಳಿಸಿದ್ದಾರೆ.

## 'ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ ಕುರಿತು ಅರಿವು ಮುಖ್ಯ'

ರಾಮನಗರ

ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಪೋಕ್ಸೋ ಕಾಯ್ದೆಯ ಬಗ್ಗೆ ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ಕಾನೂನು ಜಾಗೃತಿ ಮೂಡಿಸಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಎಂ.ಎಚ್. ಅಣ್ಣಯ್ಯ ಅವರು ಹೇಳಿದರು.

ಇತ್ತೀಚೆಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಶಾಂತಿನಿಕೇತನ ಪದವಿ ಪೂರ್ವ ಕಾಲೇಜಿನ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಲೈಂಗಿಕ ದೌರ್ಜನ್ಯದಿಂದ ಮಕ್ಕಳ ಸಂರಕ್ಷಣಾ ಕಾಯ್ದೆ-2012 (ಪೋಕ್ಸೋ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಾನೂನು ಬಾಹಿರವಾಗಿ ವಿವಾಹ ವಯಸ್ಸಿಗೂ ಮುನ್ನ ಮದುವೆ ಮಾಡುವುದು ಬಾಲ್ಯ ವಿವಾಹ ನಿಷೇಧ ಕಾಯ್ದೆಯಡಿ ಅಪರಾಧವಾಗಿದೆ. ಬಾಲ್ಯದಲ್ಲೇ ಮದುವೆ ಮಾಡುವುದರಿಂದ ಮಕ್ಕಳ ಭವಿಷ್ಯ ಹಾಗೂ ಕುಟುಂಬದ ಗೌರವಕ್ಕೂ ಧಕ್ಕೆಯಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಕಾನೂನಿನ ಚೌಕಟ್ಟಿನಲ್ಲಿಯೇ ನಡೆದುಕೊಳ್ಳಬೇಕು. ಬಾಲ್ಯದಲ್ಲಿ ವಿವಾಹ ಮಾಡಿ ಮಕ್ಕಳ ಭವಿಷ್ಯವನ್ನು ಹಾಳು ಮಾಡದೆ ಶಾಲೆ-ಕಾಲೇಜುಗಳಿಗೆ ಕಳುಹಿಸಿ ಉತ್ತಮ ಶಿಕ್ಷಣ ಕೊಡಿಸಬೇಕೆಂದು ಅವರು ಅಭಿಪ್ರಾಯಪಟ್ಟರು.



ಪ್ರೀತಿ-ಪ್ರೇಮದ ಹೆಸರಿನಲ್ಲಿ ಮಕ್ಕಳನ್ನು ದಾರಿ ತಪ್ಪಿಸುವುದು, ಮೋಸಗೊಳಿಸುವುದು ಅಥವಾ ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗುವುದು ಪೋಕ್ಸೋ ಕಾಯ್ದೆಯಡಿ ಗಂಭೀರ ಅಪರಾಧವಾಗಿದೆ. ಅಪ್ರಾಪ್ತ ವಯಸ್ಸಿನ ಹುಡುಗ-ಹುಡುಗಿಯರು ಪರಸ್ಪರ ಓಡಿ ಹೋಗುವುದು ಅಥವಾ ವಿವಾಹದ ಪ್ರಯತ್ನ ನಡೆಸುವುದು ಕಾನೂನುಬಾಹಿರವಾಗಿದ್ದು ಅಂತಹ ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಪೋಷಕರು ಮಕ್ಕಳ ಭವಿಷ್ಯ ರೂಪಿಸಲು ಕಷ್ಟಪಟ್ಟು ಶ್ರಮಿಸುತ್ತಾರೆ. ಆದ್ದರಿಂದ ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು, ಕಾನೂನುನನ್ನು ಪಾಲಿಸುವ ಮೂಲಕ ಜವಾಬ್ದಾರಿಯುತ ನಾಗರಿಕರಾಗಿ ಬೆಳೆಯಬೇಕು ಎಂದು ಕರೆ ನೀಡಿದರು.

ಇದೇ ವೇಳೆ ರಸ್ತೆ ಸುರಕ್ಷತೆ ಕುರಿತು ಮಾತನಾಡಿ, ವಾಹನ ಚಲಾಯಿಸುವವರು ಕಾನೂನುಬದ್ಧ ವಯಸ್ಸು ಪೂರ್ಣಗೊಳಿಸಿ ಚಾಲನಾ ಪರವಾನಗಿ ವಿಮೆ ಸೇರಿದಂತೆ ವಾಹನದ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ಹೊಂದಿರಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಶಾಂತಿನಿಕೇತನ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ದೇವಿಕ್ ಪ್ರಿಯತಮ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಕೆ. ಕೆಂಪಯ್ಯ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ಯಾನಲ್ ವಕೀಲರಾದ ಸ್ಮಿತಾ ಅವರು ಉಪಸ್ಥಿತರಿದ್ದರು.

# ಮಾದಕ ವಸ್ತು ಬಳಕೆ ವಿರೋಧಿ ಅಭಿಯಾನ



ಶಿಡ್ಲಘಟ್ಟ

ತಾಲ್ಲೂಕು ಆಡಳಿತ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ನಗರದ ನೆಹರೂ ಕ್ರೀಡಾಂಗಣದಲ್ಲಿ ಮಾದಕ ವಸ್ತುಗಳ ವಿರೋಧಿ ದಿನಾಚರಣೆಯ ಅಭಿಯಾನ ನಡೆಯಿತು.

ವಿದ್ಯಾರ್ಥಿಗಳು, ಯುವಜನರು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜನಜಾಗೃತಿ ಮೂಡಿಸುವ ಉದ್ದೇಶದಿಂದ ತಾಲ್ಲೂಕು ಆಡಳಿತ ಈ ಕಾರ್ಯಕ್ರಮ ಆಯೋಜಿಸಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಬಿ.ಎನ್. ರವಿಕುಮಾರ್, ಇಂದಿನ ಯುವ ಪೀಳಿಗೆ ಮಾದಕ ವ್ಯಸನದ ಸುಳಿಗೆ ಸಿಲುಕುತ್ತಿರುವುದು ಸಮಾಜಕ್ಕೆ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಶಾಲಾ–ಕಾಲೇಜು ಹಂತದಿಂದಲೇ ಮಕ್ಕಳಿಗೆ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು ಅಗತ್ಯ. ಪೋಷಕರು ಮತ್ತು ಶಿಕ್ಷಕರು ಈ ನಿಟ್ಟಿನಲ್ಲಿ ಹೆಚ್ಚಿನ ಜವಾಬ್ದಾರಿ ವಹಿಸಬೇಕು ಎಂದು ಸಲಹೆ ನೀಡಿದರು.

ತಹಶೀಲ್ದಾರ್ ಗಗನಸಿಂಧು ಮಾತನಾಡಿ, ಮಾದಕ ವಸ್ತುಗಳ ಮಾರಾಟ ಮತ್ತು ಬಳಕೆ ಕುರಿತು ಕಂಡುಬಂದರೆ ಕೂಡಲೇ ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತರುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು. ಆಡಳಿತ ಈ ಪಿಡುಗು ನಿಯಂತ್ರಣಕ್ಕೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಿದ್ದು, ಜನಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಅಭಿಯಾನದ ಅಂಗವಾಗಿ ವಾಲಿಬಾಲ್ ಹಾಗೂ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸಲಾಗಿತ್ತು. ಪೊಲೀಸರು ಹಾಗೂ ನಗರದ ವಿವಿಧ ಆಟಗಾರರ ತಂಡಗಳು ಕ್ರೀಡಾಕೂಟದಲ್ಲಿ ಪಾಲ್ಗೊಂಡಿದ್ದವು. ಜೊತೆಗೆ ವಿದ್ಯಾರ್ಥಿಗಳಿಗಾಗಿ ಪ್ರಬಂಧ ಸ್ಪರ್ಧೆಯನ್ನೂ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಕೊನೆಯಲ್ಲಿ ಎಲ್ಲಾ ವಿಭಾಗಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಎ.ಎಸ್.ಪಿ ಜಗನ್ನಾಥರೈ, ಸರ್ಕಲ್ ಇನ್ಸ್‌ಪೆಕ್ಟರ್ ಆನಂದ್ ಕುಮಾರ್, ಸಬ್ ಇನ್ಸ್‌ಪೆಕ್ಟರ್‌ಗಳಾದ ಸುನಿಲ್ ಕುಮಾರ್, ವೇಣುಗೋಪಾಲ್, ನಾಗರಾಜ್, ಶಾಮಣ್ಣ ಹಾಜರಿದ್ದರು.

# ‘ರೈತರಿಗೆ ಭದ್ರತೆ ಒದಗಿಸಲು ಬೆಳೆ ವಿಮೆ ಮಾಡಿಸುವುದು ಅತ್ಯಗತ್ಯ’

ಕೋಲಾರ

2026ರ ಮುಂಗಾರು ಹಂಗಾಮಿನ ‘ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ’ಯಡಿ ರೈತರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಕೃಷಿ ಇಲಾಖೆ ವತಿಯಿಂದ ಸಿದ್ಧಪಡಿಸಲಾದ ‘ಬೆಳೆ ವಿಮೆ ಪ್ರಚಾರ ವಾಹನ’ಕ್ಕೆ ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಕೊತ್ತೂರು ಜಿ. ಮಂಜುನಾಥ್ ಹಾಗೂ ವಿಧಾನ ಪರಿಷತ್ ಸದಸ್ಯ ಅನಿಲ್ ಕುಮಾರ್ ಅವರು ಜಂಟಿಯಾಗಿ ಚಾಲನೆ ನೀಡಿದರು.

ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿ ಆವರಣದಲ್ಲಿ ಈ ಪ್ರಚಾರ ವಾಹನಕ್ಕೆ ಹಸಿರು ನಿಶಾನೆ ತೋರಲಾಯಿತು. ಜಿಲ್ಲೆಯಲ್ಲಿ ಬೆಳೆ ವಿಮೆ ಕುರಿತು ರೈತರಿಗೆ ಸಮಗ್ರ ಮಾಹಿತಿ ಒದಗಿಸಿ, ನೋಂದಣಿಯನ್ನು ಹೆಚ್ಚಿಸುವ ಗುರಿಯೊಂದಿಗೆ ಈ ವಾಹನವು ಜಿಲ್ಲೆಯಾದ್ಯಂತ ಸಂಚರಿಸಿ ಜಾಗೃತಿ ಮೂಡಿಸಲಿದೆ.

ಈ ಬಾರಿ ಸೂಪರ್ ಎಲ್–ನಿನೋ ಪ್ರಭಾವ ದಿಂದಾಗಿ ಜುಲೈ ತಿಂಗಳಿನಲ್ಲಿ ಜಿಲ್ಲೆಯಲ್ಲಿ ಬರೋಬ್ಬರಿ ಶೇ. 89ರಷ್ಟು ಮಳೆ ಕೊರತೆಯಾಗಿದೆ. ಇದರ ಪರಿಣಾಮವಾಗಿ ಜಿಲ್ಲೆಯಲ್ಲಿ ಕೇವಲ ಶೇ. 4.5ರಷ್ಟು ಮಾತ್ರ ಬಿತ್ತನೆ ಕಾರ್ಯ ನಡೆದಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಮಳೆ ಕೊರತೆಯಿಂದ ಉಂಟಾಗಬಹುದಾದ ಬೆಳೆ ನಷ್ಟವನ್ನು ತಡೆಯಲು ಹಾಗೂ ರೈತರಿಗೆ ಆರ್ಥಿಕ ಭದ್ರತೆ ಒದಗಿಸಲು ಬೆಳೆ ವಿಮೆ ಮಾಡಿಸುವುದು ಅತ್ಯಗತ್ಯವಾಗಿದೆ




ಎಂದು ಅಧಿಕಾರಿಗಳು ಈ ಸಂದರ್ಭದಲ್ಲಿ ವಿವರಿಸಿದರು.

ಸರ್ಕಾರವು ಈಗಾಗಲೇ 2026ರ ಮುಂಗಾರು ಹಂಗಾಮಿಗೆ ವಿವಿಧ ಬೆಳೆಗಳಿಗೆ ವಿಮೆ ಪ್ರಸ್ತಾವನೆಗಳನ್ನು ಸಲ್ಲಿಸಲು ಪ್ರೀಮಿಯಂ ಮೊತ್ತ ಹಾಗೂ ಅಂತಿಮ ದಿನಾಂಕಗಳನ್ನು ಘೋಷಿಸಿ ಅಧಿಸೂಚನೆ ಹೊರಡಿಸಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ವಡಗೂರು ಡಿ.ಎಲ್. ನಾಗರಾಜ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ವೈ. ಶಿವಕುಮಾರ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುಳಾ ಎಂ.ಎನ್., ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾದ ಕುಮಾರಸ್ವಾಮಿ ಅವರು ಉಪಸ್ಥಿತರಿದ್ದರು.

# ಸಾರ್ವಜನಿಕರ ಸಹಕಾರದಿಂದಲೇ ಅಪರಾಧ ತಡೆ ಸಾಧ್ಯ: ಪಿಎಸ್ಐ

ಬೂದಿಕೋಟೆ

ಪೊಲೀಸ್ ಇಲಾಖೆಯಿಂದ ಮಾತ್ರ ಅಪರಾಧಗಳನ್ನು ಸಂಪೂರ್ಣವಾಗಿ ತಡೆಗಟ್ಟಲು ಸಾಧ್ಯವಿಲ್ಲ. ಸಾರ್ವಜನಿಕರು ಜಾಗೃತರಾಗಿ ಪೊಲೀಸರೊಂದಿಗೆ ಕೈಜೋಡಿಸಿದಾಗ ಮಾತ್ರ ಸಮಾಜದಲ್ಲಿ ಶಾಂತಿ, ನೆಮ್ಮದಿ ಹಾಗೂ ಸುರಕ್ಷತೆಯನ್ನು ಕಾಪಾಡಲು ಸಾಧ್ಯವಾಗುತ್ತದೆ ಎಂದು ಬೂದಿಕೋಟೆ ಪೊಲೀಸ್ ಠಾಣೆಯ ಪಿಎಸ್ಐ ಗುರುರಾಜ್ ಚಿಂತಕಲ್ ಹೇಳಿದರು.

ಹೋಬಳಿಯ ಯಳೆಸಂದ್ರ ಗ್ರಾ.ಪಂ. ವ್ಯಾಪ್ತಿಯ ಕೋಟರಾ ಮಗುಳ ಗ್ರಾಮದಲ್ಲಿ ಬೂದಿಕೋಟೆ ಪೊಲೀಸ್ ಠಾಣೆ ವತಿಯಿಂದ ಹಮ್ಮಿಕೊಂಡಿದ್ದ ಬೀಟ್ ಸಭೆಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಅಪರಿಚಿತ ಮೊಬೈಲ್ ಕರೆಗಳು, ನಕಲಿ ಲಿಂಕ್‌ಗಳು, ಬ್ಯಾಂಕ್ ಖಾತೆ ವಿವರಗಳು, ಎಟಿಎಂ ಪಿನ್ ಹಾಗೂ ಒಟಿಪಿ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬಾರದು ಎಂದು ಸಾರ್ವಜನಿಕರಿಗೆ ತಿಳಿಸಿದ ಅವರು ಯಾವುದೇ ರೀತಿಯ ಆನ್‌ಲೈನ್ ವಂಚನೆ ನಡೆದರೆ ಕೂಡಲೇ ಪೊಲೀಸ್ ಠಾಣೆ ಅಥವಾ ಸೈಬರ್ ಸಹಾಯವಾಣಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಬಾಲ್ಯ ವಿವಾಹವು ಕಾನೂನುಬಾಹಿರ ಮತ್ತು ಶಿಕ್ಷಾರ್ಹ ಅಪರಾಧವಾಗಿದ್ದು, ಅಪ್ರಾಪ್ತ ವಯಸ್ಸಿನ ಮಕ್ಕಳ ವಿವಾಹಕ್ಕೆ ಯಾರೂ ಸಹಕಾರ ನೀಡಬಾರದು ಇಂತಹ ಪ್ರಕರಣಗಳು ಕಂಡುಬಂದರೆ ತಕ್ಷಣವೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವ ಮೂಲಕ ಮಕ್ಕಳ ಭವಿಷ್ಯವನ್ನು ರಕ್ಷಿಸಬೇಕು ಎಂದರು.

ಸರಗಳ್ಳತನ ಪ್ರಕರಣಗಳನ್ನು ತಡೆಗಟ್ಟಲು ಮಹಿಳೆಯರು ಸೇರಿದಂತೆ ಸಾರ್ವಜನಿಕರು ಚಿನ್ನಾಭರಣ ಧರಿಸಿ ಸಂಚರಿಸುವಾಗ ಎಚ್ಚರಿಕೆವಹಿಸಬೇಕು. ಮನೆಗಳಿಗೆ ಬೀಗ ಹಾಕಿ ಹೊರಗಡೆ ತೆರಳುವವರು ಲಾಕ್ಡ್ ಹೌಸ್ ಬೀಟ್ ಸ್ಕೀಮ್ ಸೌಲಭ್ಯವನ್ನು ಕಡ್ಡಾಯವಾಗಿ ಬಳಸಿಕೊಳ್ಳಬೇಕು. ಇದರಿಂದ ಪೊಲೀಸರು ಮನೆಗಳ ಮೇಲೆ ನಿಯಮಿತ ನಿಗಾವಹಿಸಿ ಕಳ್ಳತನ ಪ್ರಕರಣಗಳನ್ನು ತಡೆಗಟ್ಟಲು ಅನುಕೂಲವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಪಿಎಸ್ಐ ವೆಂಕಟರಾಮಯ್ಯ, ತಾ.ಪಂ ಮಾಜಿ ಅಧ್ಯಕ್ಷ ಟಿ.ಮಹದೇವಪ್ಪ, ಯಳೆಸಂದ್ರ ಗ್ರಾ.ಪಂ ಮಾಜಿ ಉಪಾಧ್ಯಕ್ಷ ಆನಂದ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ದೊಡ್ಡಬಳ್ಳಾಪುರ ಪದವೀಧರ ಪತ್ತಿನ ಸಹಕಾರ ಸಂಘದ 33ನೇ ವಾರ್ಷಿಕೋತ್ಸವದ ಮಹಾ ಸಭೆಯಲ್ಲಿ ಡಾ ಭರತ್ ರಂಗನಾಥ್ ಅವರಿಗೆ ಮಾಹಿತಿ ತಂತ್ರಜ್ಞಾನದಲ್ಲಿ ಡಾಕ್ಟರೇಟ್ ಪದವಿ ಪಡೆದಿದ್ದಕ್ಕೆ ಸಂಘದ ಅಧ್ಯಕ್ಷ ಕೆ.ವಿ. ಚಂದ್ರಶೇಖರವರು ಸನ್ಮಾನ ಮಾಡಿದರು. ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಗಳಾದ ಡಾ ಅಂಜಿನಪ್ಪ, ಡಾ.ಎಂ ಆರ್ ರಂಗನಾಥ, ಡಾ. ಶಿವಕುಮಾರ್, ಅರ್ಚನಾ, ಪುಷ್ಪವತಿ, ಬಸವರಾಜಯ್ಯ, ಸುಹಾಸ್, ಸುಜಾತ, ರೂಪ, ಅರುಣ್ ಕುಮಾರ್, ಸಂಘದ ಕಾರ್ಯದರ್ಶಿ ರಾಮಣ್ಣ ಉಪಸ್ಥಿತರಿದ್ದರು.

# ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮ


ದೊಡ್ಡಬಳ್ಳಾಪುರ

ಕಾಲೇಜಿನ ವಿದ್ಯಾರ್ಥಿಗಳು ಪುಸ್ತಕದ ಶಿಕ್ಷಣದ ಜೊತೆಗೆ ಗ್ರಾಮೀಣ ಭಾಗದ ರೈತರ ಒಡನಾಟವು ಕೃಷಿ ಅನುಭವ, ಪ್ರಾಯೋಗಿಕ ಜ್ಞಾನ, ಮತ್ತು ಸಾಮಾಜಿಕ ಕಳಕಳಿ ಹಾಗು ಗ್ರಾಮೀಣ ಕೃಷಿ ಕಾರ್ಯಾನುಭವ ನಡೆಯಲಿದ್ದು ಈ ವೇಳೆ ವಿದ್ಯಾರ್ಥಿಗಳಿಗೆ ನಿಮ್ಮೆಲ್ಲರ ಸಹಕಾರ ಅತೀ ಮುಖ್ಯ ಎಂದು ಕೃಷಿ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು ಡಾ. ಸಿ.ಎಂ.ಸವಿತಾ ಅಭಿಪ್ರಾಯ ವ್ಯಕ್ತಪಡಿಸಿದರು.

ತೂಬಗೆರೆ ಹೋಬಳಿ ಶಿರವಾರ ಗ್ರಾಮದಲ್ಲಿನಡೆದ ಜಿಕೆವಿಕೆ ಯ ಬಿಎಸ್ಸಿ ಕೃಷಿ ಮತ್ತು ಕೃಷಿ ನಿರ್ವಹಣೆ ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಕೃಷಿ ಇಲಾಖೆ ಹಾಗೂ ರೈತ ಸಂಪರ್ಕ ಕೇಂದ್ರಗಳ ಮೂಲಕ ರೈತರು ತಮ್ಮ ಜಮೀನಿನ, ಮಣ್ಣಿನ ಪರೀಕ್ಷೆ ಮಾಡಿಸುವುದು ಮುಖ್ಯವಾಗಿದೆ. ಕೃಷಿ ವಿವಿಯ ವಿದ್ಯಾರ್ಥಿಗಳು ಪುಸ್ತಕದ ಶಿಕ್ಷಣದ ಜೊತೆಗೆ ಮತ್ತು ಸಾಮಾಜಿಕ ಕಳಕಳಿ ಹಾಗೂ ಗ್ರಾಮೀಣ ಕೃಷಿ ಕಾರ್ಯಾನುಭವ ಪಡೆಯಬೇಕಿದೆ. ಕಾರ್ಯಾನುಭವದ ವೇಳೆ ಉಚಿತವಾಗಿ ಮಣ್ಣಿನ ಪರೀಕ್ಷೆ, ಪಶು ಆರೋಗ್ಯ ತಪಾಸಣಾ ಶಿಬಿರ, ಆರೋಗ್ಯ ತಪಾಸಣಾ ಶಿಬಿರ, ಬೀಜ ಸಂಸ್ಕರಣೆ, ಕೃಷಿ ಸಂಘ ಸಂಸ್ಥೆಗಳ ಉದ್ದೇಶಗಳು ಹಾಗೂ ಕೃಷಿ ಮಾರುಕಟ್ಟೆ ಸವಲತ್ತಿನ ಬಗ್ಗೆ ಮಾಹಿತಿ ನೀಡಿ, ಮೂರು ತಿಂಗಳ ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮದ ಆರ್‌ಎಡಬ್ಲ್ಯೂ ಇಪಿ ಉದ್ದೇಶಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳು, ಮಾಜಿ ಅದ್ಯಕ್ಷರು, ಮಾಜಿ ಕಾರ್ಯದರ್ಶಿಗಳು, ಮಾಜಿ ಗ್ರಾ.ಪಂ. ಅಧ್ಯಕ್ಷರು ಮತ್ತು ಮಾದರಿ ರೈತರು ಹಾಗೂ ವಿದ್ಯಾರ್ಥಿಗಳು ಗ್ರಾಮಸ್ಥರು ಹಾಜರಾಗಿದ್ದರು.

# ಎಸ್ಐಆರ್ ಮಹಾ ಅಭಿಯಾನ



ಶಿಡ್ಲಘಟ್ಟ

ನಗರದ ನಗರೇಶ್ವರ ಕಲ್ಯಾಣ ಮಂಟಪದಲ್ಲಿ ಭಾರತೀಯ ಜನತಾ ಪಕ್ಷದ ವತಿಯಿಂದ ಎಸ್.ಐ.ಆರ್. ಮಹಾ ಅಭಿಯಾನಕ್ಕೆ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸೀಕಲ್ ರಾಮಚಂದ್ರ ಗೌಡ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಯನ್ನು ಸಮರ್ಪಕವಾಗಿ ಪರಿಷ್ಕರಿಸುವ ಪ್ರಕ್ರಿಯೆಯಲ್ಲಿ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಪಕ್ಷದ ಕಾರ್ಯಕರ್ತರು ಮನೆ–ಮನೆಗೆ ಭೇಟಿ ನೀಡಿ ಈ ಕುರಿತು ಜನರಿಗೆ ಮಾಹಿತಿ ನೀಡುವ ಮೂಲಕ ಜಾಗೃತಿ ಮೂಡಿಸುತ್ತಿದ್ದಾರೆ ಎಂದು ಹೇಳಿದರು. ಬಳಿಕ ಅವರು 50ಕ್ಕೂ ಹೆಚ್ಚು ಮನೆಗಳಿಗೆ ಭೇಟಿ ನೀಡಿ ಎಸ್.ಐ.ಆರ್. ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ನಗರದ 2ನೇ ವಾರ್ಡ್‌ನ ಬೂತ್ ಸಂಖ್ಯೆ 129ರಲ್ಲಿ ಎಸ್.ಐ.ಆರ್. ಅರ್ಜಿಗಳು ಶೇ.100ರಷ್ಟು ಸಲ್ಲಿಕೆಯಾಗಿರುವ ಹಿನ್ನೆಲೆಯಲ್ಲಿ ಅಲ್ಲಿನ ಬಿ.ಎಲ್.ಒ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದಗೌಡ, ನಗರ ಮಂಡಲ ಅಧ್ಯಕ್ಷ ದೇವರಾಜ್, ನರೇಶ್, ಆಂಜನೇಯಗೌಡ, ಸುರೇಂದ್ರಗೌಡ, ಚೆಲುವರಾಜ್, ನಾರಾಯಣಸ್ವಾಮಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹಾಜರಿದ್ದರು.

# ಶ್ರೀಪ್ರಸನ್ನ ವೆಂಕಟರಮಣ ಸ್ವಾಮಿಗೆ ವಿಶೇಷ ಹೂವಿನ ಅಲಂಕಾರ

ವೈ.ಎನ್.
ಹೊಸಕೋಟೆ



ಗ್ರಾಮದ ಸಂತೆ ಬೀದಿ ರಸ್ತೆಯಲ್ಲಿರುವ ಶ್ರೀಪ್ರಸನ್ನ ವೆಂಕಟರಮಣ ಸ್ವಾಮಿ ದೇವಾಲಯದಲ್ಲಿ ಪ್ರಥಮ ಏಕಾದಶಿ ಅಂಗವಾಗಿ ವಿಶೇಷ ಪೂಜೆಗಳು ಶ್ರದ್ಧಾಭಕ್ತಿಯಿಂದ ನೆರವೇರಿದವು.

ಪ್ರಥಮ ಏಕಾದಶಿ ಪ್ರಯುಕ್ತ ಶ್ರೀಪ್ರಸನ್ನ ವೆಂಕಟರಮಣ ಸ್ವಾಮಿಗೆ ಅಭಿಷೇಕ, ವಿಶೇಷ ಹೂವಿನ ಅಲಂಕಾರ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು.

ಬೆಳಗ್ಗೆಯಿಂದಲೇ ದೇವಾ ಲಯಕ್ಕೆ ಆಗಮಿಸಿದ ಭಕ್ತರು ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ, ಶ್ರೀ ಪ್ರಸನ್ನ ವೆಂಕಟರಮಣ ಸ್ವಾಮಿಯ ಕೃಪೆಗೆ ಪಾತ್ರರಾದರು. ದೇವಾಲಯದಲ್ಲಿ ದಿನವಿಡೀ ಭಕ್ತಿಮಯ

# ಮಕ್ಕಳಿಗೆ ಪುಸ್ತಕ ಮತ್ತು ಲೇಖನ ಸಾಮಾಗ್ರಿಗಳ ವಿತರಣೆ

ಮುಳಬಾಗಿಲು

ಡಿವಿಜಿ ಶಾಲೆಯಲ್ಲಿನ ಮುಖ್ಯ ಶಿಕ್ಷಕರ ಕ್ರಿಯಾಶೀಲತೆ ಮತ್ತು ಆಸಕ್ತಿಯಿಂದ ಇಲ್ಲಿನ ಶಾಲೆಗೆ ದಾನಿಗಳ ಮಹಾಪೂರ ಹರಿದು ಬರುವುದರ ಜೊತೆಗೆ ಶೈಕ್ಷಣಿಕ ಪ್ರಗತಿಯೂ ದಿನೆದಿನೆ ಹೆಚ್ಚಾಗುತ್ತಿದೆ ಎಂದು ಬಿಇಒ ಕಚೇರಿಯ ಇ.ಸಿ.ಒ ಬಿ.ಕೆ.ಸತೀಶ್ ಹೇಳಿದರು.

ನಗರದ ಸರ್ಕಾರಿ ಡಿವಿಜಿ ಪ್ರಾಥಮಿಕ ಶಾಲೆಯಲ್ಲಿ ಸಮಾಜ ಸೇವಕ ಕೊತ್ತಮಂಗಲ ಸುಬ್ರಮಣಿ ಅವರು ಶಾಲಾ ಮಕ್ಕಳಿಗೆ ಹಮ್ಮಿಕೊಂಡ ಲೇಖನಿ ಸಾಮಾಗ್ರಿಗಳ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾಕಷ್ಟು ಮಂದಿ ಜನರ ಬಳಿ ಹಣ ಇರುತ್ತದೆ. ಆದರೆ ಕೇವಲ ಕೆಲವರು ಮಾತ್ರ ದಾನ ಮಾಡುವ ಕಾಯಕದಲ್ಲಿ ತೊಡಗಿಸಿಕೊಂಡಿದ್ದಾರೆ. ಆದರೆ ವಿದ್ಯೆಗೆ ದಾನ ಮಾಡುವುದು ಮಾತ್ರ ಶಾಶ್ವತ. ಆದ್ದರಿಂದ ವಿದ್ಯಾ ಕ್ಷೇತ್ರಕ್ಕೆ ದಾನ ಮಾಡುತ್ತಿರುವ ದಾನಿಗಳ ಸಂಖ್ಯೆ ಇನ್ನೂ ಹೆಚ್ಚಾಗಲಿ ಎಂದರು.

ಶಾಲೆ ಹಾಗೂ ಮಕ್ಕಳ ಶೈಕ್ಷಣಿಕ ಪ್ರಗತಿಯ ಬಗ್ಗೆ ನಿರಂತರವಾಗಿ ಕಾಳಜಿ ಇರುವವರು ಮಾತ್ರ ಇಂತಹ ಕಾರ್ಯಕ್ರಮಗಳನ್ನು ನಡೆಸಲು ಸಾಧ್ಯ. ಬೆರಳೆಣಿಕೆಯಷ್ಟು ಇದ್ದ ದಾಖಲಾತಿ ಪ್ರಮಾಣವನ್ನು ಇವತ್ತಿನ ದಿನದಲ್ಲಿ ಒಂದು ಸಾವಿರ ವಿದ್ಯಾರ್ಥಿಗಳ ಸಂಖ್ಯೆಗೆ ಹೆಚ್ಚಾಗಿರುವುದು



ತುಂಬಾ ಸಂತಸದ ಸಂಗತಿ. ಸಿಸಿ ಕ್ಯಾಮರಾಗಳು ಸೇರಿದಂತೆ ಯುಪಿಎಸ್ ಮತ್ತಿತರೆ ಸೌಲಭ್ಯಗಳನ್ನು ದಾನಿಗಳಿಂದ ಪಡೆದುಕೊಳ್ಳುವಲ್ಲಿ ಮುಖ್ಯ ಶಿಕ್ಷಕರಾದ ಸಿ.ಸೊಣ್ಣಪ್ಪ ಅವರು ಶ್ರಮಿಸುತ್ತಿರುವುದು ಶ್ಲಾಘನೀಯ ಎಂದು ತಿಳಿಸಿದರು.

ಡಿವಿಜಿ ಶಾಲೆ ಮುಖ್ಯ ಶಿಕ್ಷಕ ಸಿ.ಸೊಣ್ಣಪ್ಪ ಮಾತನಾಡಿ, ಸರ್ಕಾರಿ ಶಾಲೆಗಳ ಉಳಿವಿಗೆ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಅವರು ಪ್ರತಿ ಶಾಲೆಯಲ್ಲಿ ಸಹ ಹಳೆ ವಿದ್ಯಾರ್ಥಿ ಸಂಘ ಹಾಗೂ ದಾನಿಗಳ ನೆರವು ಪಡೆದು ಶಾಲೆ ಅಭಿವೃದ್ಧಿಯೊಂದಿಗೆ ಮಕ್ಕಳ ಶೈಕ್ಷಣಿಕ ಬೆಳವಣಿಗೆ ಮುಂದುವರೆಸಲು ಆದೇಶ ನೀಡಿದ್ದರು. ಆಗಸ್ಟ್ 15ರಂದು ಗುಜರಾತ್‌ನ ದಾನಿಯೊಬ್ಬರು ವಿದ್ಯಾರ್ಥಿಗಳಿಗೆ ಬ್ಯಾಗ್ ಜೊತೆಗೆ ಲೇಖನಿ ಸಾಮಾಗ್ರಿಗಳ ಕಿಟ್ ವಿತರಣೆ ಮಾಡಲಿದ್ದಾರೆ. ಮತ್ತೊಬ್ಬರು ಟ್ರಾಕ್ ಶೂಟ್ ವಿತರಿಸಲಿದ್ದಾರೆ ಎಂದು ಮಾಹಿತಿಯನ್ನು ನೀಡಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕ ಕೊತ್ತಮಂಗಲ ಸುಬ್ರಮಣಿ, ನಗರಸಭೆ ಮಾಜಿ ಸದಸ್ಯ ಜಭೀವುಲ್ಲಾ, ಕನ್ನಡ ಬೆಳಗು ವೇದಿಕೆ ಅಧ್ಯಕ್ಷ ಅತ್ತಿಕುಂಟೆ ಎಸ್.ಸುಬ್ರಮಣಿ, ಶಿಕ್ಷಕರಾದ ಎಸ್.ಕೆ.ಪದ್ಮಾವತಿ, ಶಾರದ, ಭಾಗ್ಯಮ್ಮ, ಕವಿತಾ, ಸಲ್ಮಾ, ಕೆ.ಬಿ.ಪಾರ್ವತಮ್ಮ, ಪದ್ಮ, ಭಾರತಿ, ಜಯಂತಿ ಮತ್ತಿತರರು ಇದ್ದರು.

## ಜಗದೀಶ್ ಎಂಗೆ ಪಿಎಚ್‌ಡಿ ಗೌರವ

ಕನಕಪುರ

ಪ್ರೌಢಶಾಲಾ ವಿದ್ಯಾರ್ಥಿಗಳ ಕುರಿತು ಮಂಡಿಸಿದ ಪ್ರೌಢ ಪ್ರಬಂಧಕ್ಕೆ ಸಹಾಯಕ ಪ್ರಾಧ್ಯಾಪಕರಾದ ಜಗದೀಶ್. ಎಂ ಅವರಿಗೆ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದಿಂದ ಪಿಎಚ್‌ಡಿ ಪದವಿ ನೀಡಿ ಗೌರವಿಸಿದೆ.



ನಗರದ ನಿವಾಸಿಯಾದ ಜಗದೀಶ್ ಅವರು, ತಮ್ಮ ಪ್ರಾಥಮಿಕ ಶಾಲಾ ಶಿಕ್ಷಣ ಮತ್ತು ಪದವಿ ಶಿಕ್ಷಣವನ್ನು ಆರ್‌ಇಎಸ್ ಶಿಕ್ಷಣ ಸಂಸ್ಥೆಯಲ್ಲಿ ಪೂರೈಸಿದ್ದು ಪ್ರಸ್ತುತ ಬೆಂಗಳೂರಿನ ಸಂತ ತೆರೇಸಾ ಮಹಿಳಾ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ, ಇವರು ಪ್ರೌಢಶಾಲಾ ವಿದ್ಯಾರ್ಥಿಗಳ ವಿಮರ್ಶಾತ್ಮಕ ಚಿಂತನಾ ಸಾಮರ್ಥ್ಯವು ಅವರ ಕಲಿಕಾ ಶೈಲಿಗಳು ಮತ್ತು ಜೀವಶಾಸ್ತ್ರ ವಿಷಯದಲ್ಲಿನ ಶೈಕ್ಷಣಿಕ ಸಾಧನೆಗಳೊಂದಿಗೆ ಹೊಂದಿರುವ ಸಂಬಂಧ ಎಂಬ ಪ್ರೌಢ ಪ್ರಬಂಧವನ್ನು ಮಂಡಿಸಿದ್ದರು.

ಬೆಂಗಳೂರು ನಗರ ವಿಶ್ವವಿದ್ಯಾಲಯದ ಆರ್.ವಿ. ಶಿಕ್ಷಣ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ. ಬಿ.ಪಿ. ಕಾವ್ಯ ಕಿಶೋರ್ ಅವರ ಮಾರ್ಗದರ್ಶನದಲ್ಲಿ ಮಂಡಿಸಿದ ಪ್ರಬಂಧಕ್ಕೆ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದಿಂದ ಜಗದೀಶ್. ಎಂ ಗೆ ಪಿಎಚ್‌ಡಿ ಪದವಿ ನೀಡಿ ಗೌರವಿಸಿದೆ. ಪಿ ಎಚ್ ಡಿ ಪದವಿ ಗೌರವ ಪಡೆದ ಜಗದೀಶ್. ಎಂಗೆ ಸಹೋದ್ಯೋಗಿಗಳು, ಹಿತೈಷಿಗಳು ಸ್ನೇಹಿತರು ಹಾಗೂ ಪೋಷಕರು ಅಭಿನಂದನೆ ಸಲ್ಲಿಸಿದ್ದಾರೆ.

# ಕಾನ್ಸ್‌ಟೇಬಲ್ ಹುದ್ದೆ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಸಮಾರಂಭ

ದೊಡ್ಡಬಳ್ಳಾಪುರ

ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಯ ಸ್ಪರ್ಧಾತ್ಮಕ ಪರೀಕ್ಷೆಗೆ ಉಚಿತ ಮಾರ್ಗದರ್ಶನ ಮತ್ತು ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭ ಕಾರ್ಯಕ್ರಮವು ತಾಲ್ಲೂಕಿನ ದರ್ಗಾಜೋಗಿಹಳ್ಳಿ ಗ್ರಾಮ ಪಂಚಾಯತಿ ಬಳಿಯ ಸಮುದಾಯ ಭವನದಲ್ಲಿ ನಡೆಯಿತು.

ಜೂ. 15ರಿಂದ ಪ್ರಾರಂಭವಾದ ತರಬೇತಿ ಕಾರ್ಯಕ್ರಮದಲ್ಲಿ ಪಿ ಯು ಸಿ ಉತ್ತೀರ್ಣರಾದ ಯುವಕ/ಯುವತಿಯರಿಗೆ ಉಚಿತವಾಗಿ ಪೋಲಿಸ್ ಇಲಾಖೆಯ ಸಹಯೋಗದೊಂದಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಎದುರಿಸಲು ಅಗತ್ಯ ತರಬೇತಿ ಒದಗಿಸಲಾಗಿದೆ ಮಕ್ಕಳ ಮುಂದಿನ ಭವಿಷ್ಯಕ್ಕಾಗಿ ನಮ್ಮೊಂದಿಗೆ ಕೈಜೋಡಿಸಿದ ಎಲ್ಲಾ ಸಂಪನ್ಮೂಲ ಶಿಕ್ಷಕರಿಗೆ ಪೊಲೀಸ್ ಅಧಿಕಾರಿಗಳಿಗೆ ಹಾಗೂ ದಾನಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಕಾರ್ಯಾಗಾರದ ಆಯೋಜಕ ಅನ್ನದಾಸೋಹಿ ಎಲ್. ಮಲ್ಲೇಶ್ ತಿಳಿಸಿದ್ದಾರೆ.

ಸ್ಪರ್ಧಾರ್ಥಿಗಳು ಈ ಕಾರ್ಯಾಗಾರದಲ್ಲಿ ಭಾಗವಹಿಸಿ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಸುಲುಭವಾಗಿ ಅತಿಹೆಚ್ಚು ಅಂಕಗಳನ್ನು ಗಳಿಸುವ ಸರಳ ಮಾರ್ಗವನ್ನು ಅರಿತಿದ್ದಾರೆ

ಪರೀಕ್ಷೆಗಳಿಗೆ ಹೇಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂಬುದರ ಜೊತೆಗೆ ಸ್ಪರ್ಧಾರ್ಥಿಗಳು ಮಾದರಿ ಪರೀಕ್ಷೆಗಳಿಂದ ಹೆಚ್ಚಿನ ಅಂಕಗಳಿಸುವ ತಂತ್ರ ತಿಳಿದಿದ್ದಾರೆ ಎಂದರು.

ಈ ವೇಳೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶಶಿಕಲಾ ನಾಗರಾಜ್, ಗ್ರಾಮಪಂಚಾಯತಿ ಸದಸ್ಯ ಜೆ.ವೈ ಮಲ್ಲಪ್ಪ

ಸುಬ್ರಹ್ಮಣ್ಯ ನಮ್ಮ ಕರ್ನಾಟಕ ಸೇನೆ,ಸುರೇಶ್ ಸಿಂಗಂ ಸಮಾಜ ಸೇವಕರು, ಸಂಪನ್ಮೂಲ ಶಿಕ್ಷಕರಾದ ಜಿ ಸುರೇಶ್ ಕೋಶಾಧ್ಯಕ್ಷ ರು.ಕನ್ನಡ ಸಾಹಿತ್ಯ ಪರಿಷತ್, ನಾಗರಾಜ್ ಗ್ರಾಮಾಂತರ ಪೊಲೀಸ್ ಠಾಣೆ,ಗಣಪತಿ ಆವಟಿ ಆರಕ್ಷಕರು, ಚನ್ನಕೇಶವ ಮೂರ್ತಿ,ರಾಮು, ರವಿಕಿರಣ್. ಎ., ಸಮೀರ್ ಬಿ.ಟಿ.ತಿಮ್ಮಯ್ಯ, ಮಧು, ದೈಹಿಕ ತರಬೇತುದಾರ ಶ್ರೀನಿವಾಸ್, ವೈದ್ಯಕೀಯ ತರಬೇತುದಾರರಾದ ಡಾ. ಚಂದನ, ಹಾಗೂ ಪ್ರಮುಖ ಕೆ.ಶ್ರೀನಿವಾಸ್ ಪೋಲೀಸ್ ಇಲಾಖೆ ಸೇರಿದಂತೆ ಹಲವು ಪ್ರಮುಖರು ಹಾಜರಿದ್ದರು.

# ಹೂವಿನ ತೋಟಕ್ಕೆ ಕನ್ನ: ಆರೋಪಿಗಳು ಬಂಧನ

ಚಿಕ್ಕಬಳ್ಳಾಪುರ

ತಾಲೂಕಿನ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಹೂವಿನ ತೋಟಕ್ಕೆ ಕನ್ನ ಗ್ರಾಮಸ್ಥರಿಂದ ಏಟು ಬಿದ್ದಿದ್ದು ಒಂದು ಕಡೆಯಾದರೆ ಕಳೆದ 12 ದಿನಗಳ ಹಿಂದೆಯಲ್ಲಷ್ಟೇ ದ್ರಾಕ್ಷಿ ಕಳ್ಳತನಕ್ಕೆ ಸಂಬಂಧಿಸಿದ ಆರೋಪಿಗಳನ್ನು ಪೊಲೀಸರು ಎಡೆಮುರಿ ಕಟ್ಟಿ ಇದಕ್ಕೆ ಸಂಬಂಧಿಸಿದ ಐದು ಮಂದಿಯನ್ನು ಬಂಧಿಸಿರುವ ಘಟನೆ ನಡೆದಿದೆ.

ದ್ರಾಕ್ಷಿ ಕಳವು ಬಂಧನ: ತಾಲೂಕಿನ ಕೊಳವನಹಳ್ಳಿಯಲ್ಲಿ ಕಳೆದ ಜು 14 ರಂದು ನಡೆದ ಎರಡು ಟನ್ ದ್ರಾಕ್ಷಿ ಕಳ್ಳತನಕ್ಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಐದು ಮಂದಿ ಆರೋಪಗಳನ್ನ ವಶಕ್ಕೆ ಪಡೆದಿದ್ದಾರೆ.

ಕಳ್ಳತನದಲ್ಲಿ ಭಾಗಿಯಾಗಿದ್ದ ಬೆಂಗಳೂರಿನ ಸಿ.ಎ.ಅಂಬರೀಶ್, ಅನಿಲ್, ವೈ ಓ ವೆಂಕಟೇಶ ಅಲಿಯಾಸ್ ಗಸಾಲು ವೆಂಕಟೇಶ್, ಭೀಮಣ್ಣ, ವಿಶ್ವನಾಥ್ ಬಂದಿತ ಆರೋಪಿಗಳಾಗಿದ್ದಾರೆ. ಬಂಧಿತ ಆರೋಪಿಗಳಿಂದ ಪೊಲೀಸರು 2 ಲಕ್ಷ ರೂ. ಜಪ್ತಿ ಮಾಡಿದ್ದಾರೆ, ಕೊಳವನಹಳ್ಳಿಯ ರೈತ ಬಸವರಾಜ್ ಅವರ ದ್ರಾಕ್ಷಿ ತೋಟದಿಂದ ರಾತ್ರೋರಾತ್ರಿ ರೆಡ್ ಗ್ಲೋಬ್ ತಳಿಯ ದ್ರಾಕ್ಷಿ ಕಳವು ಮಾಡಿಕೊಂಡು ಹೋಗಿದ್ದರು. ಈ ಸಂಬಂಧ ನಂದಿ ಗಿರಿಧಾಮ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಅದೇ ರೀತಿ ದ್ರಾಕ್ಷಿ ಬೆಳೆಗಾರರ ಸಂಘ ಮತ್ತು ಕೃಷಿಕ ಸಮಾಜದಿಂದ ಆರೋಪಿಗಳನ್ನು ಬಂಧಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಹ ಸಲ್ಲಿಸಲಾಗಿತ್ತು. ಈ ಭಾಗದಲ್ಲಿ ರೈತರ ತೋಟಗಳಲ್ಲಿನ ದ್ರಾಕ್ಷಿ ಕಳತನ ನಡೆದ ಬಳಿಕ ರೈತರು ತೀವ್ರ ಆತಂಕಕ್ಕೆ ಒಳಗಾಗಿದ್ದರು ದಾಳಿಂಬೆ ಬಳಿಕ ದ್ರಾಕ್ಷಿ ತೋಟಕ್ಕೂ ಕಳ್ಳರು ನುಗ್ಗಿ ಕಳ್ಳತನ ಮಾಡುತ್ತಿದ್ದದ್ದು ಹೆರಳವಾಗಿತ್ತು.

ಹೂವಿನ ತೋಟಕ್ಕೆ ಕನ್ನ ಗ್ರಾಮಸ್ಥರಿಂದ ಒದೆ: ರೈತರ ಹೂವಿನ ತೋಟಕ್ಕೆ ಕನ್ನ ಹಾಕುತ್ತಿದ್ದ ಕಳ್ಳನೋರ್ವನನ್ನು ಗ್ರಾಮಸ್ಥರೇ ಹಿಡಿದು ಪೊಲೀಸರಿಗೆ ಒಪ್ಪಿಸಿರುವ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಗುಂಡ್ಲಗುರ್ಕಿ ಗ್ರಾಮದಲ್ಲಿ ನಡೆದಿದೆ.

ಗುಂಡ್ಲಗುರ್ಕಿ ಗ್ರಾಮದ ವಿವಿಧ ಭಾಗಗಳಲ್ಲಿನ ಹೂವಿನ ತಮ್ಮ ತೋಟಗಳಲ್ಲಿ ರೈತರು ಹೂವು ಕಟಾವು ಮಾಡಿ ಬ್ಯಾಗುಗಳಲ್ಲಿ ತುಂಬಿಡತಿದ್ದರು ಇದಕ್ಕೆ ಹೊಂಚು ಹಾಕುತ್ತಿದ್ದ ವ್ಯಕ್ತಿ ಒಬ್ಬ ತುಂಬಿ ಇಡುತ್ತಿದ್ದ ಬ್ಯಾಗನ್ನು ಕದಿಯುತ್ತಿದ್ದ ಇದು ರೈತರಿಗೆ ದೊಡ್ಡ ಸಮಸ್ಯೆ ಆಗಿತ್ತು.

ನಿನ್ನೆ ರೈತ ಗಂಗರಾಜು ಎಂಬುವವರ ಹೂವಿನ ತೋಟಕ್ಕೆ ಬೈಕಿನಲ್ಲಿ ಬಂದ ಆರೋಪಿಯು ಹೂವು ತುಂಬಿದ ಬ್ಯಾಗನ್ನು ತೆಗೆದುಕೊಂಡು ಪರಾರಿಯಾಗಲು ಯತ್ನಿಸಿದ್ದಾನೆ ಇದನ್ನು ಗಮನಿಸಿದ ಗಂಗರಾಜು ಕೂಡಲೇ ಆರೋಪಿ ಬೆನ್ನಟ್ಟಿದ್ದಾನೆ ಸ್ಥಳೀಯರ ಸಹಾಯದಿಂದ ಆರೋಪಿಯನ್ನ ಹಿಡಿದಿದ್ದಾರೆ ಈ ಬಗ್ಗೆ ಗ್ರಾಮಾಂತರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದು ಆರೋಪಿಯ ಕಳ್ಳತನದ ಕೃತಿಯ ಸಮೀಪ ಸಿಸಿಟಿವಿ ಕ್ಯಾಮೆರದಲ್ಲಿ ಸೆರೆಯಾಗಿದೆ. ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು ಈತನನ್ನ ಹಿಡಿದು ವಿಚಾರಣೆಗೈದಿದ್ದಾರೆ.

# ಹೆಣ್ಣು ಮಕ್ಕಳ ರಕ್ಷಣೆಗೆ ಕಠಿಣ ಕಾನೂನು ಜಾರಿಗೆ ನಳಿನಿಗೌಡ ಆಗ್ರಹ

ಕೋಲಾರ

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ತಡೆಗೆ ಕೇಂದ್ರ ಸರ್ಕಾರ ಕಠಿಣ ಕಾನೂನು ಜಾರಿಗೊಳಿಸಿದಂತೆ ದೇಶಾದ್ಯಂತ ಮಹಿಳೆಯರು ಮತ್ತು ಬಾಲಕಿಯರ ಮೇಲಿನ ದೌರ್ಜನ್ಯ, ಅತ್ಯಾಚಾರ ಹಾಗೂ ಹತ್ಯೆ ಪ್ರಕರಣಗಳನ್ನು ತಡೆಗಟ್ಟಲು ವಿಶೇಷವಾದ ಕಠಿಣ ಕಾನೂನು ರೂಪಿಸಬೇಕೆಂದು ರೈತ ಸಂಘದ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಎ.ನಳಿನಿಗೌಡ ಸರ್ಕಾರಗಳನ್ನು ಆಗ್ರಹಿಸಿದ್ದಾರೆ.

ತಮ್ಮ ತೋಟದಲ್ಲಿ ಕೃಷಿ ಮಹಿಳೆಯೊಂದಿಗೆ ಮಾತನಾಡಿದ ಅವರು, ನೀಟ್, ಜೆಇಇ, ಕೆಪಿಎಸ್‌ಸಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು 10 ವರ್ಷಗಳ ಕಠಿಣ ಶಿಕ್ಷೆ ಹಾಗೂ 10 ಕೋಟಿ ದಂಡದಂತಹ ಕಾನೂನು ಜಾರಿಗೊಳಿಸಿರುವುದು ಸ್ವಾಗತಾರ್ಹ. ಆದರೆ ಈ ಕಾನೂನು ಪರಿಣಾಮಕಾರಿಯಾಗಿ



ಹಾಗೂ ಶಾಶ್ವತವಾಗಿ ಜಾರಿಯಾದಾಗ ಮಾತ್ರ ಅದರ ಉದ್ದೇಶ ಸಾರ್ಥಕವಾಗಲಿದೆ ಎಂದರು.

ದೇಶದ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರು ಪುರುಷರಿಗೆ ಸಮಾನವಾಗಿ, ಕೆಲವೊಮ್ಮೆ ಮಿಗಿಲಾಗಿ ಸಾಧನೆ ಮಾಡುತ್ತಿದ್ದರೂ, ಮಹಿಳೆಯರ ಮೇಲಿನ ಅತ್ಯಾಚಾರ, ಕೊಲೆ ಮತ್ತು ದೌರ್ಜನ್ಯ ಪ್ರಕರಣಗಳು ನಿರಂತರವಾಗಿ ನಡೆಯುತ್ತಿರುವುದು ಆತಂಕಕಾರಿ ಎರಡು ವರ್ಷದ ಬಾಲಕಿಯಿಂದ 80 ವರ್ಷದ ವೃದ್ಧೆಯರವರೆಗೆ ಮಹಿಳೆಯರ ಮೇಲೆ ನಡೆಯುವ ಅಪರಾಧಗಳನ್ನು ಗಂಭೀರವಾಗಿ ಪರಿಗಣಿಸಿ, ಆರೋಪಿಗಳಿಗೆ ಕಠಿಣ ಶಿಕ್ಷೆಯಾಗುವಂತೆ ವಿಶೇಷ ಕಾನೂನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಯುವಕರ ಭವಿಷ್ಯವನ್ನು ರಕ್ಷಿಸಲು ಪರೀಕ್ಷಾ ಅಕ್ರಮಗಳ ವಿರುದ್ಧ ಕಾನೂನು ಜಾರಿಯಾದಂತೆ, ಹೆಣ್ಣುಮಕ್ಕಳ ಸುರಕ್ಷತೆಗೂ ಸಮಾನ ಆದ್ಯತೆ ನೀಡಿ ಪರಿಣಾಮಕಾರಿ ಕಾನೂನು ಜಾರಿಗೊಳಿಸುವ ಮೂಲಕ ದೇಶದ ಭವಿಷ್ಯವನ್ನು ಕಾಪಾಡಬೇಕೆಂದು ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಐತಾಂಡಹಳ್ಳಿ ಶೈಲಜ, ರತ್ನಮ್ಮ, ಗೌರಮ್ಮ, ಗೀತಾ, ಶಾಂತಮ್ಮ, ಸುನಿತಾ, ಚೌಡಮ್ಮ, ಶೋಭಾ, ಪವಿತ್ರಾ, ಸವಿತಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

29/07/2026

# ಭಾರತ ಸಾರಥಿ

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಎಲ್.ವೈ ರಾಜೇಶ್‌ಗೆ ಇಲಾಖೆಯ ಕಮಾಂಡೇಶನ್ ಡಿಸ್ಕ್ ಬ್ರಾಡ್ಜ್ ಗೌರವ



ಕೋಲಾರ

ಕೋಲಾರ ಮೂಲದ ದಕ್ಷ ಪೊಲೀಸ್ ಅಧಿಕಾರಿ ಎಲ್.ವೈ ರಾಜೇಶ್ ಅವರಿಗೆ ಇಲಾಖೆಯಲ್ಲಿನ ದಕ್ಷ ಕರ್ತವ್ಯ ನಿರ್ವಹಣೆಗಾಗಿ ಕಮಾಂಡೇಶನ್ ಡಿಸ್ಕ್ ಬ್ರಾಡ್ಜ್ ಸಿಕ್ಕಿದ್ದು ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಿಜಿ ಹಾಗೂ ಐಜಿ ಅವರಿಂದ ಪ್ರತಿಷ್ಠಿತ ಬ್ರಾಡ್ಜ್‌ನ್ನು ಎಲ್.ವೈ ರಾಜೇಶ್ ಸ್ವೀಕರಿಸಿದರು.

ಎಲ್.ವೈ ರಾಜೇಶ್ ಕೋಲಾರ ಮೂಲದವರಾಗಿದ್ದು ಇವರ ತಂದೆ ತಾಯಿ ಕೋಲಾರ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಿ ನಿವೃತ್ತರಾಗಿದ್ದಾರೆ. ತಂದೆ ಪಿ.ವಿ ಲಕ್ಷ್ಮಯ್ಯ ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸಿ ನಿವೃತ್ತಿಯಾಗಿದ್ದಾರೆ. ತಾಯಿ ಯಲ್ಲಮ್ಮ ಲಕ್ಷ್ಮಯ್ಯ ಸಹ ಶಿಕ್ಷಣಾಧಿಕಾರಿಯಾಗಿ ಸೇವೆ ಸಲ್ಲಿಸಿ ನಿವೃತ್ತಿಯಾಗಿದ್ದಾರೆ.

ತಂದೆತಾಯಿಯಂತೆ ಮಗ ಎಲ್.ವೈ ರಾಜೇಶ್ ಕೂಡ ಇಲಾಖೆಯಲ್ಲಿ ದಕ್ಷ ಪ್ರಾಮಾಣಿಕ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದು ಇಲಾಖೆಯಲ್ಲಿ ದಕ್ಷ ಸೇವೆಗಾಗಿ ಮುಖ್ಯಮಂತ್ರಿಗಳ ಚಿನ್ನದ ಪದಕ, ರಾಜ್ಯಪಾಲರಿಂದ ಜೀವ ರಕ್ಷಕ ಪದಕ, ಗೃಹ ಮಂತ್ರಿಗಳಿಂದ ಎಕ್ಸಲೆನ್ಸಿ ಇನ್ ಇನ್ವೆಸ್ಟಿಗೇಷನ್ ಮೆಡಲ್ ಗಳನ್ನು ಪಡೆದಿದ್ದು ಇದೀಗ ಕಮಾಂಡೇಶನ್ ಡಿಸ್ಕ್ ಬ್ರಾಡ್ಜ್ ಪಡೆದಿದ್ದಾರೆ, ಇದರ ಜೊತೆಗೆ ಅಖಿಲ ಭಾರತ ಪೊಲೀಸ್ ಕರ್ತವ್ಯ ಕೂಟದಲ್ಲಿ ಒಂದು ಚಿನ್ನದ ಪದಕ ಹಾಗೂ ಬೆಳ್ಳಿ ಪದಕ ಪಡೆದಿದ್ದಾರೆ. ಇಲಾಖೆಯಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಕಡೆ ಕರ್ತವ್ಯ ನಿರ್ವಹಿಸಿದರು ತಮ್ಮ ಮೂಲ ಕೋಲಾರ ಜಿಲ್ಲೆಯನ್ನು ಮಾತ್ರ ಎಲ್.ವೈ ರಾಜೇಶ್ ಅವರು ಮರೆತಿಲ್ಲ. ಅವರ ತಂದೆ ಮುಳಬಾಗಿಲು ಮೂಲದವರು ತಾಯಿ ಕೋಲಾರ ನಗರದ ಕಠಾರಿಪಾಳ್ಯ ಅವರ ತವರು ಮನೆ. ಇದೀಗ ಎಲ್ ವೈ ರಾಜೇಶ್ ಅವರು ಬೆಂಗಳೂರಿನ ಸಿಸಿಬಿಯಲ್ಲಿ ಮಾದಕ ದ್ರವ್ಯ ನಿಗ್ರಹ ದಳದ ಸಹಾಯಕ ಪೊಲೀಸ್ ಆಯುಕ್ತರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಬಡ ಮಕ್ಕಳ ಶಿಕ್ಷಣಕ್ಕೆ ತಮ್ಮ ಕೈಲಾದ ಸಹಾಯ ಮಾಡುತ್ತಿದ್ದಾರೆ. ಅವರ ತಂದೆ ತಾಯಿ ಕೂಡ ಬಡ ವಿಧ್ಯಾರ್ಥಿಗಳ ಶಿಕ್ಷಣಕ್ಕೆ ಒತ್ತು ನೀಡಿದರು. ಅವರಿಗೆ ಬಂದಿರುವ ಇಲಾಖೆಯಲ್ಲಿನ ಪ್ರಶಸ್ತಿ, ಮೆಡಲ್ ಗಳು ಕೋಲಾರಕ್ಕೆ ಸಿಕ್ಕಿದಂತೆ. ದೊಡ್ಡ ಅಧಿಕಾರಿಯಾದರೂ ತಮ್ಮ ಊರು ಕೋಲಾರನ್ನು ಮಾತ್ರ ಮರೆತಿಲ್ಲ. ಕೋಲಾರದವರು ಯಾರೇ ಸಿಕ್ಕರೂ ನಮ್ಮ ಊರಿನವರು ಎಂದು ಪ್ರೀತಿಯಿಂದ ಮಾತನಾಡುತ್ತಾರೆ. ಜಿಲ್ಲೆಯ ಕೆಲವು ವಿಧ್ಯಾರ್ಥಿಗಳಿಗೂ ಮಾರ್ಗ ದರ್ಶನ ನೀಡಿದ್ದಾರೆ ಎಂದ್ರು. ಇನ್ನೂ ಅವರಿಗೆ ಇಲಾಖೆಯಲ್ಲಿ ಕರ್ತವ್ಯ ನಿರ್ವಹಣೆಗೆ ಕಮಾಂಡೇಶನ್ ಡಿಸ್ಕ್ ಬ್ರಾಡ್ಜ್ ಗೌರವ ಸಿಕ್ಕಿರುವುದರಿಂದ ಜಿಲ್ಲೆಯ ಜನರ ಪರವಾಗಿ ಅಭಿನಂದನೆಗಳು ತಿಳಿಸುತ್ತೇವೆ. ಅವರು ಮತ್ತಷ್ಟು ಗೌರವ ಪ್ರಶಸ್ತಿ ರಾಷ್ಟ್ರಪದಕ ಸಿಗಲಿ ಎಂದು ಹಾರೈಸಿದ್ದಾರೆ.

## ಉತ್ತರ ಪಾಲಿಕೆಯಿಂದ ರೇಬಿಸ್ ಜಾಗೃತಿ

ಬೆಂಗಳೂರು

ಸಾರ್ವಜನಿಕರಲ್ಲಿ ರೇಬಿಸ್ ರೋಗದ ಕುರಿತು ಅರಿವು ಮೂಡಿಸುವುದು ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಹಿತಿ ನೀಡುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರ ಸೂಚನೆಯಂತೆ, ನಗರ ಪಾಲಿಕೆಯ ಪಶುಪಾಲನ ವಿಭಾಗದ ವತಿಯಿಂದ ಅಬ್ಬಿಗೆರೆ ಸರ್ಕಾರಿ ಪ್ರೌಢಶಾಲೆಯಲ್ಲಿ ರೇಬಿಸ್ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ರೇಬಿಸ್ ರೋಗ ಹರಡುವ ವಿಧಾನ, ನಾಯಿ ಹಾಗೂ ಇತರ ಪ್ರಾಣಿಗಳಿಂದ ಕಚ್ಚಿಸಿಕೊಂಡ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಪ್ರಾಥಮಿಕ ಚಿಕಿತ್ಸಾ ಕ್ರಮಗಳು, ಗಾಯವನ್ನು ಸಾಬೂನು ಮತ್ತು ಹರಿಯುವ ನೀರಿನಿಂದ ಕನಿಷ್ಠ 15 ನಿಮಿಷಗಳ ಕಾಲ ತೊಳೆಯುವ ಅಗತ್ಯತೆ ಹಾಗೂ ಯಾವುದೇ ವಿಳಂಬ ಮಾಡದೆ ಸಮೀಪದ ಸರ್ಕಾರಿ ಆಸ್ಪತ್ರೆಯಲ್ಲಿ ರೇಬಿಸ್ ಲಸಿಕೆ ಪಡೆಯುವ ಮಹತ್ವದ ಕುರಿತು ವಿವರವಾದ ಮಾಹಿತಿ ನೀಡಲಾಯಿತು. ಬೀದಿ ನಾಯಿಗಳೊಂದಿಗೆ ಸುರಕ್ಷಿತವಾಗಿ ವರ್ತಿಸುವ ಬಗ್ಗೆಯೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಬೀದಿ ನಾಯಿಗಳ ಸಂಖ್ಯೆಯನ್ನು ನಿಯಂತ್ರಿಸುವುದು ಹಾಗೂ ರೇಬಿಸ್ ನಿಯಂತ್ರಣಕ್ಕಾಗಿ ಬೆಂಗಳೂರು ಉತ್ತರ ನಗರ ಪಾಲಿಕೆ ಅನುಷ್ಠಾನಗೊಳಿಸುತ್ತಿರುವ ಪ್ರಾಣಿ ಜನನ ನಿಯಂತ್ರಣ ಕಾರ್ಯಕ್ರಮ, ಸಾಮೂಹಿಕ ನಾಯಿ ಲಸಿಕಾ ಕಾರ್ಯಕ್ರಮ ಹಾಗೂ ಪ್ರಾಣಿ ಕಲ್ಯಾಣಕ್ಕೆ ಸಂಬಂಧಿಸಿದ ವಿವಿಧ ಯೋಜನೆಗಳ ಕುರಿತು ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ಮಾಹಿತಿ ನೀಡಲಾಯಿತು. ಈ ಕುರಿತು ತಮ್ಮ ಕುಟುಂಬ ಸದಸ್ಯರು ಹಾಗೂ ನೆರೆಹೊರೆಯವರಲ್ಲಿಯೂ ಜಾಗೃತಿ ಮೂಡಿಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಲಾಯಿತು.

ಬೆಂಗಳೂರು ಉತ್ತರ ನಗರ ಪಾಲಿಕೆಯ ಪಶುಪಾಲನ ವಿಭಾಗವು ಮುಂದಿನ ದಿನಗಳಲ್ಲಿ ನಗರದ ವಿವಿಧ ಶಾಲೆಗಳು, ಕಾಲೇಜುಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ರೇಬಿಸ್ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯವನ್ನು ನಿರಂತರವಾಗಿ ಮುಂದುವರಿಸಲಿದೆ ಎಂದು ತಿಳಿಸಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಶ್ರೀನಿವಾಸ್ ವಹಿಸಿದ್ದರು. ಶಾಲೆಯ ಶಿಕ್ಷಕರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಮುಖ್ಯ ಪಶುವೈದ್ಯಾಧಿಕಾರಿ ಡಾ. ಹೆಚ್. ಕೆ. ಗಂಗಾಧರಯ್ಯ, ಡಾ. ಸುನಿಲ್ ಕುಮಾರ್ ಹಾವನೂರ್, ಮುಖ್ಯ ಪಶುವೈದ್ಯಾಧಿಕಾರಿ ಡಾ. ಬಿ.ಜಿ. ರಮೇಶ್, ಕೇರ್ ಸಂಸ್ಥೆಯ ಪ್ರತಿನಿಧಿ ಇಂದು ಪ್ರಿಯಾ ಹಾಗೂ ಪಶುಪಾಲನ ಇಲಾಖೆಯ ಸಿಬ್ಬಂದಿ ಪ್ರಕಾಶ್ ಹೆಚ್.ಸಿ. ಮತ್ತು ಪುಷ್ಪ ಬಿ. ರಾವ್ ಉಪಸ್ಥಿತರಿದ್ದರು.



## ತೀರಾ ಅಗತ್ಯವಿದ್ದರೆ ಕೊಳವೆ ಬಾವಿ ಕೊರೆಸಿ: ಈಶ್ವರ ಖಂಡ್ರೆ

ಬೆಂಗಳೂರು



ರಾಜ್ಯದಲ್ಲಿ ಕುಡಿಯುವ ನೀರು ಪೂರೈಕೆಗೆ 341 ಕೋಟಿ ರೂ. ಲಭ್ಯವಿದ್ದು, ಹಣಕಾಸಿನ ಕೊರತೆ ಇಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಈ ವೇಳೆ ವಿಕಾಸ ಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮೀಣ ಕುಡಿಯುವ ನೀರು ಪೂರೈಕೆಗೆ 117 ಕೋಟಿ ರೂ.ಗಳನ್ನು ಮುಂಗಡವಾಗಿ ಬಿಡುಗಡೆ ಮಾಡಲಾಗಿದೆ. ಇದರ ಜೊತೆಗೆ ಮುಖ್ಯಮಂತ್ರಿಗಳು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ. ಘೋಷಿಸಿದ್ದು ನೀರು ಪೂರೈಕೆಗೆ ಹಣದ ಕೊರತೆ ಇಲ್ಲ ಎಂದರು.

ಸಾಂಪ್ರದಾಯಿಕ ಜಲ ಮೂಲ ಬತ್ತಿ ಹೋಗಿರುವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನೀರು ಪೂರೈಕೆಗೆ ತೊಡಕಾಗದಂತೆ ಪರ್ಯಾಯ ಜಲ ಮೂಲ ಗುರುತಿಸಲು, ಖಾಸಗಿ ಕೊಳವೆಬಾವಿ, ತೆರೆದ ಬಾವಿ ಬಾಡಿಗೆಗೆ ಪಡೆದು, ನೀರು ಪರೀಕ್ಷಿಸಿ, ಟ್ಯಾಂಕರ್ ಮೂಲಕ ನೀರು ಪೂರೈಸಲು ಸ್ಪಷ್ಟ ಸೂಚನೆ ನೀಡಲಾಗಿದೆ. ಅಧಿಕಾರಿಗಳು ಜನರ ಸಂಕಷ್ಟ ಅರಿತು ಕಾರ್ಯ ನಿರ್ವಹಿಸಬೇಕು ಎಂದರು. ತೀರಾ ಅನಿವಾರ್ಯವಿದ್ದಲ್ಲಿ ಮಾತ್ರ ಕೊಳವೆ ಬಾವಿ ಕೊರೆಸಿ, ಅದಕ್ಕೆ ಪಂಪ್ ಸೆಟ್ ಅಳವಡಿಸಿ, ವಿದ್ಯುತ್ ಸಂಪರ್ಕ ಕಲ್ಪಿಸಿ ಎಂದು ಈಶ್ವರ ಖಂಡ್ರೆ ನಿರ್ದೇಶನ ನೀಡಿದರು.

## 36 ವೀರಶೈವ ಲಿಂಗಾಯತ ಶಾಸಕರಿದ್ದು, ಪ್ರಾತಿನಿಧ್ಯ ಲಭಿಸುತ್ತದೆ: ಈಶ್ವರ ಖಂಡ್ರೆ

ಬೆಂಗಳೂರು



ಕಳೆದ ವಿಧಾನಸಭಾ ಚುನಾವಣೆಯಲ್ಲಿ 36 ವೀರಶೈವ ಲಿಂಗಾಯತ ಶಾಸಕರು ಗೆದ್ದಿದ್ದು, ಸಂಪುಟದಲ್ಲಿ ಸೂಕ್ತ ಪ್ರಾತಿನಿಧ್ಯ ಲಭಿಸಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ಲಿಂಗಾಯತ, ವೀರಶೈವರೂ ಸೇರಿದಂತೆ ಎಲ್ಲ ಸಮುದಾಯದವರೂ ಬೆಂಬಲ ನೀಡಿದ್ದಾರೆ. ಸರ್ವರಿಗೂ ಸಮಪಾಲು ಪಕ್ಷದ ಸಿದ್ಧಾಂತವಾಗಿದ್ದು ವರಿಷ್ಠರು, ಮುಖ್ಯಮಂತ್ರಿಗಳು ಸಂಪುಟ ವಿಸ್ತರಣೆಯಲ್ಲಿ ಸೂಕ್ತ ಪ್ರಾತಿನಿಧ್ಯ ನೀಡುವರೆಂದರು.

ಸಿದ್ದರಾಮಯ್ಯ ಮತ್ತೆ ಸ್ಪರ್ಧಿಸಲಿ:

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜಕೀಯ ನಿವೃತ್ತಿಯ ಮಾತನಾಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಈಶ್ವರ ಖಂಡ್ರೆ, ಅವರು ಮತ್ತೆ ಸ್ಪರ್ಧಿಸಬೇಕು, ಶಾಸಕರಾಗಿ ನಮ್ಮೆಲ್ಲರಿಗೂ ಮಾರ್ಗದರ್ಶನ ಮಾಡಬೇಕು ಎಂಬುದು ಕಾರ್ಯಕರ್ತರೆಲ್ಲರ ಆಶಯವಾಗಿದೆ ಎಂದರು.

## ಗಾಂಜಾ ಬೆಳೆದಿದ್ದ ವ್ಯಕ್ತಿಗೆ 2 ವರ್ಷ ಕಾರಾಗೃಹ, 50 ಸಾವಿರ ರೂ. ದಂಡ

ಕೋಲಾರ

ಅಕ್ರಮವಾಗಿ ಗಾಂಜಾ ಬೆಳೆದಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೋಲಾರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಜಮೀನಿನ ಮಾಲೀಕನಿಗೆ 2 ವರ್ಷಗಳ ಕಠಿಣ ಕಾರಾಗೃಹವಾಸ ಹಾಗೂ ರೂ. 50,000 ದಂಡ ವಿಧಿಸಿ ಮಹತ್ವದ ತೀರ್ಪು ನೀಡಿದೆ.

ಘಟನೆಯ ವಿವರ: ದಿನಾಂಕ 27-02-2026 ರಂದು ಮುಳಬಾಗಿಲು ತಾಲ್ಲೂಕಿನ ಅಬಕಾರಿ ಅಧಿಕಾರಿಗಳು ಹೈದಲಾಪುರ ಗ್ರಾಮದ ಸರ್ವೆ ನಂ 58/3 ರಲ್ಲಿರುವ ಕೋಳಿ ಫಾರ್ಮ್ ಹಿಂಭಾಗದಲ್ಲಿ ದಾಳಿ ನಡೆಸಿದ್ದರು. ಈ ವೇಳೆ ಅಕ್ರಮವಾಗಿ ಬೆಳೆಸಲಾಗಿದ್ದ 09 ಗಾಂಜಾ ಗಿಡಗಳನ್ನು ಪತ್ತೆ ಹಚ್ಚಲಾಗಿತ್ತು. ಸ್ಥಳದಲ್ಲಿದ್ದ 1ನೇ ಆರೋಪಿಯಾದ ಮಾರಪ್ಪ ಅಲಿಯಾಸ್ ಮಾರ್ಕೊಂಡಪ್ಪ ಎಂಬಾತನನ್ನು ದಸ್ತಗಿರಿ ಮಾಡಿ, ಅಬಕಾರಿ ಉಪ ನಿರೀಕ್ಷಕರಾದ ಪುಷ್ಪ.ಬಿ ರವರು ಪ್ರಕರಣ ದಾಖಲಿಸಿದ್ದರು.

ತದನಂತರ ಅಬಕಾರಿ ನಿರೀಕ್ಷಕರಾದ ರಮಾಮಣಿ. ಎಂ ರವರು ಮುಂದಿನ ತನಿಖೆ ನಡೆಸಿ, ಜಮೀನಿನ ಮಾಲೀಕರಾದ ಹೆಚ್.ಎಂ ರಾಘವೇಂದ್ರ ರೆಡ್ಡಿ ರವರನ್ನು ಪ್ರಕರಣದ 2ನೇ ಆರೋಪಿ ಎಂದು ಪರಿಗಣಿಸಿ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿದ್ದರು.

ನ್ಯಾಯಾಲಯದ ತೀರ್ಪು:

ಸಾಕ್ಷ್ಯಾಧಾರಗಳ ಆಧಾರದ ಮೇಲೆ, ಎನ್.ಡಿ.ಪಿ.ಎಸ್ ಕಾಯ್ದೆ ಕಲಂ 20(ಜೆ)(ಐ)ರ ಅಡಿಯಲ್ಲಿನ ಅಪರಾಧಕ್ಕಾಗಿ ಜಮೀನಿನ ಮಾಲೀಕನಾದ 2ನೇ ಆರೋಪಿಗೆ 2 ವರ್ಷಗಳ ಕಠಿಣ ಕಾರಾಗೃಹವಾಸ ಹಾಗೂ 50,000 ರೂ. ದಂಡ ವಿಧಿಸಿ ನ್ಯಾಯಾಲಯವು ತೀರ್ಪು ನೀಡಿದೆ. ಆದರೆ ಸಮರ್ಪಕ ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ 1ನೇ ಆರೋಪಿಯನ್ನು ಬಿಡುಗಡೆಗೊಳಿಸಲಾಗಿದೆ. ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಸಾರ್ವಜನಿಕ ಅಭಿಯೋಜಕ ಮಾಧವ ಪದ್ಮನಾಭ ರವರು ವಾದ ಮಂಡಿಸಿದ್ದರು.

## ವಿಜೃಂಭಣೆಯಿಂದ ನಡೆದ ಸಂಭ್ರಮದ ಭೂತ ನೆರಿಗೆ

ದೊಡ್ಡಬಳ್ಳಾಪುರ

ತಾಲೂಕಿನ ತೂಬಗೆರೆ ಗ್ರಾಮದಲ್ಲಿ 600 ವರ್ಷಗಳ ಇತಿಹಾಸ ಹೊಂದಿರುವ ಸಾಂಪ್ರದಾಯಿಕ ಭೂತನೆರಿಗೆ ಹಬ್ಬ ವಿಜೃಂಭಣೆಯಿಂದ ನಡೆಯಿತು. ಹಬ್ಬದ ಅಂಗವಾಗಿ ಕೆಂಚಣ್ಣ ಹಾಗೂ ಕರಿಯಣ್ಣ ವೇಷಧಾರಿಗಳು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ್ದು, ಅವರ ಆವೇಶ ಭರಿತ ನೃತ್ಯ ಮತ್ತು ಸಂಚಾರವನ್ನು ಕಣ್ತುಂಬಿಕೊಳ್ಳಲು ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಭಕ್ತರು ಹಾಗೂ ಸಾರ್ವಜನಿಕರು ಆಗಮಿಸಿದ್ದರು.

ಪಾಳ್ಯ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಆರಂಭವಾದ ಆಚರಣೆ ಬಳಿಕ ಗ್ರಾಮದ ವಿವಿಧ ಬೀದಿಗಳಲ್ಲಿ ಸಂಚರಿಸಿ ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ ಸಮಾಪ್ತಿಯಾಯಿತು. ಕೆಂಚಣ್ಣ ಮತ್ತು ಕರಿಯಣ್ಣ ವೇಷಧಾರಿಗಳು ಕೈಯಲ್ಲಿ ಖಡ್ಗ ಹಾಗೂ ಗುರಾಣಿ ಹಿಡಿದು ಸಂಚರಿಸಿದ್ದು ಹಬ್ಬದ ಪ್ರಮುಖ ಆಕರ್ಷಣೆಯಾಗಿತ್ತು. ದೇವಸ್ಥಾನದಲ್ಲಿ ಮಂತ್ರೋಚ್ಚಾರಣೆ ಬಳಿಕ ವೇಷಧಾರಿಗಳ ಮೇಲೆ ದೇವತಾ ಆವಾಹನೆ ನಡೆಯುತ್ತದೆ ಎಂಬುದು ಸ್ಥಳೀಯರ ನಂಬಿಕೆ. ಆವಾಹನೆಯ ನಂತರ ಅವರು ಆವೇಶದಿಂದ ಗ್ರಾಮದ ಬೀದಿಗಳಲ್ಲಿ ಸಂಚರಿಸುತ್ತಾರೆ. ಹಸಿವು ತಣಿಸುವ ಸಂಕೇತವಾಗಿ ಹಲಸು, ಬಾಳೆಹಣ್ಣಿನ ರಸಾಯನ ಹಾಗೂ



ಕೋಳಿಯನ್ನು ಸಮರ್ಪಿಸುವ ಸಂಪ್ರದಾಯವೂ ನಡೆಯಿತು. ಯುವಕರು ವೇಷಧಾರಿಗಳನ್ನು ಹುರಿದುಂಬಿಸಿ ಸಂಭ್ರಮಿಸಿದರೆ, ಮಹಿಳೆಯರು ಹಾಗೂ ಹಿರಿಯರು ದೂರದಿಂದಲೇ ಈ ವಿಶಿಷ್ಟ ಆಚರಣೆಯನ್ನು ವೀಕ್ಷಿಸಿದರು.

ಭೂತನೆರಿಗೆ ಹಬ್ಬಕ್ಕೆ ಸುಮಾರು 600 ವರ್ಷಗಳ ಇತಿಹಾಸವಿದೆ. ಪ್ರತಿ ವರ್ಷ ಆಷಾಢ ಮಾಸದ ಏಕಾದಶಿಯ ಮರುದಿನವಾದ ದ್ವಾದಶಿಯಂದು ಈ ಆಚರಣೆಯನ್ನು ನಡೆಸಿಕೊಂಡು ಬರಲಾಗುತ್ತಿದೆ. ವಿಷ್ಣುವಿನ ದ್ವಾರಪಾಲಕರಾದ ಜಯ-ವಿಜಯರು ಶಾಪದ ಪರಿಣಾಮವಾಗಿ ಕಲಿಯುಗದಲ್ಲಿ ಕರಿಯಣ್ಣ ಮತ್ತು ಕೆಂಚಣ್ಣರ ರೂಪದಲ್ಲಿ ಭೂಲೋಕಕ್ಕೆ ಬಂದರು ಎಂಬ ಪೌರಾಣಿಕ ನಂಬಿಕೆ ಈ ಹಬ್ಬದ ಹಿನ್ನೆಲೆಯಾಗಿದೆ.

ಕರಿಯಣ್ಣ ಹಾಗೂ ಕೆಂಚಣ್ಣ ವೇಷಧಾರಿಗಳು ಮನೆಗೆ ಬಂದರೆ ದುಷ್ಟಶಕ್ತಿಗಳು ದೂರವಾಗುತ್ತವೆ ಎಂಬ ನಂಬಿಕೆ ಗ್ರಾಮಸ್ಥರಲ್ಲಿ ಇಂದಿಗೂ ಜೀವಂತವಾಗಿದೆ. ಈ ವಿಶಿಷ್ಟ ಸಂಪ್ರದಾಯವನ್ನು ಕಣ್ತುಂಬಿಕೊಳ್ಳಲು ಪ್ರತಿವರ್ಷ ಸಾವಿರಾರು ಜನರು ತೂಬಗೆರೆ ಗ್ರಾಮಕ್ಕೆ ಆಗಮಿಸುತ್ತಿರುವುದು ವಿಶೇಷ

## 29ಕ್ಕೆ ತಿರುವೆಂಗಡ ಮುಡಯನ್ ದೇವಾಲಯದಲ್ಲಿ ಪೌರ್ಣಮಿ ಪೂಜೆ

ಕೆಜಿಎಫ್



ನಗರದ ಕೊರಮಂಡಲ್ ಬಡಾವಣೆಯ ಸ್ವಾಮಿನಾಥಪುರಂ ವೋಟ್ ಲೈನ್ ಪ್ರದೇಶದಲ್ಲಿ ನೆಲೆಸಿರುವ ಐತಿಹಾಸಿಕ ತಿರುವೆಂಗಡ ಮುಡಯನ್ ದೇವಾಲಯದಲ್ಲಿ ಇದೇ 29ರ ಬುಧವಾರ, ಪೌರ್ಣಮಿ ಪೂಜಾ ಮಹೋತ್ಸವವನ್ನು ಭಕ್ತಿಭಾವದಿಂದ ಆಚರಿಸಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 7 ಗಂಟೆಯಿಂದ ಸುಪ್ರಭಾತ ಸೇವೆ, ವಿಷ್ಣುಸಹಸ್ರನಾಮ ಪಠಣ, ದಿವ್ಯಪ್ರಬಂಧ ಸೇವಾಕಾಲಂ, ವಿಶ್ವಕ್ಸೇನ ಆರಾಧನೆ, ಮಹಾ ಲಕ್ಷ್ಮೀ ನಾರಾಯಣ ಹೋಮ, ಸತ್ಯನಾರಾಯಣ ಪೂಜೆ, ಹಾಗೂ ಮಹಾಮಂಗಳಾರತಿ ಮತ್ತು ಸತ್ರುಮರೈ ಸೇವೆಗಳು ನಡೆಯಲಿವೆ. ಮಧ್ಯಾಹ್ನ ಭಕ್ತರಿಗೆ ಅನ್ನದಾಸೋಹ ವ್ಯವಸ್ಥೆ ಮಾಡಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಪುಣ್ಯಕಾರ್ಯಗಳಲ್ಲಿ ಪಾಲ್ಗೊಳ್ಳಬೇಕೆಂದು ದೇವಾಲಯದ ಧರ್ಮಾಧಿಕಾರಿ ಕೆ. ಮಹೇಂದ್ರನ್ ಹಾಗೂ ಆಡಳಿತ ಮಂಡಳಿಯ ಸದಸ್ಯರು ಕೋರಿದ್ದಾರೆ.

## ತಜ್ಞ ವೈದ್ಯರ ಹುದ್ದೆಗಾಗಿ ಅರ್ಜಿ ಆಹ್ವಾನ

ಕೋಲಾರ

ಜಿಲ್ಲಾ ಆಯುಷ್ ಕಛೇರಿ ವ್ಯಾಪ್ತಿಯಲ್ಲಿ ಬರುವ ಕೇಂದ್ರ ಪುರಸ್ಕೃತ ಯೋಜನೆಯಡಿಯಲ್ಲಿ ಮೇಲ್ದರ್ಜೆಗೇರಿಸಲಾದ ಆಯುಷ್ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಮಾನ್ಯ ಜಿಲ್ಲಾಧಿಕಾರಿಗಳ ಅಂತರ್ಜಾಲ https://kolar.nic.in/en/notice_category/recruitments/ ರಲ್ಲಿ ಪ್ರಕಟಿಸಲಾಗಿದೆ. ಅದರಂತೆ ಅರ್ಜಿ ಸಲ್ಲಿಸಬಹುದೆಂದು ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಲೆ ಬಳಿ ತಂಬಾಕು ಮಾರಿದರೆ ಭಾರಿ ದಂಡ: ಎಚ್ಚರ

ಮಾಲೂರು

ಶಾಲಾ ಕಾಂಪೌಂಡ್ 100 ಮೀಟರ್‌ಗಳ ಅಂತರದಲ್ಲಿ ಯಾವುದೇ ಅಂಗಡಿಗಳಲ್ಲಿ ಬಿಡಿ ಸಿಗರೇಟು ಗುಟ್ಕಾ ತಂಬಾಕು ಪದಾರ್ಥಗಳು ಮಾರಾಟ ಮಾಡುವುದು ಕಂಡು ಬಂದರೆ cotpa ಕಾಯ್ದೆ ಅನ್ವಯ ಪ್ರಕರಣ ದಾಖಲಿಸಿಕೊಂಡು ದಂಡ ವಿಧಿಸುವದಾಗಿ ನಗರಸಭೆಯ ಪೌರಾಯುಕ್ತ ಎಂಎಸ್ ಮಹದೇವ್ ಎಚ್ಚರಿಸಿದ್ದಾರೆ.

ಅವರು ನಗರದ ರೈಲ್ವೆ ನಿಲ್ದಾಣದ ರಸ್ತೆಯ ಬಿಜಿಎಸ್ ಶಾಲೆಯ ಬಳಿ 100 ಮೀಟರ್ ಅಂತರದಲ್ಲಿ ಗೂಡಂಗಡಿಗಳಲ್ಲಿ ಬಿಡಿ ಸಿಗರೇಟ್ ತಂಬಾಕು ಪದಾರ್ಥಗಳು ಮಾರಾಟ ಮಾಡುತ್ತಿರುವ ಹಿನ್ನೆಲೆಯಲ್ಲಿ ನಗರ ಸಭೆಯ ಅಧಿಕಾರಿಗಳೊಂದಿಗೆ ದಾಳಿ ನಡೆಸಿ ವಶಪಡಿಸಿಕೊಂಡು ಮಾತನಾಡಿದರು.

ನ್ಯಾಯಾಲಯ ಹಾಗೂ ಸರ್ಕಾರವು ಶಾಲಾ ಆವರಣದ 100 ಮೀಟರ್ ವ್ಯಾಪ್ತಿಯೊಳಗೆ ಯಾವುದೇ ಅಂಗಡಿಗಳಲ್ಲಿ ಬಿಡಿ ಸಿಗರೇಟು ಹಾಗೂ ಗುಟ್ಕಾ ತಂಬಾಕು ಪದಾರ್ಥಗಳನ್ನು ಮಾರಾಟ ಮಾಡುವಂತಿಲ್ಲ ಎಂದು ಕಾಯ್ದೆಯನ್ನು ರೂಪಿಸಿದೆ ಆದರೂ ಸಹ ಕೆಲವರು ಶಾಲಾ ಆವರಣದ 100 ಮೀಟರ್ ಒಳಗೆ ಗೂಡ ಅಂಗಡಿಗಳಲ್ಲಿ ಬಿಡಿ ಸಿಗರೇಟ್ ಗುಟ್ಕಾ ತಂಬಾಕು ಪದಾರ್ಥಗಳನ್ನು ಮಾರಾಟ ಮಾಡುತ್ತಿರುವುದು ಇದೊಂದು ಕಾನೂನು ಬಾಹಿರ ಚಟುವಟಿಕೆಯಾಗಿರುತ್ತದೆ. ಇಲ್ಲಿನ ರೈಲ್ವೆ ನಿಲ್ದಾಣದ ಬಿಜಿಎಸ್ ರಸ್ತೆಯ ಬಳಿ ಶಾಲಾ ಕಾಂಪೌಂಡ್ ಪಕ್ಕದಲ್ಲಿಯೇ 100 ಮೀಟರ್ ಒಳಗೆ ಕಳೆದ ಹತ್ತು ವರ್ಷಗಳಿಂದ ಮೂರು ಗೂಡ ಅಂಗಡಿಗಳಲ್ಲಿ ಬಿಡಿ ಸಿಗರೇಟು ತಂಬಾಕು ಗುಟ್ಕಾ ಮಾರಾಟ ಮಾಡುತ್ತಿದ್ದು ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ cotpa ಕಾಯ್ದೆ ಅನ್ವಯ ದಾಳಿ ನಡೆಸಿ ಸುಮಾರು 25 ಸಾವಿರ ಮೌಲ್ಯದ ಬೆಲೆಬಾಳುವ ಬಿಡಿ ಸಿಗರೇಟು ಹಾಗೂ ಗುಟ್ಕಾ ಪದಾರ್ಥಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿ ವಶಪಡಿಸಿಕೊಂಡ ಬಿಡಿ ಸಿಗರೇಟ್ ಗುಟ್ಕಾ ಪದಾರ್ಥಗಳನ್ನು ನಾಶಪಡಿಸಲಾಗಿದೆ, ಶಾಲಾ ಆವರಣದ 100 ಮೀಟರ್ ವ್ಯಾಪ್ತಿಯ ಒಳಗೆ ಬಿಡಿಸಿಗರೇಟು ಗುಟ್ಕಾ ಪದಾರ್ಥಗಳ ಮಾರಾಟವನ್ನು ನಿಷೇಧಿಸಲಾಗಿದ್ದು ಯಾವುದೇ ಗೂಡಂಗಡಿಯಲ್ಲಿ ಮಾರಾಟ ಮಾಡುತ್ತಿದ್ದರೆ ದಾಳಿ ನಡೆಸಿ ವಶಪಡಿಸಿಕೊಂಡು ನಾಶಪಡಿಸಿ ಅವರ ಮೇಲೆ ಪ್ರಕರಣ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕಂದಾಯಾಧಿಕಾರಿ ಚಂದ್ರು, ಕಂದಾಯ ನಿರೀಕ್ಷಕರಾದ ಅನಿಲ್, ಅನಿಲ್ ಕುಮಾರ್, ಇನ್ನಿತರರು ಹಾಜರಿದ್ದರು.

## ಗಾಳಿ ಪಟ ಕಲೆಗೆ ಉತ್ತೇಜನ ಅಗತ್ಯ: ಶಿವಶಂಕರ್

ದೊಡ್ಡಬಳ್ಳಾಪುರ

ನಮ್ಮ ನಾಡಿನ ಸಂಸ್ಕೃತಿ ನಮ್ಮ ಕ್ರೀಡಾ ಸಮಿತಿ ವತಿಯಿಂದ 10ನೇ ವಾರ್ಷಿಕೋತ್ಸವದ ಅಂಗವಾಗಿ ನಗರದ ಭುವನೇಶ್ವರಿ ನಗರದ ಎನ್. ಮುನಿನಂಜಪ್ಪ ಅವರ ಜಮೀನಿನಲ್ಲಿ ನಡೆದ ಗಾಳಿಪಟ ಸ್ಪರ್ಧೆಯಲ್ಲಿ ಪುರುಷರು, ಮಕ್ಕಳು, ತಂಡಗಳು ಭಾಗವಹಿಸಿ, ಹಾರಿಬಿಟ್ಟಿದ್ದ ವಿವಿಧ ನಮೂನೆಯ ಚಿತ್ತಾಕರ್ಷಕ ಪಟಗಳು ಬಾನಂಗಳದಲ್ಲಿ ಹಾರಾಡಿ ಗಮನ ಸೆಳೆದವು.

ಮಕ್ಕಳೊಂದಿಗೆ ಆಗಮಿಸಿದ್ದ ಪೋಷಕರು ಗಾಳಿಪಟಗಳನ್ನು ವೀಕ್ಷಿಸುವುದರೊಂದಿಗೆ ತಾವು ತಂದಿದ್ದ ಸಣ್ಣ ಪಟಗಳನ್ನು ಹಾರಿಸಿ ಖುಷಿಪಟ್ಟರು.

ಗಾಳಿಪಟ ಹಾರಿಸುವ ಮೂಲಕ ಸ್ಪರ್ಧೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ನಗರಸಭಾ ಸದಸ್ಯ ಎಚ್. ಎಸ್.ಶಿವಶಂಕರ್, ದೊಡ್ಡಬಳ್ಳಾಪುರ ಗಾಳಿಪಟ ಕಲೆಗೆ ಹೆಸರಾಗಿದೆ. ಗಾಳಿಪಟ ಸ್ಪರ್ಧೆ ಹಾಗೂ ಉತ್ಸವಗಳ ಆಯೋಜನೆಯಿಂದ ಗಾಳಿಪಟ ಕಲೆಗೆ ಉತ್ತೇಜನ ದೊರೆಯುತ್ತದೆ. ಇಲ್ಲಿನ ಗಾಳಿಪಟ ಕಲಾವಿದರು, ರಾಷ್ಟ್ರೀಯ, ಅಂತರಾಷ್ಟ್ರೀಯ ಗಾಳಿಪಟ ಉತ್ಸವಗಳಲ್ಲಿ ಭಾಗವಹಿಸಿ, ಊರಿಗೆ ಕೀರ್ತಿ ತಂದಿದ್ದಾರೆ. ಗಾಳಿಪಟ ಹಾರಿಸುವ ಕಲೆಯನ್ನು ಉಳಿಸಿ, ಬೆಳೆಸಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಆಸಕ್ತಿ ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರಸಭೆ ನಾಮಿನಿ ಸದಸ್ಯ ಎಚ್.ವಿ.ಅಖಿಲೇಶ್, ಜಿಲ್ಲಾ ಕಾಂಗ್ರೆಸ್ ಜಿಲ್ಲಾ ಯುವ ಘಟಕದ ಅಧ್ಯಕ್ಷ ಶರತ್ ಪಟೇಲ್ ,ನಮ್ಮ ಸಂಸ್ಕೃತಿ ನಮ್ಮ ಕ್ರೀಡಾ ಸಮಿತಿ ಅಧ್ಯಕ್ಷ ಎಂ.ಎಸ್. ರಾಮದಾಸ್, ಕಾರ್ಯದರ್ಶಿ ಶಿವಶಂಕರ್, ತಾಲೂಕು ಕಸಾಪ ಮಾಜಿ ಅಧ್ಯಕ್ಷ ಡಿ.ಶ್ರೀಕಾಂತ, ದೇವಾಂಗ ಮಂಡಲಿ ನಿರ್ದೇಶಕ ಎನ್.ಜಿ.ಕುಮಾರ್ ಮುಖಂಡರಾದ ಚೌಡಪ್ಪ, ಮೊದಲಾದವರು ಭಾಗವಹಿಸಿದ್ದರು.

## 31ರಂದು ಬೃಹತ್ ರಕ್ತದಾನ ಶಿಬಿರ

ಶಿಡ್ಲಘಟ್ಟ

ಪತ್ರಿಕಾ ದಿನಾಚರಣೆಯ ಅಂಗವಾಗಿ ಶಿಡ್ಲಘಟ್ಟ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಜುಲೈ 31ರಂದು ಬೃಹತ್ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ ಎಂದು ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎ. ಶಶಿಕುಮಾರ್ ತಿಳಿಸಿದರು.

ನಗರದ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜಮುಖಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವ ಉದ್ದೇಶದಿಂದ ಈ ಬಾರಿ ಪತ್ರಿಕಾ ದಿನಾಚರಣೆಯನ್ನು ರಕ್ತದಾನ ಶಿಬಿರದ ಮೂಲಕ ಅರ್ಥಪೂರ್ಣವಾಗಿ ಆಚರಿಸಲು ಸಂಘ ನಿರ್ಧರಿಸಿದೆ ಎಂದರು.

ನಗರದ ಚಿಂತಾಮಣಿ ರಸ್ತೆಯ ಶ್ರೀರಾಮ ಪ್ಯಾಲೇಸ್ ಸಭಾಂಗಣದಲ್ಲಿ ಜುಲೈ 31ರಂದು ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರೆಗೆ ರಕ್ತದಾನ ಶಿಬಿರ ನಡೆಯಲಿದೆ. ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ವೈದ್ಯಕೀಯ ತಂಡದ ಮೇಲ್ವಿಚಾರಣೆಯಲ್ಲಿ ರಕ್ತ ಸಂಗ್ರಹಣೆ ಪ್ರಕ್ರಿಯೆ ನಡೆಯಲಿದೆ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ವಿವಿಧ ಆಸ್ಪತ್ರೆಗಳಲ್ಲಿ ರಕ್ತದ ಕೊರತೆ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಈ ಶಿಬಿರವನ್ನು ಆಯೋಜಿಸಲಾಗುತ್ತಿದೆ. ಒಬ್ಬ ವ್ಯಕ್ತಿಯ ರಕ್ತದಾನವು ಹಲವು ಜೀವಗಳನ್ನು ಉಳಿಸಬಲ್ಲದು ಎಂಬ ಸಂದೇಶವನ್ನು ಸಮಾಜಕ್ಕೆ ತಲುಪಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಈ ಸಮಾಜಮುಖಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ತಾಲೂಕಿನ ಎಲ್ಲಾ ನಾಗರಿಕರು ಸಹಕರಿಸಬೇಕು. ರಕ್ತದಾನದ ಮೂಲಕ ಅಗತ್ಯವಿರುವ ರೋಗಿಗಳ ಜೀವ ಉಳಿಸುವ ಮಹತ್ವದ ಕಾರ್ಯದಲ್ಲಿ ಪಾಲ್ಗೊಳ್ಳುವಂತೆ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಎಲ್ಲರಿಗೂ ಮನವಿ ಮಾಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಎಸ್. ಮಂಜುನಾಥ್, ಜಗದೀಶ್ ಬಾಬು, ವೆಂಕಟೇಶ್, ಮುನೇಗೌಡ, ಛಾಯಾ ರಮೇಶ್, ಕರಗಪ್ಪ, ನಂದಿ ರಾಜೇಶ್, ನರಸಿಂಹಗೌಡ, ಲೋಕೇಶ್, ಶಿವಕುಮಾರ್, ರಾಮ್‌ದಾಸ್, ಇನ್ನಿತರರು ಉಪಸ್ಥಿತರಿದ್ದರು.


## ಕಾರ್ಯಕರ್ತರ ಅಭಿಪ್ರಾಯದ ಮೇರೆಗೆ ಜಿಲ್ಲಾಧ್ಯಕ್ಷರ ನೇಮಕ

ಚಿಕ್ಕಬಳ್ಳಾಪುರ

ಕಾಂಗ್ರೆಸ್ ಪಕ್ಷದ ಹೈಕಮಾಂಡ್ ತೀರ್ಮಾನದಂತೆ 'ಸಂಘಟನೆ ಸೃಜನ್ ಅಭಿಯಾನ' ದಡಿ ರಾಜ್ಯದ 34 ಜಿಲ್ಲೆಗಳಿಗೆ ವೀಕ್ಷಕರನ್ನು ನೇಮಿಸಲಾಗಿದೆ .ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ವರಿಷ್ಠರ ಆದೇಶದನುಸಾರ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿ ನಾಯಕರನ್ನು ಆಯ್ಕೆ ಮಾಡಲು ನಿರ್ಧರಿಸಿದೆ ಎಂದು ಕೆಪಿಸಿಸಿ ಉಪಾಧ್ಯಕ್ಷ ವಿ.ಆರ್ ಸುದರ್ಶನ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಆಯೋಜಿಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದ 34 ಜಿಲ್ಲೆಗಳಲ್ಲಿ ಬ್ಲಾಕ್ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆಗಾಗಿ ಎಐಸಿಸಿ ವೀಕ್ಷಕರನ್ನು ನಿಯೋಜಿಸಿ ಅಭಿಪ್ರಾಯ ಸಂಗ್ರಹಣೆ ಮಾಡುವ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತರಾಗಿದ್ದು, ಅದರ ಭಾಗವಾಗಿಯೇ ಚಿಕ್ಕಬಳ್ಳಾಪುರ ಜಿಲ್ಲೆಗೆ ಆಗಮಿಸಿ ಈ ಪ್ರಕ್ರಿಯೆ ಮಾಡುತ್ತಿದ್ದೇವೆ ಎಂದರು.

ಎಐಸಿಸಿ ವೀಕ್ಷಕರಾದ ಪಾಲಾಕ್ ವರ್ಮಾ, ಕವಿತಾರೆಡ್ಡಿ, ಜೊತೆಗೂಡಿ ಎಲ್ಲ ಐದೂ ವಿಧಾನಸಭಾ ಕ್ಷೇತ್ರಗಳ ಶಾಸಕರು, ಲೋಕಸಭಾ ಸದಸ್ಯರು ಗಳ,ಬ್ಲಾಕ್ ಮಟ್ಟದ ಅಧ್ಯಕ್ಷರು, ಪದಾಧಿಕಾರಿಗಳು, ಕಾರ್ಯಕರ್ತರ ಪಕ್ಷದ ಹಿತೈಶಿಗಳೆಲ್ಲರ ಅಭಿಪ್ರಾಯ ಸಂಗ್ರಹಿಸಿ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಲಾಗುತ್ತಿದೆ ಎಂದು ತಿಳಿಸಿದ ಅವರು, ಮುಂಬರುವ 2029 ರ ಲೋಕಸಭಾ ಹಾಗೂ2028 ವಿಧಾನಸಭೆ ಚುನಾವಣಾ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಬಲವರ್ಧನೆಗೆ ಮುಂದಾಗಿದ್ದು, ಹಳೇ ಪದ್ಧತಿಯ ಬದಲಿಗೆ ಕಾರ್ಯಕರ್ತರ ಮುಕ್ತ ಅಭಿಪ್ರಾಯದ ಆಧಾರದ ಮೇಲೆ ನಾಯಕರನ್ನು ಆಯ್ಕೆ ಮಾಡುವ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದರು.



ರಾಜ್ಯದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ನೇತೃತ್ವದಲ್ಲಿ ಪಕ್ಷದ ಸಂಘಟನೆ ಬಲಗೊಳ್ಳಲಿದೆ ಎಂದು ಅಭಿಪ್ರಾಯಪಟ್ಟ ಸುದರ್ಶನ್ ಅವರು, ಎಸ್ಐಆರ್ ಕುರಿತು ಪ್ರಸ್ತಾಪಿಸಿ ರಾಜ್ಯದಲ್ಲಿ ಅನಗತ್ಯವಾಗಿ ಚರ್ಚಾ ವಸ್ತುವನ್ನಾಗಿಸಿರುವ ಭಾರತೀಯ ಜನತಾಪಕ್ಷದ ಮುಖಂಡರು ಮತದಾರರ ಪಟ್ಟಿ ಪರಿಷ್ಕರಣೆ ಸರಾಗವಾಗಿ ನಡೆಯಲು ಬಿಡದೆ ಮತದಾರರಲ್ಲಿ ಅನಗತ್ಯ ಗೊಂದಲ ಮೂಡಿಸುತ್ತಿರುವುದು ಖಂಡನೀಯ ಎಂದರು.

ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಎಐಸಿಸಿ ವೀಕ್ಷಕರಾದ ಪಾಲಾಕ್ ವರ್ಮಾ, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸ್ಥಾನಕ್ಕೆ ಈಗಾಗಲೇ 6 ಅಭ್ಯರ್ಥಿಗಳ ಹೆಸರುಗಳನ್ನು ಅಂತಿಮ ಗೊಳಿಸಲಾಗಿದ್ದು, ಅವರಲ್ಲಿ ಸಮರ್ಥರಾದ ಒಬ್ಬರನ್ನು ಆಯ್ಕೆ ಮಾಡಿ ಪಕ್ಷದ ಹೈಕಮಾಂಡ್ ಗಮನಕ್ಕೆ ತರಲಾಗುವುದೆಂದರು.

ಜೊತೆಗೆ ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಇನ್ನರೆಡು ಮೂರು ದಿನಗಳಲ್ಲಿ ಪ್ರವಾಸ ಮಾಡಿ ಪಾರದರ್ಶಕವಾಗಿ ಜಿಲ್ಲಾಧ್ಯಕ್ಷರ ಆಯ್ಕೆ ಪ್ರಕ್ರಿಯ ಪೂರ್ಣಗೊಳಿಸಲಾಗುವುದೆಂದರು. ಗೌರಿಬಿದನೂರು ಕ್ಷೇತ್ರದ ಮಾಜಿ ಶಾಸಕ ಎಚ್. ಎನ್ ಶಿವಶಂಕರರೆಡ್ಡಿ, ಕಾಂಗ್ರೆಸ್ ಮುಖಂಡರುಗಳಾದ ರಕ್ಷಾರಾಮಯ್ಯಾ, ಶಿಡ್ಲಘಟ್ಟದ ರಾಜೀವ್ ಗೌಡ ಯಲುವಹಳ್ಳಿ ರಮೇಶ್ ಸೇರಿದಂತೆ ಇತರರು ಗೋಷ್ಠಿಯಲ್ಲಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy